
ಸುದ್ದಿಗಳ ಹೊನಲು

# ಸಂಜೆ ಮುಗಿಲು

ವೇಣು ಸಾರಥ್ಯದಲ್ಲಿ...

ಸಂಪುಟ: 21, ಸಂಚಿಕೆ: 311, ಪುಟಗಳು: 8, ಭಾನುವಾರ, 18 ಆಗಸ್ಟ್ 2024 RNI NO. KARKAN/2002/08054

epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3


ಸುಭಾಷಿತ

ಯಾರು ಬದಲಾಗಲು ಇಚ್ಛಿಸುವುದಿಲ್ಲವೋ ಅಂತಹವರನ್ನು ಅವರ ಪಾಡಿಗೆ ಬಿಟ್ಟುಬಿಡಿ, ಅವರು ನಿದ್ರೆ ಮಾಡಿಕೊಂಡೇ ಇರಲಿ.

। ರೂಮಿ

## ಪಂಚಾಂಗ

(ಭಾನುವಾರ 17, ಆಗಸ್ಟ್-2024)

- ಸಂವತ್ಸರ: ಕ್ರೋಧಿನಾಮ
- ಋತು: ವರ್ಷ
- ಅಯನ: ದಕ್ಷಿಣಾಯನ
- ಮಾಸ: ಶ್ರಾವಣ • ಪಕ್ಷ: ಶುಕ್ಲ
- ತಿಥಿ: ಚತುರ್ದಶಿ
- ನಕ್ಷತ್ರ: ಉತ್ತರಾಷಾಢ
- ರಾಹುಕಾಲ: 05:05 - 06:39
- ಗುಳಿಕಕಾಲ: 03:31 - 05:05
- ಯಮಗಂಡಕಾಲ: 12:23 - 01:57

## ಸಂಕ್ಷಿಪ್ತ ಸುದ್ದಿ

### ಮರ್ಸಿಡೀಸ್ ಕಾರು ಡಿಕ್ಕಿ ಹೊಡೆದು ಸೈಕಲ್ ಸವಾರ ಸಾವು, ಚಾಲಕ ಪರಾರಿ



**ದೆಹಲಿ:** ವೇಗವಾಗಿ ಬಂದ ಮರ್ಸಿಡೀಸ್ ಕಾರೊಂದು ಸೈಕಲ್ ಸವಾರನಿಗೆ ಡಿಕ್ಕಿ ಹೊಡೆದ ಪರಿಣಾಮ ಅವರು ಮೃತಪಟ್ಟಿರುವ ಘಟನೆ ದೆಹಲಿಯ ಆಶ್ರಮ ಪ್ರದೇಶದಲ್ಲಿ ನಡೆದಿದೆ. ಮೃತರನ್ನು ರಾಜೇಶ್ ಎಂದು ಪೊಲೀಸರು ಗುರುತಿಸಿದ್ದು, ದೆಹಲಿಯ ಆಗ್ನೇಯ ಪ್ರದೇಶದಲ್ಲಿ ಸೈಕಲ್ ನಲ್ಲಿ ಹೋಗುತ್ತಿದ್ದಾಗ ಅತಿವೇಗದಿಂದ ಬಂದ ವಾಹನವು ಹಿಂದಿನಿಂದ ಡಿಕ್ಕಿ ಹೊಡೆದಿದೆ.

ದುರದೃಷ್ಟವಶಾತ್ ರಾಜೇಶ್ ಸ್ಥಳದಲ್ಲೇ ಮೃತಪಟ್ಟರೆ, ಚಾಲಕ ಕಾರಿನೊಂದಿಗೆ ಪರಾರಿಯಾಗಿದ್ದಾನೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಎಫ್ಐಆರ್ ದಾಖಲಿಸಿಕೊಂಡಿದ್ದು, ಆರೋಪಿಗಳಿಗಾಗಿ ತೀವ್ರ ಶೋಧ ನಡೆಸುತ್ತಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಪುಟ 2

### ಸರ್ಕಾರಿ ಬಸ್, ಕಾರು ನಡುವೆ ಅಪಘಾತ; ನಾಲ್ವರ ಸಾವು



**ಗದಗ:** ಸರ್ಕಾರಿ ಬಸ್ ಹಾಗೂ ಕಾರು ನಡುವೆ ಭೀಕರ ಅಪಘಾತ ಸಂಭವಿಸಿದ್ದು ಘಟನೆಯಲ್ಲಿ ನಾಲ್ವರು ಮೃತಪಟ್ಟಿದ್ದಾರೆ. ಗದಗ ಜಿಲ್ಲೆ ನರಗುಂದ ತಾಲೂಕಿನ ಕೊಣ್ಣೂರ ಗ್ರಾಮದ ಹೊರವಲಯದಲ್ಲಿ ಭೀಕರ ರಸ್ತೆ ಅಪಘಾತ ಸಂಭವಿಸಿದ್ದು ಕಾರಿನಲ್ಲಿದ್ದ ಒಂದೇ ಕುಟುಂಬದ ನಾಲ್ವರು ಮೃತಪಟ್ಟಿದ್ದಾರೆ. ಹಾವೇರಿ ಮೂಲದ ರುದ್ರಪ್ಪ ಅಂಗಡಿ(55), ಪತ್ನಿ ರಾಜೇಶ್ವರಿ(45), ಮಗಳು ಐಶ್ವರ್ಯ (16), ಮಗ ವಿಜಯ(12) ಮೃತ ದುರ್ದೈವಿಗಳು.

ಪುಟ 2



dp
ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines



## ಮುಸ್ಲಿಮರಿಗೆ ಜಾತ್ಯತೀತ ನಾಗರಿಕ ಸಂಹಿತೆ ಸ್ವೀಕಾರಾರ್ಹವಲ್ಲ: ಮುಸ್ಲಿಂ ಮಂಡಳಿ

**ನವದೆಹಲಿ:** ಮುಸ್ಲಿಮರಿಗೆ ಏಕರೂಪ ಅಥವಾ ಜಾತ್ಯತೀತ ನಾಗರಿಕ ಸಂಹಿತೆ ಸ್ವೀಕಾರಾರ್ಹವಲ್ಲ. ಷರಿಯಾ ಕಾನೂನಿನೊಂದಿಗೆ ನಾವು ರಾಜಿ ಮಾಡಿಕೊಳ್ಳುವುದಿಲ್ಲ ಎಂದು ಅಖಿಲ ಭಾರತ ಮುಸ್ಲಿಂ ವೈಯಕ್ತಿಕ ಕಾನೂನು ಮಂಡಳಿ ಹೇಳಿದೆ.

ಪ್ರಧಾನ ಮಂತ್ರಿಗಳು ಜಾತ್ಯತೀತ ನಾಗರಿಕ ಸಂಹಿತೆಗಾಗಿ ಕರೆ ನೀಡಿರುವುದನ್ನು ಪರಿಗಣಿಸುತ್ತದೆ. ಆದರೆ ಧಾರ್ಮಿಕ ವೈಯಕ್ತಿಕ ಕಾನೂನುಗಳನ್ನು ಮೋಮುವಾದ ಎಂದು ಕರೆಯುವುದು ಅತ್ಯಂತ ಆಕ್ಷೇಪಾರ್ಹವಾಗಿದೆ ಎಂದು ಮಂಡಳಿ ತಿಳಿಸಿದೆ.

ಮುಸ್ಲಿಂ ವೈಯಕ್ತಿಕ ಕಾನೂನಿನೊಂದಿಗೆ ಎಂದಿಗೂ ನಾವು ರಾಜಿ ಮಾಡಿಕೊಳ್ಳುವುದಿಲ್ಲ.

ಪುಟ 2



### ನಾನ್ಯಾಕೆ ರಾಜೀನಾಮೆ ನೀಡಲಿ

## ರಾಜ್ಯಪಾಲರೇ ರಾಜೀನಾಮೆ ನೀಡಬೇಕು

**ಬೆಂಗಳೂರು:** ನಾನು ಯಾಕೆ ರಾಜೀನಾಮೆ ನೀಡಲಿ ನಡೆದುಕೊಂಡ ನಿರ್ಧಾರಕ್ಕೆ ರಾಜ್ಯಪಾಲರೇ ರಾಜೀನಾಮೆ ನೀಡಬೇಕೆಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ತುರ್ತು ಕ್ಯಾಬಿನೆಟ್ ಸಭೆಯ ಬಳಿಕ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೀಗೆ ಮಾಡುತ್ತಾರೆ ಎನ್ನುವುದು ನಮಗೆ ಮೊದಲೇ ಗೊತ್ತಿತ್ತು. ರಾಜಕೀಯವಾಗಿ ಬೀದಿಗೆ ಇಳಿದು ಹೋರಾಟ ಮಾಡುತ್ತೇವೆ. ರಾಜಕೀಯವಾಗಿ ನಮಗೆ ಯಾಕೆ ಹಿನ್ನಡೆ ಆಗುತ್ತದೆ ಎಂದು ಪ್ರಶ್ನಿಸಿದರು.

ಪುಟ 2



### ಕೋಲ್ಕತ್ತಾ ಅತ್ಯಾಚಾರ, ಕೊಲೆ ಪ್ರಕರಣ

# ಡೈರಿ ಬಗ್ಗೆ ಅನುಮಾನ

**ಕೋಲ್ಕತ್ತಾ:** ಕೋಲ್ಕತ್ತಾದ ಸರ್ಕಾರಿ ಆರ್‌ಜಿ ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಮಹಿಳಾ ವೈದ್ಯೆಯ ಅಮಾನುಷ ಅತ್ಯಾಚಾರ ಮತ್ತು ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಹಲವು ಪ್ರಶ್ನೆಗಳು ಎದ್ದಿವೆ. ಮೃತದೇಹದ ಬಳಿ ಬಿದ್ದಿರುವ ಡೈರಿ ಬಗ್ಗೆ ಅನುಮಾನ ಮೂಡಿದೆ, ಅದೇ ಪ್ರಮುಖ ಸಾಕ್ಷ್ಯವಾಗಬಹುದು ಎಂದು ಹೇಳಲಾಗುತ್ತಿದೆ.

ಈ ಡೈರಿಯ ಹಲವು ಪುಟಗಳು ಹರಿದಿದ್ದು, ಈ ಕಾರಣದಿಂದ ಡೈರಿಯ ಆ ಪುಟಗಳಲ್ಲಿ ಏನಾದರೂ ಗಹನ ರಹಸ್ಯ ಅಡಗಿದೆಯೇ, ಉದ್ದೇಶಪೂರ್ವಕವಾಗಿ ಹರಿದು ಹಾಕಲಾಗಿದೆಯೇ ಎಂಬ ಪ್ರಶ್ನೆ ಮೂಡಿದೆ. ಈ ಡೈರಿಯ ಹರಿದ ಪುಟಗಳು ಹಲವು ಅನುಮಾನಗಳನ್ನು ಹುಟ್ಟುಹಾಕುತ್ತಿದ್ದು, ತನಿಖೆ ನಡೆಯುತ್ತಿದೆ.

ವಾಸ್ತವವಾಗಿ ಕೋಲ್ಕತ್ತಾ ಪೊಲೀಸರು ಸಿಬಿಐಗೆ ಡೈರಿಯನ್ನು ಹಸ್ತಾಂತರಿಸಿದ್ದಾರೆ. ಮೂಲಗಳ ಪ್ರಕಾರ, ಮಹಿಳಾ ವೈದ್ಯೆಯ ಮೃತದೇಹದ ಬಳಿ ಈ ಡೈರಿ ಪತ್ತೆಯಾಗಿದೆ. ಈ ಡೈರಿಯ ಹಲವು ಪುಟಗಳು ಹರಿದಿವೆ ಎಂದು ಮೂಲಗಳು ತಿಳಿಸಿವೆ. ಸಾಮಾನ್ಯವಾಗಿ ಕರ್ತವ್ಯ ನಿರ್ವಹಿಸುವ ವೈದ್ಯರು ಡೈರಿಯಲ್ಲಿ ಔಷಧಿಗಳ ಹೆಸರು ಮತ್ತು ಇತರ ಪ್ರಮುಖ ವಿಷಯಗಳನ್ನು ಬರೆಯುತ್ತಾರೆ ಎಂದು ಹೇಳಲಾಗುತ್ತಿದೆ .




ಸಿಬಿಐ ಈ ಬಗ್ಗೆ ಜಾಗೃತವಾಗಿದೆ ಎಲ್ಲಾ ಕೋನಗಳಿಂದ ತನಿಖೆ ನಡೆಸುತ್ತಿದೆ. ಈ ಪ್ರಕರಣದಲ್ಲಿ ಬಂಧಿತರಾಗಿರುವ ಪ್ರಮುಖ ಆರೋಪಿ ಸಂಜಯ್ ರಾಯ್ ಅವರ ಮಾನಸಿಕ ವಿಶ್ಲೇಷಣೆಯನ್ನು ಸಿಬಿಐ ತಂಡ ಇಂದು ನಡೆಸಲಿದೆ. ಪ್ರಕರಣದಲ್ಲಿ ಆರ್‌ಜಿ ಕರ್‌ನ ಮಾಜಿ ಪ್ರಾಂಶುಪಾಲರನ್ನೂ ವಿಚಾರಣೆಗೆ ಒಳಪಡಿಸಲಾಗಿದೆ.

ಪುಟ 2

### ಬೆಂಗಳೂರಿನಲ್ಲಿ ಮಧ್ಯ ರಾತ್ರಿ ಯುವತಿಯ ಮೇಲೆ ಸಾಮೂಹಿಕ

# ಅತ್ಯಾಚಾರ

**ಬೆಂಗಳೂರು:** ಕೊಲ್ಕತ್ತಾದಲ್ಲಿ ವೈದ್ಯಕೀಯ ವಿದ್ಯಾರ್ಥಿಯ ಮೇಲೆ ಅಮಾನುಷವಾಗಿ ಹಲ್ಲೆ ನಡೆಸಿ ರೇಪ್ ಮಾಡಿ ಕೊಲೆ ಮಾಡಿರುವ ಘಟನೆ ತಲೆ ತಗ್ಗಿಸುವಂತೆ ಮಾಡಿದೆ. ವಿದ್ಯಾರ್ಥಿಯ ಕೊಲೆ ಖಂಡಿಸಿ ದೇಶದಾದ್ಯಂತ ಪ್ರತಿಭಟನೆಗಳು ನಡೆಯುತ್ತಿವೆ. ಪುಟ್ಟ ಮಕ್ಕಳು, ಯುವತಿಯರು, ಮಹಿಳೆಯರು, ಯುವಕರು ಸೇರಿದಂತೆ ಲಕ್ಷಾಂತರ ಮಂದಿ ಕತ್ತಲಲ್ಲಿ ಕ್ಯಾಂಡೆಲ್ ಹಿಡಿದು ಮಹಿಳೆಯರ ಸುರಕ್ಷತೆಗಾಗಿ ಪ್ರತಿಭಟನೆಗಳನ್ನು ನಡೆಸುತ್ತಿದ್ದಾರೆ. ಆದರೆ ಇದರ ನಡುವೆಯೇ ಬೆಂಗಳೂರಿನಲ್ಲಿ ಹೀನಾಯ ಕೃತ್ಯ ನಡೆದಿದೆ. ಆಟೋದಲ್ಲಿ ತೆರಳುತ್ತಿದ್ದ ಯುವತಿ ಮೇಲೆ ಗ್ಯಾಂಗ್ ರೇಪ್ ಆಗಿದೆ.



ಪುಟ 2

### ಶಿರೂರು ಗುಡ್ಡ ಕುಸಿತ ಸಂತ್ರಸ್ತರಿಗೆ ಮರೀಚಿಕೆಯಾಗಿಯೇ

## ಉಳಿದ ಉದ್ಯೋಗದ ಭರವಸೆ

**ಕಾರವಾರ:** ಅಂಕೋಲದ ಶಿರೂರಿನಲ್ಲಿ ಭೂಕುಸಿತವಾಗಿ ಒಂದು ತಿಂಗಳು ಕಳೆದಿದೆ. ಆದರೆ ಸಂತ್ರಸ್ತರಿಗೆ ಸರ್ಕಾರ ನೀಡಿದ್ದ ಭರವಸೆ ಹುಸಿಯಾಗಿಯೇ ಉಳಿದಿದೆ. ಇದರಿಂದ ಸಂತ್ರಸ್ತ ಕುಟುಂಬಗಳು ಸಂಕಷ್ಟದಲ್ಲೇ ದಿನ ಕಳೆಯುವಂತಾಗಿದೆ.

ಮೃತರ ಕುಟುಂಬಸ್ಥರಿಗೆ 5 ಲಕ್ಷ ರೂ. ಪರಿಹಾರ ಹಾಗೂ

ಪುಟ 2

## ಎಲ್ಲಾ ಸ್ಟಾಪ್ ಲಾಗ್ ಗೇಟ್ ಅಳವಡಿಕೆ ಯಶಸ್ವಿ

**ಕೊಪ್ಪಳ:** ತುಂಗಭದ್ರಾ ಜಲಾಶಯದಲ್ಲಿ ಮುರಿದಿದ್ದ 19ನೇ ಗೇಟ್‌ನಲ್ಲಿ ಎಲ್ಲಾ 5 ಸ್ಟಾಪ್ ಲಾಗ್ ಅಳವಡಿಕೆ ಯಶಸ್ವಿಯಾಗಿದೆ. ಈ ಮೂಲಕ ಪೋಲಾಗುತ್ತಿದ್ದ ನೀರನ್ನು ಸಂಪೂರ್ಣವಾಗಿ ನಿಲ್ಲಿಸುವಲ್ಲಿ ತಜ್ಞರ ತಂಡ ಯಶಸ್ವಿಯಾಗಿದೆ. ಡ್ಯಾಂ ತಜ್ಞ ಕನ್ನಯ್ಯ ನಾಯ್ಡು ತಂಡ ಮೂರು ದಿನಗಳಿಂದ ಸ್ಟಾಪ್ ಲಾಗ್ ಗೇಟ್ ಅಳವಡಿಸುವ ಕಾರ್ಯಾಚರಣೆಯಲ್ಲಿ ತೊಡಗಿಕೊಂಡಿತ್ತು.

ಆ.16 ರಂದು ಮೊದಲ ಎಲಿಮೆಂಟ್ ಅಳವಡಿಸಲಾಗಿತ್ತು. ಇದೀಗ ಶನಿವಾರ ಸಂಜೆ ಎಲ್ಲಾ ಸ್ಟಾಪ್ ಲಾಗ್ ಅಳವಡಿಕೆಯಿಂದಾಗಿ ಡ್ಯಾಂನಿಂದ ಹೊರ ಹೋಗುತ್ತಿದ್ದ ನೀರು ಬಂದ್ ಆಗಿದೆ. ಸದ್ಯ ಜಲಾಶಲಯದ ಎಲ್ಲ 33 ಗೇಟ್‌ಗಳನ್ನು ಮುಚ್ಚಲಾಗಿದೆ ಎಂದು ಟಿಬಿ ಡ್ಯಾಂ ಮಂಡಳಿ ತಿಳಿಸಿದೆ. ಸ್ಟಾಪ್ ಲಾಗ್ ಅಳವಡಿಕೆಯಿಂದಾಗಿ 70 ಟಿಎಂಸಿಯಷ್ಟು ನೀರು ಉಳಿಸಲು ಸಾಧ್ಯವಾಗಿದೆ. ಇನ್ನು ಆ ಭಾಗದಲ್ಲಿ ಉತ್ತಮ ಮಳೆಯಾಗುತ್ತಿರುವುದರಿಂದ ಒಳ ಹರಿವು ಹೆಚ್ಚಾದ ಹಿನ್ನೆಲೆಯಲ್ಲಿ ಇದುವರೆಗೆ



ಪೋಲಾದ ನೀರು ಮತ್ತೆ ತುಂಬಿಕೊಳ್ಳುವ ವಿಶ್ವಾಸ ಮೂಡಿದೆ. ಸದ್ಯ ಜಲಾಶಯಕ್ಕೆ 41 ಸಾವಿರ ಕ್ಯೂಸೆಕ್ ನೀರು ಹರಿದು ಬರುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ಡ್ಯಾಂ ತಜ್ಞ ಕನ್ನಯ್ಯ ನಾಯ್ಡು, ರೈತರ ಬದುಕು ಹಸನುಗೊಳಿಸಲು ನಾನು ಈ ಇಳಿವಯಸ್ಸಿನಲ್ಲೂ ದೂರದ ಹೈದರಾಬಾದ್‌ನಿಂದ

ಪುಟ 2

## ಗುರು ರಾಘವೇಂದ್ರ ಸ್ವಾಮಿಗಳ 353ನೇ ಆರಾಧನಾ ಮಹೋತ್ಸವಕ್ಕೆ ಇಂದು ಚಾಲನೆ

**ರಾಯಚೂರು:** ಗುರು ರಾಘವೇಂದ್ರ ಸ್ವಾಮಿಗಳ ಸನ್ನಿಧಿ ಮಂತ್ರಾಲಯದಲ್ಲಿ ಈಗ ರಾಯರ 353ನೇ ಆರಾಧನಾ ಮಹೋತ್ಸವ ಸಂಭ್ರಮ ಮನೆ ಮಾಡಿದೆ. ಇಂದಿನಿಂದ ಏಳು ದಿನಗಳ ಕಾಲ ಧಾರ್ಮಿಕ, ಸಾಂಸ್ಕೃತಿಕ ವೈಭವವೇ ಮಂತ್ರಾಲಯದಲ್ಲಿ ತೆರೆದುಕೊಳ್ಳಲಿದೆ. ಶಿಲಾಮಂಟಪಕ್ಕೆ ಭಕ್ತರು ನಿರ್ಮಿಸುತ್ತಿರುವ ಸ್ವರ್ಣಲೇಪಿತ ಕವಚ ಈ ಬಾರಿಯ ಆಕರ್ಷಣೆಯಾಗಿದ್ದು, ಮದುವಣಗಿತ್ತಿಯಂತೆ ಮಂತ್ರಾಲಯ ಸಿಂಗಾರಗೊಳ್ಳುತ್ತಿದೆ.

ಕಲಿಯುಗ ಕಾಮಧೇನು, ಮಂತ್ರಾಕ್ಷತೆ ಮಹಿಮೆಯ ಮಹಾಪುರುಷ ಗುರು ರಾಘವೇಂದ್ರ ಸ್ವಾಮಿಗಳ 353ನೇ ಆರಾಧನಾ ಮಹೋತ್ಸವ ಸಂಭ್ರಮ ಮಂತ್ರಾಲಯದಲ್ಲಿ ಕಳೆಕಟ್ಟಿದೆ. ಇಂದು ಸಂಜೆ ಧ್ವಜಾರೋಹಣ ಮೂಲಕ ರಾಯರ ಆರಾಧನಾ ಮಹೋತ್ಸವಕ್ಕೆ ಶ್ರೀಮಠದ ಪೀಠಾಧಿಪತಿ ಸುಬುಧೇಂದ್ರ ತೀರ್ಥ ಸ್ವಾಮಿ ಚಾಲನೆ ನೀಡಲಿದ್ದಾರೆ. ರಾಯರು ಸಶರೀರವಾಗಿ ವೃಂದಾವನಸ್ಥರಾಗಿ 353 ವರ್ಷಗಳು ಪೂರ್ಣಗೊಳ್ಳುತ್ತಿರುವ ಸಂದರ್ಭವನ್ನು ರಾಯರ



ಆರಾಧನಾ ಮಹೋತ್ಸವವಾಗಿ ಆ.18 ರಿಂದ 24 ರವರೆಗೆ ಏಳು ದಿನಗಳ ಕಾಲ ಮಂತ್ರಾಲಯ ಮಠ ಹಾಗೂ ದೇಶ-ವಿದೇಶಗಳಲ್ಲಿರುವ ರಾಯರ ಶಾಖಾ ಮಠಗಳಲ್ಲಿ ಅದ್ದೂರಿಯಾಗಿ ಆಚರಿಸಲಾಗುತ್ತದೆ.

ಪುಟ 2

### ವೀಕೆಂಡ್ ಲಾಲ್ ಬಾಗ್ ಫ್ಲವರ್ ಶೋಗೆ ಭರ್ಜರಿ ರೆಸ್ಪಾನ್ಸ್

## ನೂಕು ನುಗ್ಗಲಲ್ಲೇ ಫ್ಲವರ್ ಶೋ ವೀಕ್ಷಿಸಿದ ಪ್ರವಾಸಿಗರು

**ಬೆಂಗಳೂರು:** ಸಸ್ಯಕಾಶಿ ಲಾಲ್ ಬಾಗ್ ನಲ್ಲಿ 8 ದಿನದಿಂದ ಫ್ಲವರ್ ಶೋ ನಡೆಯುತ್ತಿದ್ದು, ಇಂದು 8ನೇ ದಿನಕ್ಕೆ ಕಾಲಿಟ್ಟಿದೆ. ಅದರಲ್ಲೂ ಇಂದು ವೀಕೆಂಡ್ ಇರುವ ಹಿನ್ನೆಲೆ ಅಂಬೇಡ್ಕರ್ ಫ್ಲವರ್ ಶೋ ವೀಕ್ಷಿಸಲು ಸಾಕಷ್ಟು ಸಂಖ್ಯೆಯಲ್ಲಿ ಜನರು ಬಂದಿದ್ದಾರೆ. ಹೀಗಾಗಿ ಲಾಲ್ ಬಾಗ್ ನಲ್ಲಿ ಎಲ್ಲಿ ನೋಡಿದ್ರು ಜನರೇ ಕಾಣುಸ್ತಾ ಇದ್ದಾರೆ. ಫ್ಲವರ್ ಶೋ ವೀಕ್ಷಿಸಲು ಜನರು ಇಂದು ಹೈರಾಣಾಗಿದ್ದಾರೆ.

ಈ ಬಾರಿ ಸ್ವತಂತ್ರ ದಿನಾಚರಣೆಯ ಪ್ರಯುಕ್ತವಾಗಿ ಡಾ ಬಿ.ಆರ್. ಅಂಬೇಡ್ಕರ್ ಅವರ ಥೀಮ್ ನಲ್ಲಿ ಫ್ಲವರ್ ಶೋ ಆಯೋಜನೆ ಮಾಡಲಾಗಿದೆ. ಈ ಫ್ಲವರ್ ಶೋ ಆಗಸ್ಟ್ 19 ರವರೆಗೂ



ಇರಲಿದ್ದು, ಇಂದು ಭಾನುವಾರವಾಗಿರುವ ಕಾರಣ ಬೆಳ್ಳಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆಯವರೆಗೂ ಫ್ಲವರ್ ಶೋ ವೀಕ್ಷಣೆಗೆ ಅವಕಾಶ ಮಾಡಿಕೊಡಲಾಗಿದೆ. ಹೀಗಾಗಿ ಬೆಂಗಳೂರು ಅಷ್ಟೇ ಅಲ್ಲದೇ ಬೇರೆ ಜಿಲ್ಲೆಗಳು ಹಾಗೂ ರಾಜ್ಯಗಳಿಂದ ಪ್ರವಾಸಿಗರು ಫ್ಲವರ್ ಶೋಗೆ ಬರುತ್ತಿದ್ದಾರೆ. ಹೀಗಾಗಿ ಲಾಲ್ ಬಾಗ್ ನಲ್ಲಿ ಎಲ್ಲಿ ನೋಡಿದ್ರು ಜನರೆ ಕಾಣುಸ್ತಾ ಇದ್ದಾರೆ.

ಪುಟ 2

### ಕೃಷ್ಣಭೈರೇಗೌಡ ಟ್ವೀಟ್‌ಗೆ ಸ್ಪಂದನೆ

## ಗುಂಡಿ ಮುಚ್ಚುವ ಕಾಮಗಾರಿ ಆರಂಭ



**ಬೆಂಗಳೂರು:** ಮಳೆಗಾಲ ಆರಂಭವಾದರೆ ಸಾಕು ಬೆಂಗಳೂರಿನ ರಸ್ತೆಗಳಲ್ಲಿನ ಗುಂಡಿಗಳು ಬಾಯಿ ತೆರೆದುಕೊಳ್ಳುತ್ತವೆ. ಈ ಗುಂಡಿಗಳಿಗೆ ಬಿದ್ದು ಅದೆಷ್ಟೊ ಜನರು ಗಾಯಗೊಂಡಿದ್ದಾರೆ. ಕೆಲವರು ಪ್ರಾಣ ಕಳೆದುಕೊಂಡಿದ್ದಾರೆ. ನಗರದಲ್ಲಿನ ರಸ್ತೆ ಗುಂಡಿಗಳನ್ನು ಮುಚ್ಚಿ ಎಂದು ಸ್ವತಃ ಸಚಿವ ಕೃಷ್ಣಭೈರೇಗೌಡ ಅವರು ಟ್ವೀಟ್ ಮಾಡಿದ್ದರು. ಇದು ರಾಜ್ಯದ ಅಭಿವೃದ್ಧಿ ವಿಷಯದಲ್ಲಿ, ರಸ್ತೆ ದುರಸ್ತಿಗೆ ಸಂಬಂಧಿಸಿ ಕಾಂಗ್ರೆಸ್ ಸರ್ಕಾರದ ಸಚಿವರೇ ಅಸಹಾಯಕರಾಗಿದ್ದಾರೆಯೇ ಎಂಬ ಪ್ರಶ್ನೆ ಉದ್ಭವಾಗುವಂತೆ ಮಾಡಿತ್ತು. ಇದೀಗ ಸಚಿವರ ಟ್ವೀಟ್ ಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸ್ಪಂದಿಸಿದೆ. ರಸ್ತೆ ಗುಂಡಿ ಮುಚ್ಚುವ ಕಾಮಗಾರಿ ಆರಂಭವಾಗಿದೆ.

ಪುಟ 2



### ರಾಜ್ಯದಲ್ಲಿ 7 ಝಿಕಾ ವೈರಸ್ ಪತ್ತೆ

## ಆರೋಗ್ಯ ಇಲಾಖೆ ಫುಲ್ ಅಲರ್ಟ್

**ಬೆಂಗಳೂರು:** ಡೆಂಗ್ಯೂ ಆಯ್ತು ಈಗ ಬೆಂಗಳೂರಿನಲ್ಲಿ ಝಿಕಾ ವೈರಸ್ ಭೀತಿ ಎದುರಾಗಿದೆ. ಈಗಾಗಲೆ ರಾಜ್ಯದಲ್ಲಿ 7 ಝಿಕಾ ವೈರಸ್ ಪತ್ತೆಯಾಗಿದೆ. ಸದ್ಯ ಝಿಕಾ ವೈರಸ್ ಭೀತಿ ಬೆನ್ನಲ್ಲೆ ರಾಜ್ಯ ಆರೋಗ್ಯ ಇಲಾಖೆ ಎಚ್ಚೆತ್ತುಕೊಂಡಿದ್ದು ವೈರಸ್ ತಗುಲದಂತೆ ಮುನ್ನೆಚ್ಚರಿಕೆ ವಹಿಸುವುದರ ಬಗ್ಗೆ ಅಗತ್ಯ ಕ್ರಮ ವಹಿಸಲು ಮುಂದಾಗಿದೆ.

ಈಡಿಸ್ ಸೊಳ್ಳೆಯಿಂದ ಹರಡುವ ಝಿಕಾ ಪತ್ತೆ ಬೆನ್ನಲ್ಲೆ ಆರೋಗ್ಯ ಇಲಾಖೆ ಅಲರ್ಟ್ ಆಗಿದೆ. ಅತಿಯಾದ ತಲೆನೋವು, ಕೆಂಪಾದ ಕಣ್ಣು, ಜ್ವರ, ಮೈಯಲ್ಲಿ ಗುಳ್ಳೆ, ದದ್ದುಗಳು ಕಾಣಿಸಿಕೊಳ್ಳೋದು ಝಿಕಾ ವೈರಸ್ ಗುಣ ಲಕ್ಷಣ. ಇನ್ನು ಬಹುತೇಕ ಝಿಕಾ ಸೋಂಕಿತರಿಗೆ ರೋಗ ಲಕ್ಷಣಗಳು ಕಂಡುಬರುವುದಿಲ್ಲ. ಉಳಿದಂತೆ ರೋಗಲಕ್ಷಣಗಳ ಸೌಮ್ಯ ಹಾಗೂ ಸಾಧಾರಣ ಸ್ವರೂಪವಾಗಿದ್ದು, 2-7 ದಿನಗಳವರೆಗೆ ಇರುತ್ತದೆ.



ಇಂತಹ ಲಕ್ಷಣಗಳು ಕಂಡುಬಂದಲ್ಲಿ ತಕ್ಷಣ ಸಮೀಪದ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡುವಂತೆ,

ಪುಟ 2

# ಅರಸು ಜನ್ಮದಿನ ಅರ್ಥಪೂರ್ಣ ಆಚರಣೆಗೆ ತೀರ್ಮಾನ



**ಚಾಮರಾಜನಗರ:** ಹಿಂದುಳಿದ ವರ್ಗಗಳ ಹರಿಕಾರ ಮಾಜಿ ಮುಖ್ಯಮಂತ್ರಿ ಡಿ. ದೇವರಾಜಅರಸು ಅವರ ಜನ್ಮದಿನವನ್ನು ಆಗಸ್ಟ್ 20ರಂದು ಅರ್ಥಪೂರ್ಣವಾಗಿ ಆಚರಿಸಲು ತೀರ್ಮಾನ ಕೈಗೊಳ್ಳಲಾಯಿತು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರ ಅಧ್ಯಕ್ಷತೆಯಲ್ಲಿ ನಡೆದ ಡಿ. ದೇವರಾಜ ಅರಸು ಜನ್ಮ ದಿನಾಚರಣೆ ಕುರಿತ ಪೂರ್ವಭಾವಿ ಸಭೆಯಲ್ಲಿ ದೇವರಾಜಅರಸು ಜನ್ಮ ದಿನ ಆಚರಣೆಯನ್ನು ಎಲ್ಲರ ಸಹಕಾರದೊಂದಿಗೆ ಅರ್ಥಪೂರ್ಣ ಹಾಗೂ ಯಶಸ್ವಿಯಾಗಿ ನಡೆಸಲು ನಿರ್ಧಾರ ಕೈಗೊಳ್ಳಲಾಯಿತು.

ಸಭೆಯ ಆರಂಭದಲ್ಲಿಯೇ ಹಾಜರಿದ್ದ ಮುಖಂಡರು ಮಾತನಾಡಿ ಡಿ. ದೇವರಾಜ ಅರಸು ಅವರ ಜನ್ಮದಿನ ಆಚರಣೆ ಅಚ್ಚುಕಟ್ಟಾಗಿ ನಡೆಯಬೇಕು. ಅರಸು ಅವರ ಜೀವನ ಸಾಧನೆ, ಆಡಳಿತ ಸುಧಾರಣೆ ಕುರಿತು ತಿಳಿಸುವ ಕಿರು ಹೊತ್ತಿಗೆ, ಕರಪತ್ರಗಳನ್ನು ಮುದ್ರಿಸಿ ವಿತರಣೆ ಮಾಡಬೇಕು. ಕಾರ್ಯಕ್ರಮದಲ್ಲಿ ಅರಸು ಅವರ ಬಗ್ಗೆ ವಿಶೇಷ ಉಪನ್ಯಾಸ ನೀಡಬೇಕು. ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನೀಡುವ ಮಕ್ಕಳಿಗೆ ಪ್ರಶಂಸನಾ ಪತ್ರ ನೀಡಬೇಕು. ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಗೌರವಿಸಬೇಕು ಎಂಬುದೂ ಸೇರಿದಂತೆ ಇನ್ನಿತರ ಸಲಹೆಗಳನ್ನು ನೀಡಿದರು.

ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಮಾತನಾಡಿ ಡಿ. ದೇವರಾಜಅರಸು ಅವರ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಎಲ್ಲ ವ್ಯವಸ್ಥೆಗಳೊಂದಿಗೆ ಮಾಡಲಾಗುವುದು. ಚಾಮರಾಜೇಶ್ವರ ದೇವಾಲಯದಿಂದ ಡಿ. ದೇವರಾಜ ಅರಸು ಅವರ ಭಾವಚಿತ್ರದ ಮೆರವಣಿಗೆಯನ್ನು ಕಲಾತಂಡಗಳೊಂದಿಗೆ ನಡೆಸಲಾಗುವುದು. ಬಳಿಕ ವರನಟ ಡಾ. ರಾಜ್ ಕುಮಾರ್ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ಏರ್ಪಾಡು ಮಾಡಲಾಗುವುದು ಎಂದರು.

ಅರಸು ಅವರ ವ್ಯಕ್ತಿತ್ವ, ವಿಚಾರಧಾರೆಗಳು, ಆಡಳಿತದಲ್ಲಿ ತಂದ ಮಹತ್ತರ ಸುಧಾರಣೆ ಸೇರಿದಂತೆ ಅಮೂಲ್ಯ ವಿಷಯಗಳನ್ನು ತಿಳಿಸುವ ಭಾಷಣಕಾರರನ್ನು ಆಯ್ಕೆ ಮಾಡಬೇಕಿದೆ. ಈ ನಿಟ್ಟಿನಲ್ಲಿ ಸಂಘಟನೆಗಳ ಮುಖಂಡರು ನೀಡುವ ಸಲಹೆಗಳನ್ನು ಪರಿಗಣಿಸಲಾಗುತ್ತದೆ. ಇದಕ್ಕೆ ಎಲ್ಲರ ಸಹಕಾರ ಅಗತ್ಯ ಎಂದರು.

ಹೆಚ್ಚು ಅಂಕಗಳನ್ನು ಪಡೆದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳನ್ನು ಗುರುತಿಸಿ ಸನ್ಮಾನಿಸಲಾಗುತ್ತದೆ. ವಿದ್ಯಾರ್ಥಿಗಳ ಪೋಷಕರನ್ನು ಆಹ್ವಾನಿಸಿ ಗೌರವಿಸಲಾಗುತ್ತದೆ. ಕಾರ್ಯಕ್ರಮವು ಯಾವುದೇ ಲೋಪವಿಲ್ಲದಂತೆ ಅರ್ಥಪೂರ್ಣವಾಗಿ ಆಯೋಜಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗುವುದು. ಕಾರ್ಯಕ್ರಮದ ಸಿದ್ದತೆಗೆ ಅಗತ್ಯ ಕ್ರಮ ಕೈಗೊಳ್ಳಲು ನಿರ್ದೇಶನ ನೀಡಲಾಗುವುದು ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಪ್ರಭಾರ ಅಧಿಕಾರಿ ಕುಮಾರ್, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಮುಖಂಡರಾದ ಚಾ.ರಂ. ಶ್ರೀನಿವಾಸಗೌಡ, ಕೆ.ಎಂ. ನಾಗರಾಜು, ಸಿ.ಎಂ. ಕೃಷ್ಣಮೂರ್ತಿ, ಬಸವನಪುರ ರಾಜಶೇಖರ್, ನಿಜಧ್ವನಿ ಗೋವಿಂದರಾಜು, ಪಿ. ಸಂಘಸೇನಾ, ಪರ್ವತರಾಜು, ಜಿ. ಬಂಗಾರು, ಕಂದಹಳ್ಳಿ ನಾರಾಯಣ, ನಟರಾಜು, ನಾಗೇಶ್, ಆಲೂರು ನಾಗೇಂದ್ರ, ಪಣ್ಯದಹುಂಡಿ ರಾಜು, ನಂಜುಂಡಸ್ವಾಮಿ, ಇನ್ನಿತರ ಮುಖಂಡರು ಸಭೆಯಲ್ಲಿ ಉಪಸ್ಥಿತರಿದ್ದರು.

## 20ರಂದು ದೇವರಾಜ ಅರಸು ಜನ್ಮ ದಿನಾಚರಣೆ

**ರಾಮನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಶ್ರೀ ಡಿ. ದೇವರಾಜ ಅರಸು ರವರ 109ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಇದೇ ಆ. 20ರ ಮಂಗಳವಾರ ಬೆಳಿಗ್ಗೆ 10.30ಕ್ಕೆ ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದೆ. ರಾಜ್ಯದ ಉಪಮುಖ್ಯಮಂತ್ರಿಗಳು, ಭಾರಿ ಮತ್ತು ಮಧ್ಯಮ ನೀರಾವರಿ, ಬೆಂಗಳೂರು ನಗರ ಅಭಿವೃದ್ಧಿ ಹಾಗೂ ಬೆಂಗಳೂರು ನಗರ ಉಸ್ತುವಾರಿ ಸಚಿವರಾದ ಡಿ.ಕೆ. ಶಿವಕುಮಾರ್ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ಸಾರಿಗೆ, ಮುಜರಾಯಿ ಸಚಿವರು ಹಾಗೂ ರಾಮನಗರ ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗಾ ರೆಡ್ಡಿ ಅವರು ಕಾರ್ಯಕ್ರಮ ಉದ್ಘಾಟಿಸುವರು. ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ತಂಗಡಗಿ ಅವರು ಉಪಸ್ಥಿತರಿರುವರು. ರಾಮನಗರ ವಿಧಾನ ಸಭಾ ಕ್ಷೇತ್ರದ ಶಾಸಕರಾದ ಎಚ್.ಎ. ಇಕ್ಬಾಲ್ ಹುಸೇನ್ ಅಧ್ಯಕ್ಷತೆ ವಹಿಸುವರು.

## ಅರ್ಜಿ ಆಹ್ವಾನ

**ರಾಮನಗರ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಮೆಟ್ರಿಕ್ ನಂತರದ ಕೋರ್ಸುಗಳಾದ ಪಿ.ಯು.ಸಿ ಮತ್ತು ಸಮಾನಾಂತರ (ಪಿ.ಯು.ಸಿ ಮತ್ತು ಇಕ್ವಿಲಂಟ್ ಕೋರ್ಸ್) ಸಾಮಾನ್ಯ ಪದವಿ (ಜನರಲ್ ಡಿಗ್ರೀ ಕೋರ್ಸ್) ಮತ್ತು ಸಂಯೋಜಿತ ಉಭಯ ಪದವಿ ಕೋರ್ಸುಗಳಲ್ಲಿ (ಇಂಟಿಗ್ರಾಂಟೆಡ್ ಡಿಗ್ರೀ ಕೋರ್ಸ್) ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1 ರ ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ, 2024-25 ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ, ಶುಲ್ಕ ಮರುಪಾವತಿ ಮತ್ತು ವಿದ್ಯಾಸಿರಿ (ಊಟ ಮತ್ತು ವಸತಿ ಸಹಾಯ ಯೋಜನೆ), ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿಯನ್ನು ಇದೇ ಸೆಪ್ಟೆಂಬರ್ 15ರೊಳಗೆ ಸಲ್ಲಿಸಬಹುದಾಗಿದೆ. ವಿದ್ಯಾರ್ಥಿಗಳು https://ssp.postmatric.karnataka.gov.in/gov.in/ಅನ್ನು ಸಂಪರ್ಕಿಸಿ ಆನ್‌ಲೈನ್ ಅರ್ಜಿಯನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ದೂ.ಸಂಖ್ಯೆ: 080-29782455 ಅನ್ನು ಸಂಪರ್ಕಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ರಾಮನಗರ ತಾಲ್ಲೂಕು ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ವಿದ್ಯುತ್ ವ್ಯತ್ಯಯ

**ರಾಮನಗರ:** 66ಕೆ ಸೋಮನಹಳ್ಳಿ-ಟಿ.ಕೆ. ಹಳ್ಳಿ ಲೈನ್-2 ಹಾಗೂ 66/11 ಕೆವಿ ರಂಗನದೊಡ್ಡಿ ಉಪವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕಾ ನಿರ್ವಹಣಾ ಕಾಮಗಾರಿ ಪ್ರಯುಕ್ತ ಇದೇ ಆ.18ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ರಾಮಸಾಗರ ರಸ್ತೆ ವ್ಯಾಪ್ತಿಯಲ್ಲಿ ಬರುವ ಕೈಗಾರಿಕಾ ಪ್ರದೇಶಗಳು ಡೈರೀ ಕ್ಲಾಸಿಕ್, ಸ್ಟವ್‌ಕ್ರಾಪ್ಟ್, ಸ್ವಾಜೆನ್ಯುಟ್ರಿಷನ್, ಪಾರ್‌ಸನ್ ನ್ಯೂಟ್ರಿಷನ್, ಅಂಥಮ್ ಬಯಾಸ್, ಕೊಳ್ಳಿಗನಹಳ್ಳಿ ಮತ್ತು ಹಾರೋಹಳ್ಳಿ ಪಟ್ಟಣ ಪಂಚಾಯಿತಿ ಹಾಗೂ ಟಿ.ಬನ್ನಿಕುಪ್ಪೆ, ಕುರುಬರಹಳ್ಳಿ ಹುಲಿಸಿದ್ದೇಗೌಡನದೊಡ್ಡಿ ಗ್ರಾಮ ಮತ್ತು ಸುತ್ತಮುತ್ತಲ ಗ್ರಾಮಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂನ ಕನಕಪುರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ತಿಳಿಸಿದ್ದಾರೆ.

## ನಾಳೆ ನೇರ ಸಂದರ್ಶನ

**ರಾಮನಗರ:** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಆ. 19ರ ಸೋಮವಾರ ಉಚಿತ ನೇರ ಸಂದರ್ಶನ ಕಾರ್ಯಕ್ರಮ ಆಯೋಜಿಸಲಾಗಿದೆ. ಬಿಡದಿಯ ಖಾಸಗಿ ಸಂಸ್ಥೆ ಶೀಕಾಮರ್ಸ್ ಮಾರ್ಕೆಟ್ ಸರ್ವೀಸ್ ಪ್ರೈವೇಟ್ ಲಿಮಿಟೆಡ್ ಮತ್ತು ಫೌರೇಸಿಯಾ ಎಮಿಷನ್ಸ್ ಕಂಟ್ರೋಲ್ ಟೆಕ್ನಾಲಜೀಸ್ ಪ್ರೈವೇಟ್ ಲಿಮಿಟೆಡ್ ಭಾಗವಹಿಸುತ್ತಿದ್ದು, ಉದ್ಯೋಗಾಂಕ್ಷಿಗಳನ್ನು ನೇಮಕ ಮಾಡಿಕೊಳ್ಳಲಿವೆ. ಆದಕಾರಣ ಖಾಸಗಿ ವಲಯದಲ್ಲಿನ ಉದ್ಯೋಗಕ್ಕೆ ಆಸಕ್ತರಿರುವ ಎಸ್.ಎಸ್.ಎಲ್.ಸಿ, ಐಟಿಐ, ಪಿಯುಸಿ ಮತ್ತು ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆ/ರೆಸ್ಯೂಮ್ (ಬಯೋಡೇಟಾ), ಇತ್ಯಾದಿ ದಾಖಲೆಗಳೊಂದಿಗೆ ಇದೇ ಆ. 19ರ ಸೋಮವಾರ ಬೆಳಿಗ್ಗೆ 10.30.ಕ್ಕೆ ಜಿಲ್ಲಾ ಕೌಶಲ್ಯ ಕೇಂದ್ರ/ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಕೊಠಡಿ ಸಂಖ್ಯೆ 208, ಮೊದಲನೇ ಮಹಡಿ, ಬಿ.ಎಂ.ರಸ್ತೆ, ಕಂದಾಯ ಭವನ, ರಾಮನಗರ-562159 ಈ ಕಚೇರಿಗೆ ಆಗಮಿಸಿ ನೇರ ಸಂದರ್ಶನ ಕಾರ್ಯಕ್ರಮದಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ದೂ.ಸಂಖ್ಯೆ 080-27273364, 9844021496 9900331779 ಅನ್ನು ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ.

# ಅಭಿವೃದ್ಧಿಯೊಂದಿಗೆ ಸ್ವತಂತ್ರದ ಕನಸು ನನಸು: ಎಆರ್‌ಕೆ



**ಯಳಂದೂರು:** ಕರ್ನಾಟಕ ರಾಜ್ಯವು ಇಂದು ಇಡೀ ದೇಶದ ಗಮನ ಸೆಳೆಯುತ್ತಿದೆ. ರಾಜ್ಯ ಎಲ್ಲಾ ರಂಗಗಳಲ್ಲೂ ಅಭಿವೃದ್ಧಿಯನ್ನು ಕಾಣುತ್ತಿದೆ. ಇದರೊಂದಿಗೆ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಮೂಲ ಸೌಲಭ್ಯವನ್ನು ಒದಗಿಸುವತ್ತ ದಾಪುಗೋಲು ಇಡುತ್ತಿದೆ, ಸ್ವತಂತ್ರ ಭಾರತ ಕಂಡಿದ್ದ ಕನಸನ್ನು ನನಸು ಮಾಡುವತ್ತ ರಾಜ್ಯ ದಿಟ್ಟ ಹೆಜ್ಜೆ ಇಟ್ಟಿದೆ ಎಂದು ಶಾಸಕ ಎ.ಆರ್. ಕೃಷ್ಣಮೂರ್ತಿ ತಿಳಿಸಿದರು.

ಅವರು ಪಟ್ಟಣದ ಮಿನಿವಿಧಾನಸೌಧದ ಆವರಣದಲ್ಲಿ ಗುರುವಾರ ತಾಲೂಕು ಆಡಳಿತದ ವತಿಯಿಂದ ಹಮ್ಮಿಕೊಂಡಿದ್ದ 78 ನೇ ಸ್ವತಂತ್ರ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ರಾಜ್ಯ ಸರ್ಕಾರ ಅನ್ನಭಾಗ್ಯ, ಗೃಹಜ್ಯೋತಿ, ಗೃಹಲಕ್ಷ್ಮಿ, ಯುವನಿಧಿ, ಶಕ್ತಿ ಯೋಜನೆಗಳ ಮೂಲಕ ಬಡವರು, ಮಧ್ಯಮವರ್ಗದವರು, ಮಹಿಳೆಯರು, ಯುವಕರನ್ನು ಪ್ರೋತ್ಸಾಹಿಸುವ ಕೆಲಸವನ್ನು ಮಾಡುತ್ತಿದೆ. ಸ್ವತಂತ್ರ ನಂತರ ಭಾರತ ಯಾವ ದಿಕ್ಕಿಗೆ ಸಾಗಬೇಕು ಎಂಬುದಕ್ಕೆ ಸೂಕ್ತ ಹಾದಿಯನ್ನು ನಮ್ಮ ರಾಜ್ಯದ ಮುಖ್ಯಮಂತ್ರಿಗಳು ಹಾಕಿಕೊಟ್ಟಿದ್ದಾರೆ. ಇದರೊಂದಿಗೆ ಅಭಿವೃದ್ಧಿಗೆ ಬೇಕಿರುವ ಅನೇಕ ಯೋಜನೆಗಳನ್ನು ಸರ್ಕಾರ ಮಾಡುತ್ತಿದ್ದು ಇಡೀ ರಾಜ್ಯ ದೇಶಕ್ಕೆ ಮಾದರಿಯಾಗುತ್ತಿದೆ. ಇದು ನಿಜ ಭಾರತದ ಕನಸನ್ನು ನನಸು ಮಾಡುವತ್ತ ರಾಜ್ಯ ಇಟ್ಟ ದಿಟ್ಟ ಹೆಜ್ಜೆಯಾಗಿದೆ. ಸ್ವತಂತ್ರಕ್ಕಾಗಿ ದುಡಿದು, ಮಡಿದ ವೀರರರಿಗೆ, ಯೋಧರ ತ್ಯಾಗ ಬಲಿದಾನಗಳಿಂದ ಪಡೆದ ಸ್ವತಂತ್ರವನ್ನು ಅನುಭವಿಸಲು ಸೂಕ್ತ ವಾತಾವರಣ ನಿರ್ಮಿಸುವ ಗುರಿಯನ್ನು ರಾಜ್ಯ ಮಡುತ್ತಿದೆ. ಈ ಬಾರಿ ನಮ್ಮ ಕ್ಷೇತ್ರಕ್ಕೆ ಹೆಚ್ಚಿನ ಅನುದಾನ ಬಂದಿದೆ. ಕ್ಷೇತ್ರವನ್ನು ಅಭಿವೃದ್ಧಿ ಮಾಡಲು ನಾನು ಹೆಚ್ಚು ಶ್ರಮ ವಹಿಸುತ್ತೇನೆ. ಪಟ್ಟಣದಲ್ಲಿ ಒಂದು ಸುಸಜ್ಜಿತ ಕ್ರೀಡಾಂಗಣ ನಿರ್ಮಾಣ ಮಾಡಲಾಗುವುದು ಎಂದು ಭರವಸೆ ನೀಡಿದರು.

ಮುಖ್ಯ ಭಾಷಣ ಮಾಡಿದ ಉಪನ್ಯಾಸಕ ಉಮೇಶ್ ಮಾತನಾಡಿ, ದೇಶದ ಸ್ವಂತಂತ್ರ ಸಂಗ್ರಾಮ, ಇದರ ಐತಿಹ್ಯ, ತ್ಯಾಗ, ಬಲಿದಾನ, ದೇಶ ಅಂದು ಇದ್ದಸ್ಥಿತಿಗಳ ಬಗ್ಗೆ ಬೆಳಕು ಚೆಲ್ಲಿದರು. ಅಲ್ಲದೆ ಈಗ ದೇಶ ಅಭಿವೃದ್ಧಿಯತ್ತ ದಾಪುಗೋಲು ಇಡುತ್ತಿದ್ದು ಇಡೀ ವಿಶ್ವವೇ ಬೆರಗಾಗಿ ನೋಡುವ ಹಂತಕ್ಕೆ ನಾವು ಬೆಳೆದಿದ್ದೇವೆ. ಚಂದ್ರಯಾನ ಮಾಡುತ್ತಿರುವ ನಮ್ಮ ಹೆಮ್ಮೆ ಇಂತಹ ನೂರಾರು ಉದಾಹರಣೆಗಳಿಗೆ ನಮ್ಮ ದೇಶ ಸಾಕ್ಷಿಯಾಗಿದೆ ಎಂದರು. ತಹಶೀಲ್ದಾರ್ ಜಯಪ್ರಕಾಶ್ ಧ್ವಜಾರೋಹಣ ನಡೆಸಿದರು. ವಿವಿಧ ಶಾಲಾ ವಿದ್ಯಾರ್ಥಿಗಳು ನಡೆಸಿಕೊಟ್ಟ ಸಾಂಸ್ಕೃತಿಕ ಕಾರ್ಯಕ್ರಮಗಳು, ದೇಶಭಕ್ತಿ ಗೀತೆಗಳ ನೃತ್ಯ, ಪೊಲೀಸ್ ಇಲಾಖೆ ಮತ್ತು ಶಾಲಾ ಮಕ್ಕಳು ನಡೆಸಿಕೊಟ್ಟ ಪರೇಡ್ ಗಮನ ಸೆಳೆಯಿತು. ಪಪಂ ಸದಸ್ಯರಾದ ಬಿ. ಲಕ್ಷ್ಮಿಮಲ್ಲು, ಸುಶೀಲಾಪ್ರಕಾಶ್ ಬಿಇಓ ಕೆ. ಕಾಂತರಾಜು, ಪಿಎಸ್‌ಐ ಹನುಮಂತ ಉಪ್ಪಾರ್ ಸರ್ಕಾರಿ ಪಬ್ಲಿಕ್ ಶಾಲೆಯ ಉಪಪ್ರಾಂಶುಪಾಲ ನಂಜುಂಡಯ್ಯ, ರಜಸ್ವ ನಿರೀಕ್ಷಕ ಯದುಗಿರಿ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ವೈ.ಎಂ. ಮಂಜುನಾಥ್ ಸೇರಿದಂತೆ ವಿವಿಧ ಇಲಾಖೆಗಳ ನೌಕರರು, ಶಾಲಾ ಕಾಲೇಜು, ಶಿಕ್ಷಕರು ಹಾಜರಿದ್ದರು.

# 78ನೇ ಸ್ವಾತಂತ್ರ್ಯೋತ್ಸವ ಸಂಭ್ರಮ

## ಪೊಲೀಸ್, ಅರಣ್ಯ, ಅಬಕಾರಿ, ಗೃಹರಕ್ಷಕ ದಳದಿಂದ ಪಥ ಸಂಚಲನ

**ಚಾಮರಾಜನಗರ:** ಜಿಲ್ಲಾಡಳಿತದ ವತಿಯಿಂದ ನಗರದಲ್ಲಿ ಹಮ್ಮಿಕೊಳ್ಳಲಾಗಿದ್ದ 78ನೇ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮವನ್ನು ಅದ್ದೂರಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಪೊಲೀಸ್, ಅರಣ್ಯ, ಅಬಕಾರಿ, ಗೃಹರಕ್ಷಕ ದಳ ತುಕಡಿಗಳು ಸೇರಿದಂತೆ ವಿವಿಧ ಶಾಲಾ ಮಕ್ಕಳು ಆಕರ್ಷಕ ಪಥಸಂಚಲನದಲ್ಲಿ ಪಾಲ್ಗೊಂಡರು.

ನಗರದ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿಂದು ಆಯೋಜಿಸಲಾಗಿದ್ದ 78ನೇ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದಲ್ಲಿ ಪಶು ಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಧ್ವಜಾರೋಹಣ ನೆರವೇರಿಸಿ, ಧ್ವಜ ವಂದನೆ ಸ್ವೀಕರಿಸಿದರು. ನಂತರ ತೆರೆದ ವಾಹನದಲ್ಲಿ ತೆರಳಿದ ಸಚಿವರು ಪಥಸಂಚಲನಕ್ಕೆ ಸಜ್ಜಾಗಿದ್ದ ವಿವಿಧ ತುಕಡಿಗಳಿಗೆ ಗೌರವ ವಂದನೆ ಸಲ್ಲಿಸಿದರು.

ಬಳಿಕ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಸಮಾರಂಭದಲ್ಲಿ ನೆರೆದಿದ್ದ ಎಲ್ಲರಿಗೂ ಸ್ವಾತಂತ್ರ್ಯೋತ್ಸವದ ಶುಭಾಷಯಗಳನ್ನು ತಿಳಿಸಿ, ಸ್ವಾತಂತ್ರ್ಯೋತ್ಸವದ ಸಂದೇಶ ನೀಡಿದರು.

ದೇಶದ ಸರ್ವತೋಮುಖ ಅಭಿವೃದ್ಧಿಯಲ್ಲಿ ಭಾಗಿಯಾಗಿರುವ ನಾವೆಲ್ಲರೂ 78ನೇ ವರ್ಷದ ಸ್ವಾತಂತ್ರ್ಯೋತ್ಸವದ ಸಂಭ್ರಮದಲ್ಲಿದ್ದೇವೆ. ಸ್ವಾತಂತ್ರ್ಯ ನಮಗೆ ಅಷ್ಟೇನು ಸುಲಭವಾಗಿ ದೊರೆತಿಲ್ಲ. ಅದು ಹಲವಾರು ರಾಷ್ಟ್ರ ನಾಯಕರ, ದೇಶಪ್ರೇಮಿಗಳ ತ್ಯಾಗ, ಬಲಿದಾನದಿಂದ ಸಿಕ್ಕಿದೆ. ವಿವಿಧತೆಯಲ್ಲಿ ಏಕತೆ ಹೊಂದಿರುವ ಭಾರತದಲ್ಲಿ ಭಾವೈಕ್ಯತೆಯನ್ನು ಸಾಧಿಸುವುದರ ಜೊತೆಗೆ ಎಲ್ಲಾ ಕ್ಷೇತ್ರಗಳಲ್ಲಿರುವ ವಿಫುಲ ಅವಕಾಶಗಳನ್ನು ಬಳಸಿಕೊಂಡು ದೇಶದ ಸರ್ವಾಂಗೀಣ ಪ್ರಗತಿಗೆ ನೆರವಾಗೋಣ ಎಂದು ಸಚಿವರು ಹೇಳಿದರು.



ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯಲ್ಲಿ ಹೊಸದಾಗಿ ಪಶುವೈದ್ಯ ಕಟ್ಟಡಗಳನ್ನು ನಿರ್ಮಾಣ ಮಾಡಲು ಪ್ರತಿ ಕಟ್ಟಡಕ್ಕೆ 50 ಲಕ್ಷ ರೂ. ಗಳಂತೆ 450 ಲಕ್ಷ ಅನುದಾನವನ್ನು ಒದಗಿಸಲಾಗಿದೆ. ಜಿಲ್ಲೆಯ ಸಂತೇಮರಹಳ್ಳಿ, ಮಲಿಯೂರು, ಕೊತ್ತಲವಾಡಿ, ಹೊನ್ನೇಗೌಡನಹಳ್ಳಿ, ತೆರಕಣಾಂಬಿ, ಕಬ್ಬಳ್ಳಿ, ರಾಮಾಪುರ, ಮಹದೇಶ್ವರ ಬೆಟ್ಟ, ಯಳಂದೂರಿನಲ್ಲಿ ಪಶು ವೈದ್ಯ ಕಟ್ಟಡಗಳನ್ನು ನಿರ್ಮಿಸಲಾಗುವುದು. ಅನುಗ್ರಹ ಕೊಡುಗೆ ಯೋಜನೆಯಡಿ ಅಕಸ್ಮಿಕವಾಗಿ ಮೃತಪಟ್ಟ ಜಾನುವಾರುಗಳಿಗೆ 10 ಸಾವಿರ ಹಾಗೂ ಕುರಿಮೇಕೆಗಳಿಗೆ 5 ಸಾವಿರ ರೂ. ಗಳ ಪರಿಹಾರ ನೀಡಲಾಗುತ್ತಿದೆ ಎಂದು ಉಸ್ತುವಾರಿ ಸಚಿವರು ತಿಳಿಸಿದರು.

ರೈತ ಮಹಿಳೆಯರಲ್ಲಿ ಹೈನುಗಾರಿಕೆ ಪ್ರೋತ್ಸಾಹಿಸಲು 2024-25ನೇ ಸಾಲಿನಲ್ಲಿ ಹಸು, ಎಮ್ಮೆ ಖರೀದಿಗೆ ಪಡೆಯುವ ಸಾಲವನ್ನು ಸಕಾಲದಲ್ಲಿ ಮರುಪಾವತಿ ಮಾಡುವ ಮಹಿಳೆಯರಿಗೆ ಸರ್ಕಾರದಿಂದ ಶೇ. 6ರ ಬಡ್ಡಿದರದಲ್ಲಿ ಸಹಾಯಧನ ನೀಡುವ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದೆ. ಅದರನ್ವಯ ಪರಿಶಿಷ್ಟ ಜಾತಿ-11, ಪರಿಶಿಷ್ಟ ಪಂಗಡ-4 ಹಾಗೂ ಸಾಮಾನ್ಯ-47 ಸೇರಿದಂತೆ ಜಿಲ್ಲೆಗೆ ಒಟ್ಟು 62 ಗುರಿ ನಿಗದಿಪಡಿಸಲಾಗಿದೆ ಎಂದು ಸಚಿವರಾದ ವೆಂಕಟೇಶ್ ತಿಳಿಸಿದರು. ಸ್ವಾತಂತ್ರ್ಯೋತ್ಸವ ಸಂದೇಶ ನೀಡಿದ ಬಳಿಕ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಗಣ್ಯರು ರಾಷ್ಟ್ರ ನಾಯಕರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಮಾಡಿ ಗೌರವ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ 2023-24ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ಜಿಲ್ಲೆಯ 6 ಮಂದಿ ವಿದ್ಯಾರ್ಥಿಗಳಿಗೆ ಶಾಲಾ ಶಿಕ್ಷಣ ಇಲಾಖೆಯಿಂದ ಉಚಿತ ಲ್ಯಾಪ್ ಟಾಪ್ ವಿತರಿಸಲಾಯಿತು. ಅಲ್ಲದೆ ಅಪಘಾತದಲ್ಲಿ ಮೃತಪಟ್ಟವರ ಅಂಗಾಂಗ ದಾನ ಮಾಡಿದ ಸಂಬಂಧಿಸಿದ 7 ಕುಟುಂಬದ ಸದಸ್ಯರಿಗೆ, ಪೋಷಕರಿಗೆ ಮತ್ತು ಕೊಳ್ಳೇಗಾಲ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಪ್ರವಾಹ ಉಂಟಾದ ಸಂದರ್ಭದಲ್ಲಿ ವಿಪತ್ತು ನಿರ್ವಹಣೆಯಲ್ಲಿ ಪ್ರಾಣದ ಹಂಗು ತೊರೆದು ಉತ್ತಮ ಕಾರ್ಯನಿರ್ವಹಿಸಿದ ಅಗ್ನಿಶಾಮಕ ಅಧಿಕಾರಿಗಳಿಗೆ ಪ್ರಶಸ್ತಿ ಪತ್ರ ವಿತರಿಸಲಾಯಿತು.

ಸಂಸದರಾದ ಸುನಿಲ್ ಬೋಸ್, ಶಾಸಕರಾದ ಸಿ. ಪುಟ್ಟರಂಗಶೆಟ್ಟಿ, ಚಾಮರಾಜನಗರ ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್, ಕಾಡಾ ಅಧ್ಯಕ್ಷರಾದ ಪಿ. ಮರಿಸ್ವಾಮಿ, ಪಂಚ ಗ್ಯಾರೆಂಟಿ ಯೋಜನೆಗಳ ಜಿಲ್ಲಾಧ್ಯಕ್ಷರಾದ ಎಚ್.ವಿ. ಚಂದ್ರು, ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತ, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಲಕ್ಷ್ಮೀ, ತಹಶೀಲ್ದಾರ್ ಗಿರಿಜ, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



# ಯರಿಯೂರು ಶಾಲೆಯಲ್ಲಿ ಎಲ್‌ಕೆಜಿ ಆರಂಭ

**ಯಳಂದೂರು:** ತಾಲೂಕಿನ ಯರಿಯೂರು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಪ್ರಾರಂಭವಾದ ಎಲ್‌ಕೆಜಿ ತರಗತಿಗೆ ಕ್ಷೇತ್ರ ಶಿಕ್ಷಣಾಧಿಕಾರಿ ಕೆ. ಕಾಂತರಾಜು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಈಚೆಗೆ ಶಿಕ್ಷಣ ಕ್ಷೇತ್ರದಲ್ಲಿ ಪ್ರಬಲವಾದ ಸ್ಪರ್ಧೆ ಏರ್ಪಟ್ಟಿದೆ. ಮಕ್ಕಳಿಗೆ ಖಾಸಗಿ ಶಾಲೆಗಳಲ್ಲಿ ಸಿಗುವ ಎಲ್ಲಾ ಸವಲತ್ತುಗಳನ್ನು ಸರ್ಕಾರಿ ಶಾಲೆಯಲ್ಲೂ ಪಡೆದುಕೊಳ್ಳಬೇಕು ಎಂಬ ನಿಟ್ಟಿನಲ್ಲಿ ಸರ್ಕಾರ ಅನೇಕ ಕಾರ್ಯಕ್ರಮಗಳನ್ನು ರೂಪಿಸಿದೆ. ಸರ್ಕಾರಿ ಶಾಲೆಗಳಲ್ಲಿ ಎಲ್‌ಕೆಜಿ ತರಗತಿಗಳನ್ನು ಆರಂಭಿಸಲು ಸರ್ಕಾರ ಚಿಂತನೆಯನ್ನು ನಡೆಸಿದ್ದು ಪ್ರಾಯೋಗಿಕವಾಗಿ ಕೆಲವು ಶಾಲೆಗಳನ್ನು ಆಯ್ಕೆ ಮಾಡಿದೆ. ನಮ್ಮ ತಾಲೂಕಿನಲ್ಲಿ ಯರಿಯೂರು ಗ್ರಾಮದ ಶಾಲೆಯು ಪ್ರಥಮವಾಗಿದೆ.

ಸರ್ಕಾರದ ನಿಯಮ ಹಾಗೂ ಮಾರ್ಗಸೂಚಿಯಂತೆ 2024-25 ರ ಸಾಲಿನಿಂದ ಯುಕೆಜಿ ತರಗತಿಗೆ 30 ವಿದ್ಯಾರ್ಥಿಗಳನ್ನು ಸೇರಿಸಿಕೊಳ್ಳಲು ಅವಕಾಶವಿದೆ. ಇದಕ್ಕೆ ನುರಿತ ಶಿಕ್ಷಕಿ ಹಾಗೂ ಒಬ್ಬರು ಆಯಾ ಇರುತ್ತಾರೆ. ಇದರೊಂದಿಗೆ ಇವರಿಗೆ ಮಧ್ಯಾಹ್ನದ ಬಿಸಿಯೂಟ ಹಾಗೂ 2 ಬಾರಿ ಸ್ನ್ಯಾಕ್ಸ್ ನೀಡಲಾಗುತ್ತದೆ. ಮುಂದಿನ ಶೈಕ್ಷಣಿಕ ವರ್ಷದಿಂದ ಇಲ್ಲೇ ಯುಕೆಜಿ ತರಗತಿಗಳೂ ಆರಂಭಗೊಳ್ಳಲಿದೆ. ಅಕ್ಕಪಕ್ಕದ ಗ್ರಾಮಗಳ ಪೋಷಕರು ಇದರ ಸದುಪಯೋಗ ಪಡೆದುಕೊಂಡು ತಮ್ಮ ಮಕ್ಕಳನ್ನು ಸೇರಿಸಬಹುದು. ಈಗಾಗಲೇ ಈ ಶಾಲೆಯಲ್ಲಿ ಒಂದರಿಂದ ಮೂರನೇ ತರಗತಿವರೆಗೆ ಆಂಗ್ಲ ಮಾಧ್ಯಮದ ಬೋಧನೆ ನಡೆಯುತ್ತಿದ್ದು ಎಲ್ಲರೂ ಇದರ ಉಪಯೋಗವನ್ನು ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.



ಶಾಲೆಯ ಮುಖ್ಯ ಶಿಕ್ಷಕಿ ಯಶೋಧಾ, ಎಸ್‌ಡಿಎಂಸಿ ಅಧ್ಯಕ್ಷ ನಾರಾಯಣ, ಸಿಆರ್‌ಪಿ ಶಶಿರೇಖಾ ಎಸ್‌ಡಿಎಂಸಿ ಸದಸ್ಯರು ಹಾಗೂ ಶಿಕ್ಷಕರು ಹಾಜರಿದ್ದರು.

# ದಕ್ಷಿಣ ಒಳನಾಡು ಜಿಲ್ಲೆಗಳಲ್ಲಿ ಮಳೆ?



**ಬೆಂಗಳೂರು:** ರಾಜ್ಯಾದ್ಯಂತ ಚದುರಿದಂತೆ ಹಗುರದಿಂದ ಸಾಧಾರಣ ಮಳೆಯಾಗಿದ್ದು, ಇಂದು ಭಾರಿ ಮಳೆಯಾಗುವ ಮುನ್ಸೂಚನೆಗಳಿವೆ. ಹವಾಮಾನ ಇಲಾಖೆಯು ರಾಜ್ಯದ ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಆರೆಂಜ್ ಅಲರ್ಟ್ ಘೋಷಿಸಿದೆ.

ಮುಂದಿನ ಐದು ದಿನಗಳ ಕಾಲ ರಾಜ್ಯದಲ್ಲಿ ಸರಾಸರಿ ಸಾಧಾರಣ ಮಳೆ ಮುಂದುವರೆಯಲಿದೆ. ಆದರೆ, ಇಂದು ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಗುಡುಗು, ಮಿಂಚು ಹಾಗೂ ಬಲವಾದ ಗಾಳಿ ಸಹಿತ ಭಾರಿ ಮಳೆಯಾಗಲಿದೆ ಎಂದು ಕರ್ನಾಟಕ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ತಿಳಿಸಿದೆ.

ಭಾರತೀಯ ಹವಾಮಾನ ಇಲಾಖೆ ನೀಡಿರುವ ಮುನ್ಸೂಚನೆ ಆಧರಿಸಿ ಈ ಮಾಹಿತಿ ನೀಡಲಾಗಿದೆ. ರಾಜ್ಯದ ಒಳನಾಡಿನಲ್ಲಿ ಚದುರಿದಂತೆ ಸಾಧಾರಣ ಮಳೆಯಾಗಲಿದ್ದು, ಕೆಲವೆಡೆ ಭಾರಿ ಮಳೆಯಾಗುವ ಸಾಧ್ಯತೆಗಳಿವೆ.ಕರಾವಳಿ ಹಾಗೂ ಮಲೆನಾಡು ಭಾಗದಲ್ಲಿ ವ್ಯಾಪಕವಾಗಿ ಸಾಧಾರಣ ಮಳೆಯಾಗುವ ಮುನ್ಸೂಚನೆಗಳಿವೆ. ಅದೇ ರೀತಿ ಉತ್ತರ ಒಳನಾಡಿನಲ್ಲೂ ವ್ಯಾಪಕವಾಗಿ ಮಳೆಯಾಗಲಿದೆ. ಆದರೆ, ಒಂದೆರಡು ಕಡೆ ಭಾರೀ ಮಳೆಯಾಗುವ ಲಕ್ಷಣಗಳಿವೆ.

ಭಾರಿ ಮಳೆ ಮುನ್ಸೂಚನೆ ಹಿನ್ನೆಲೆಯಲ್ಲಿ ಮುಂದಿನ ಎರಡು ದಿನಗಳ ಕಾಲ ದಕ್ಷಿಣ ಒಳನಾಡಿನ ನದಿಗಳಲ್ಲಿ ಪ್ರವಾಹದ ಮುನ್ನೆಚ್ಚರಿಕೆ ನೀಡಲಾಗಿದೆ. ಭದ್ರಾ, ಹಾರಂಗಿ, ಕೆಆರ್‌ಎಸ್, ಕಬಿನಿ, ಹೇಮಾವತಿ, ಲಿಂಗನಮಕ್ಕಿ ಜಲಾಶಯಗಳಿಗೆ ಒಳ ಹರಿವು ಹೆಚ್ಚಾಗುವ ನಿರೀಕ್ಷೆ ಇದೆ ಎಂದು ಹೇಳಲಾಗಿದೆ. ಈ ಜಲಾಶಯಗಳು ಈಗಾಗಲೇ ಭರ್ತಿಯಾಗಿದ್ದು, ಒಳಹರಿವು ಹೆಚ್ಚಾದಂತೆ ಹೊರ ಹರಿವನ್ನು ಹೆಚ್ಚಿಸಲಾಗುತ್ತದೆ. ಹೀಗಾಗಿ ನದಿ ಪಾತ್ರ ಜನವಸತಿಗಳಲ್ಲಿರುವ ಜನರು ಮುನ್ನೆಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ. ಕರಾವಳಿ ಹಾಗೂ ಮಲೆನಾಡು ಭಾಗದ ಜಿಲ್ಲೆಗಳಲ್ಲಿ ಜುಲೈನಲ್ಲಿ ಅಬ್ಬರಿಸಿದ ಮುಂಗಾರು ಮಳೆ ಆಗಸ್ಟ್‌ನಲ್ಲಿ ಕಡಿಮೆಯಾಗಿದೆ. ಈ ಭಾಗದಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗುತ್ತಿದೆ. ಉತ್ತರ ಕರ್ನಾಟಕ ಭಾಗದ ಜಿಲ್ಲೆಗಳಲ್ಲೂ ವಾಡಿಕೆಗಿಂತ ಮಳೆ ಕಡಿಮೆಯಾಗಿದೆ.

# ಆಹಾರ ಮತ್ತು ಪೌಷ್ಠಿಕ ಭದ್ರತೆ ಯೋಜನೆಯಡಿ ಹುದ್ದೆಗಳಿಗೆ ಅರ್ಜಿ

**ಬೆಂಗಳೂರು ಗ್ರಾಮಾಂತರ :** ಕೃಷಿ ಇಲಾಖೆಯಲ್ಲಿ 2024-25ನೇ ಸಾಲಿನ ಆಹಾರ ಮತ್ತು ಪೌಷ್ಠಿಕ ಭದ್ರತೆ ಯೋಜನೆಯಡಿ ಬೆಂಗಳೂರು ಜಿಲ್ಲೆಯಲ್ಲಿ ನೇರಗುತ್ತಿಗೆ ಆಧಾರದ ಮೇಲೆ ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಹೊಸದಾಗಿ ಸೃಜಿಸಿರುವ ಯೋಜನಾ ನಿರ್ವಹಣಾ ತಂಡದಲ್ಲಿ (ಕಆಖಿ) - ಜಿಲ್ಲಾ ಮಟ್ಟದ ಸಲಹೆಗಾರರು 01(ಒಂದು) ಹೊರಗುತ್ತಿಗೆ ಹುದ್ದೆ. ಇದಕ್ಕೆ ಬಿ.ಎಸ್ಸಿ ಕೃಷಿ ಪದವಿ , ಆಗ್ರೋನಮಿ / ಸಾಯಿಲ್ ಸೈನ್ಸ್/ ಪ್ಲಾಂಟ್ ಪ್ರೊಟೆಕ್ಷನ್ ಅಥವಾ ಇತರೆ ಕೃಷಿ ವಿಷಯದಲ್ಲಿ ಪದವಿ ವಿದ್ಯಾರ್ಹತೆ ಪಡೆದು ಕಂಪ್ಯೂಟರ್ ಜ್ಞಾನ ಹೊಂದಿರಬೇಕು. 02 ತಾಂತ್ರಿಕ ಸಹಾಯಕರು ಹುದ್ದೆಗೆ ಬಿ.ಎಸ್ಸಿ ಕೃಷಿ ಪದವಿ ಹಾಗೂ ಕಂಪ್ಯೂಟರ್ ಜ್ಞಾನ ಹೊಂದಿರುವವರು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಆಗಸ್ಟ್ 29 ಕೊನೆಯ ದಿನವಾಗಿದ್ದು, ಅರ್ಜಿಯನ್ನು ಜಂಟಿ ಕೃಷಿ ನಿರ್ದೇಶಕರ ಕಛೇರಿ, ಕೃಷಿ ಸಂಕೀರ್ಣ, ಎಸ್. ಕರಿಯಪ್ಪ ರಸ್ತೆ (ಕನಕಪುರ ರಸ್ತೆ) ಬನಶಂಕರಿ, ಬೆಂಗಳೂರು-560070 ಇಲ್ಲಿಗೆ ಸಲ್ಲಿಸಬಹುದಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, 1ನೇ ಮಹಡಿ, ವಿ.ಜಿ. ಕಾಂಪ್ಲೆಕ್ಸ್, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562 110.

ಸಂ: ಬಿಐಎಪಿಎ/ಟಿಪಿ/ಭೂಉಬ/51/2024-25/1183 ದಿನಾಂಕ: 17.08.2024

### ಪ್ರಕಟಣೆ

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14 (ಎ) ರ ಅಡಿಯಲ್ಲಿ ಈ ಕೆಳಕಂಡ ಅರ್ಜಿದಾರರು **ವ್ಯವಸಾಯ ಭೂಉಪಯೋಗ ವಲಯದಿಂದ ವಸತಿ ವಲಯಕ್ಕೆ ಭೂಉಪಯೋಗ** ಬದಲಾವಣೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಭೂಉಪಯೋಗ ಬದಲಾವಣೆಯ ಪ್ರಸ್ತಾವನೆಯ ವಿವರಗಳು ಈ ಕೆಳಕಂಡಂತೆ ಇರುತ್ತದೆ. ಸದರಿ ಭೂಉಪಯೋಗ ಬದಲಾವಣೆ ಪ್ರಸ್ತಾವನೆ ಬಗ್ಗೆ ಯಾವುದೇ ಆಕ್ಷೇಪಣೆಗಳಿದ್ದರೆ, ಈ ಪ್ರಕಟಣೆ ಪ್ರಕಟವಾದ ದಿನಾಂಕದಿಂದ 15 ದಿವಸಗಳೊಳಗಾಗಿ ಆಕ್ಷೇಪಣೆಗಳನ್ನು ಲಿಖಿತವಾಗಿ ಸದಸ್ಯ ಕಾರ್ಯದರ್ಶಿಗಳು, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ ಕಛೇರಿಗೆ ಸಲ್ಲಿಸಲು ತಿಳಿಸಲಾಗಿದೆ. ನಿಗಧಿತ ಅವಧಿಯ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ.

| ಕ್ರ. ಸಂ | ಅರ್ಜಿದಾರರ ಹೆಸರು | ತಾಲ್ಲೂಕು | ಹೋಬಳಿ | ಗ್ರಾಮದ ವಿವರ | ಸರ್ವೆ ನಂ. | ವಿಸ್ತೀರ್ಣ ಎ-ಗು | ಮಹಾ ಯೋಜನೆಯ ಪ್ರಕಾರ ಭೂ ಉಪಯೋಗ | ಬದಲಾವಣೆ ಕೋರಿರುವ ಭೂ ಉಪಯೋಗ |
|---|---|---|---|---|---|---|---|---|
| 1. | ಮೆ॥ ಸೆಂಟ್ರಲ್ ಗೌರ್ನಮೆಂಟ್ ಟೆಲಿಕಾಂ ಎಂಪ್ಲಾಯೀಸ್ & ರಿಟೈರ್ಡ್ ಎಂಪ್ಲಾಯೀಸ್ ಹೌಸಿಂಗ್ ಕೋ-ಆ ಸೊಸೈಟಿ ಲಿ ಪರವಾಗಿ ಪ್ರೆಸಿಡೆಂಟ್ ಸ ಬಿನ್ ಮುನಿಸ್ವಾಮಿ ನಾಯ್ಡು | ದೇವನಹಳ್ಳಿ | ಕುಂದಾಣ | ಚಿಕ್ಕಣ್ಣನ ಹೊಸಹಳ್ಳಿ | 1/10 | 1-14.08 + 0ಎ-1.08ಗು 'ಎ' ಖರಾಬು | ವ್ಯವಸಾಯ | ವಸತಿ |
| 2. | | ದೇವನಹಳ್ಳಿ | ಕುಂದಾಣ | ಚಿಕ್ಕಣ್ಣನ ಹೊಸಹಳ್ಳಿ | 3/3 | 1-10 + 0ಎ-02ಗು 'ಎ' ಖರಾಬು | ವ್ಯವಸಾಯ | ವಸತಿ |
| 3. | | ದೇವನಹಳ್ಳಿ | ಕುಂದಾಣ | ಚಿಕ್ಕಣ್ಣನ ಹೊಸಹಳ್ಳಿ | 3/6 | 0-32.08 + 0ಎ-01ಗು 'ಎ' ಖರಾಬು | ವ್ಯವಸಾಯ | ವಸತಿ |
| 4. | | ದೇವನಹಳ್ಳಿ | ಕುಂದಾಣ | ಚಿಕ್ಕಣ್ಣನ ಹೊಸಹಳ್ಳಿ | 3/7 | 0-32.08 + 0ಎ-01ಗು 'ಎ' ಖರಾಬು | ವ್ಯವಸಾಯ | ವಸತಿ |
| 5. | | ದೇವನಹಳ್ಳಿ | ಕುಂದಾಣ | ಚಿಕ್ಕಣ್ಣನ ಹೊಸಹಳ್ಳಿ | 4/5 | 1-06 + 0ಎ-01ಗು 'ಎ' ಖರಾಬು | ವ್ಯವಸಾಯ | ವಸತಿ |
| 6. | ಶ್ರೀ ಬಿ.ಸಿ.ಮುನಿಯಪ್ಪ ಬಿನ್ ಚಿನ್ನಸ್ವಾಮಿ ಉ॥ ಚಿನ್ನಸ್ವಾಮಪ್ಪ | ದೇವನಹಳ್ಳಿ | ಕುಂದಾಣ | ಚಿಕ್ಕಣ್ಣನ ಹೊಸಹಳ್ಳಿ | 3/5 | 0-31 + 0ಎ-0.08ಗು 'ಎ' ಖರಾಬು | ವ್ಯವಸಾಯ | ವಸತಿ |
| 7. | ಶ್ರೀ ಗುಳ್ಳಪ್ಪ ಬಿನ್ ಚಿನ್ನಸ್ವಾಮಿ ಉ॥ ಚಿನ್ನಸ್ವಾಮಪ್ಪ | ದೇವನಹಳ್ಳಿ | ಕುಂದಾಣ | ಚಿಕ್ಕಣ್ಣನ ಹೊಸಹಳ್ಳಿ | 3/8 | 0-30 + 0ಎ-0.08ಗು 'ಎ' ಖರಾಬು | ವ್ಯವಸಾಯ | ವಸತಿ |
| 8. | ಶ್ರೀ ಲಿಂಗರಾಜು ಬಿ ಬಿನ್ ಬತ್ಯಪ್ಪ & ಶ್ರೀ ವಿನೋದ್ ಕುಮಾರ್ ಬಿನ್ ಬತ್ಯಪ್ಪ | ದೇವನಹಳ್ಳಿ | ಕುಂದಾಣ | ಚಿಕ್ಕಣ್ಣನ ಹೊಸಹಳ್ಳಿ | 4/2 | 0-34 + 0ಎ-01ಗು 'ಎ' ಖರಾಬು | ವ್ಯವಸಾಯ | ವಸತಿ |
| 9. | ಶ್ರೀ ಸಿಂಗ್ರಪ್ಪ - ಚಿಕ್ಕಅರಸಪ್ಪ | ದೇವನಹಳ್ಳಿ | ಕುಂದಾಣ | ಚಿಕ್ಕಣ್ಣನ ಹೊಸಹಳ್ಳಿ | 4/3 | 0-34 | ವ್ಯವಸಾಯ | ವಸತಿ |
| 10. | ಶ್ರೀ ಸಿಂಗ್ರಪ್ಪ - ಚಿಕ್ಕಅರಸಪ್ಪ | ದೇವನಹಳ್ಳಿ | ಕುಂದಾಣ | ಚಿಕ್ಕಣ್ಣನ ಹೊಸಹಳ್ಳಿ | 4/4 | 0-34 | ವ್ಯವಸಾಯ | ವಸತಿ |

**ಷರಾ :-** ಪ್ರಸ್ತಾವನೆಯಲ್ಲಿನ ಅರ್ಜಿದಾರರುಗಳು ಪ್ರಶ್ನಿತ ಜಮೀನುಗಳನ್ನು ವ್ಯವಸಾಯ ಉಪಯೋಗಕ್ಕೆ ಬಳಸಿಕೊಳ್ಳಲು ಸಾಧ್ಯವಾಗುತ್ತಿಲ್ಲವೆಂದೂ, ಹಾಗೂ ಪರಿಸರದಲ್ಲಿ ವಾಸದ ಬೆಳವಣಿಗೆಗೆ ಅತಿ ಹೆಚ್ಚು ಬೇಡಿಕೆ ಇದ್ದು, ಸದರಿ ಜಮೀನುಗಳನ್ನು ವ್ಯವಸಾಯ ವಲಯದಿಂದ ವಸತಿ ವಲಯಕ್ಕೆ ಭೂಉಪಯೋಗ ಬದಲಾವಣೆಗೊಂಡ ನಂತರ ವಸತಿ ಉದ್ದೇಶಕ್ಕೆ ಭೂಪರಿವರ್ತಿಸಿ, ಪ್ರಾಧಿಕಾರದಿಂದ ಅನುಮೋದನೆ ಪಡೆದು, ಯೋಜನಾ ಬದ್ಧ ಅಭಿವೃದ್ಧಿ ಕಾರ್ಯಗಳಿಂದ ಸ್ಥಳೀಯರಿಗೆ ಉದ್ಯೋಗಾವಕಾಶ ಸೃಷ್ಟಿ ಹಾಗೂ ಮೂಲ ಸೌಕರ್ಯ ಅಭಿವೃದ್ಧಿಯಾಗುವುದರಿಂದ ಸಾರ್ವಜನಿಕ ಹಿತಾಸಕ್ತಿ ಅಂಶ ಅಡಗಿದೆ ಎಂದು ತಿಳಿಸುತ್ತಾ ಸದರಿ ಪ್ರದೇಶವನ್ನು **'ವ್ಯವಸಾಯ ಭೂಉಪಯೋಗ ವಲಯ'** ದಿಂದ **'ವಸತಿ ಭೂಉಪಯೋಗ ವಲಯ'** ಕ್ಕೆ ಭೂಉಪಯೋಗ ಬದಲಾವಣೆ ಮಾಡಿಕೊಳ್ಳಲು ಇಚ್ಛಿಸಿರುವುದಾಗಿ ತಿಳಿಸಿರುತ್ತಾರೆ.

ಸಹಿ/- ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು
ಹಾಗೂ ಸದಸ್ಯ ಕಾರ್ಯದರ್ಶಿಗಳು, ಬಿ.ಐ.ಎ.ಎ.ಪಿ.ಎ, ದೇವನಹಳ್ಳಿ

ವಾಸಾಸಂಇ/ವಾಪ್ರ/ಜಿಎ/1534/2024-25

## ಕೃಷಿ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಜಿಲ್ಲೆಯಲ್ಲಿ ಬೆಳೆಯುವ ಕೃಷಿ ಬೆಳೆಗಳ ಉತ್ಪಾದನೆ ಮತ್ತುಉತ್ಪಾದಕತೆ ಹೆಚ್ಚಿಸಲು ರೈತರಲ್ಲಿ ಸ್ವರ್ಧಾತ್ಮಕ ಮನೋಬಾವನೆಯನ್ನು ಉತ್ತೇಜಿಸುವುದು ಕೃಷಿ ಪ್ರಶಸ್ತಿ ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ. ಜಿಲ್ಲೆಯಲ್ಲಿ ಕೃಷಿ ಪ್ರಶಸ್ತಿ ನೀಡುವ ಕಾರ್ಯಕ್ರಮವನ್ನು 2024–25ನೇ ಸಾಲಿನಲ್ಲಿ ಅನುಷ್ಠಾನಗೊಳಿಸಿದ್ದು, ಕೃಷಿ ಪ್ರಶಸ್ತಿಯಡಿ ಮುಂಗಾರು ಬೆಳೆ ಸ್ವರ್ಧೆಗೆ ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಜಿಲ್ಲೆಯಲ್ಲಿ ಎಲ್ಲಾ ತಾಲ್ಲೂಕಿನಲ್ಲೂ ಹೆಚ್ಚಾಗಿ ಬೆಳೆಯುವ ಮಳೆಯಾಶ್ರಿತ ರಾಗಿ ಬೆಳೆಯನ್ನು ಜಿಲ್ಲಾ ಮಟ್ಟದ ಬೆಳೆ ಸ್ವರ್ಧೆಗೆ ಪರಿಗಣಿಸಿದೆ. ತಾಲ್ಲೂಕು ಮಟ್ಟದಲ್ಲಿ ಹೆಚ್ಚಿನ ವಿಸ್ತೀರ್ಣದಲ್ಲಿ ಬೆಳೆಯುವ ಬೆಳೆಗಳನ್ನು ಕೃಷಿ ಪ್ರಶಸ್ತಿಗೆ ಪರಿಗಣಿಸಲಾಗುತ್ತದೆ.

ಅದರಂತೆ ಚಿಕ್ಕಬಳ್ಳಾಪುರ, ಗುಡಿಬಂಡೆ, ಚಿಂತಾಮಣಿ ಹಾಗೂ ಶಿಡ್ಲಘಟ್ಟ ತಾಲ್ಲೂಕುಗಳಲ್ಲಿ ರಾಗಿ (ಮಳೆಯಾಶ್ರಿತ), ಬಾಗೇಪಲ್ಲಿ ತಾಲ್ಲೂಕಿನಲ್ಲಿ ನೆಲಗಡಲೆ (ಮಳೆಯಾಶ್ರಿತ) ಮತ್ತು ಗೌರಿಬಿದನೂರು ತಾಲ್ಲೂಕುಗಳಲ್ಲಿ ತೊಗರಿ (ಮಳೆಯಾಶ್ರಿತ) ಬೆಳೆಯನ್ನು ಕೃಷಿ ಪ್ರಶಸ್ತಿಗೆ ಪರಿಗಣಿಸಲಾಗಿದೆ. ರೈತರು ಮತ್ತು ರೈತ ಮಹಿಳೆಯರು citizen login ಬಳಸಿ ಅಥವಾ RSk login ಮೂಲಕ ಹತ್ತಿರದ ರೈತ ಸಂಪರ್ಕ ಕೇಂದ್ರ, ಸಾರ್ವಜನಿಕ ಸೇವಾ ಕೇಂದ್ರದಲ್ಲಿ FID ಬಳಸಿಕೊಂಡು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲ್ಲಿ ಆಗಸ್ಟ್ 31 ಕೊನೆಯ ದಿನವಾಗಿದೆ. ನೊಂದಾಯಿಸಿಕೊಂಡ ರೈತರ ತಾಕಿನಲ್ಲಿ ಬೆಳೆ ಕಟಾವು ಪ್ರಯೋಗಗಳನ್ನು ಕೈಗೊಂಡು ಜಿಲ್ಲಾದ್ಯಂತ ಅತಿ ಹೆಚ್ಚು ಇಳುವರಿಯನ್ನು ಹೊಂದಿರುವ ಮೊದಲ 3(ಮೂರು) ರ ಶ್ರೇಣಿಯ ರೈತರನ್ನು ಜಿಲ್ಲಾ ಮಟ್ಟಕ್ಕೆ ಪರಿಗಣಿಸಲಾಗುವುದು. ತದನಂತರ ಉಳಿದ ರೈತರನ್ನು ಇಳುವರಿ ಶ್ರೇಣಿಯ ಅನುಗುಣವಾಗಿ ತಾಲ್ಲೂಕು ಮಟ್ಟಕ್ಕೆ ಪರಿಗಣಿಸಲಾಗುವುದು. ಬೆಳೆ ಸ್ವರ್ಧೆಯಲ್ಲಿ ಭಾಗವಹಿಸಲು ಯಾವುದೇ ಅರ್ಜಿ ಶುಲ್ಕ ಇರುವುದಿಲ್ಲ.

ಆದ್ದರಿಂದ ಹೆಚ್ಚಿನ ಸಂಖ್ಯೆಯಲ್ಲಿ ರೈತರು ಮತ್ತು ರೈತ ಮಹಿಳೆಯರು ಕೃಷಿ ಪ್ರಶಸ್ತಿ ಯೋಜನೆಯ ಪ್ರಯೋಜನವನ್ನು ಪಡೆದುಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ, ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದೆಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೂಕ್ಷ್ಮ ನೀರಾವರಿ ಘಟಕಗಳನ್ನು ಪಡೆಯಲು ರೈತರಿಂದ ಅರ್ಜಿ

**ಚಿಕ್ಕಬಳ್ಳಾಪುರ:** 2024–25ನೇ ಸಾಲಿನ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಮತ್ತು ಅಟಲ್ ಭೂಜಲ್ ಯೋಜನೆಯಡಿ ಕೃಷಿ ಬೆಳೆಗಳಲ್ಲಿ ನೀರಿನ ಸಮರ್ಥ ಬಳಕೆಯನ್ನು ಉತ್ತೇಜಿಸಲು ಕೃಷಿ ಇಲಾಖೆ ವತಿಯಿಂದ ತುಂತುರು ಮತ್ತು ಹನಿ ನೀರಾವರಿ ಘಟಕಗಳನ್ನು ಶೇ.90%ರ ರಿಯಾಯಿತಿ ಧರದಲ್ಲಿ ವಿತರಿಸಲು ಕಾರ್ಯಕ್ರಮದಡಿ ರೈತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅಗತ್ಯ ದಾಖಲೆಗಳು: ಫಹಣಿ, ಕೃಷಿ ಬೆಳೆ ದೃಢೀಕರಣ ಪತ್ರ, ಕೊಳವೆಬಾವಿ (ನೀರಾವರಿ ಮೂಲ ದೃಢೀಕರಣ ಪತ್ರ), ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಗಳ ನಿರಾಕ್ಷೇಪಣೆ ಪತ್ರ, 100ರೂ. ಸ್ಟಾಂಪ್ ಪೇಪರ್, ಬ್ಯಾಂಕ್ ಪಾಸ್ ಪುಸ್ತಕ, ಆಧಾರ್ ಪ್ರತಿ, 4 ಪಾಸ್‌ಪೋರ್ಟ್ ಭಾವಚಿತ್ರ, ಪ.ಜಾತಿ/ಪ.ಪಂಗಡ ರೈತರು ಜಾತಿ ಪ್ರಮಾಣ ಪತ್ರ, ಸಣ್ಣ/ಅತಿ ಸಣ್ಣ ರೈತರ ದೃಢೀಕರಣ ಪತ್ರ. (ಹನಿನೀರಾವರಿ ಘಟಕಗಳಿಗೆ). ಮೇಲ್ಕಂಡ ದಾಖಲಾತಿಗಳನ್ನು ಅರ್ಜಿಯೊಂದಿಗೆ ತಮ್ಮ ವ್ಯಾಪ್ತಿಯ ರೈತ ಸಂಪರ್ಕ ಕೇಂದ್ರಗಳಲ್ಲಿ ಒದಗಿಸಿ ಕೆ.ಕಿಸಾನ್ ತಂತ್ರಾಂಶದಲ್ಲಿ ನೊಂದಾಯಿಸಿಕೊಂಡು ಜೇಷ್ಠತಾ ಆಧಾರದ ಮೇಲೆ ತುಂತುರು/ಹನಿನೀರಾವರಿ ಘಟಕಗಳನ್ನು ಸಹಾಯಧನ ಅಡಿಯಲ್ಲಿ ಪಡೆಯಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಹತ್ತಿರದರೈತ ಸಂಪರ್ಕ ಕೇಂದ್ರದ ಅಧಿಕಾರಿಗಳು ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದೆಂದು ಗುಡಿಬಂಡೆ ತಾಲ್ಲುಕಿನ ಸಹಾಯಕ ಕೃಷಿ ನಿರ್ದೇಶಕರಾದ ಎ.ಕೇಶವರೆಡ್ಡಿ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೃಷಿ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಕೃಷಿ ವಲಯದ ಉತ್ಪಾದನೆ ಹೆಚ್ಚಿಸುವುದು ಹಾಗೂ ರೈತರಲ್ಲಿ ಸ್ವರ್ದಾತ್ಮಕ ಮನೋಭಾವ ಬೆಳಸುವುದೇ ಕೃಷಿ ಪ್ರಶಸ್ತಿ ಯೊಜನೆಯ ಮುಖ್ಯ ಉದ್ದೇಶವಾಗಿರುತ್ತದೆ. ಸದರಿ ಯೋಜನೆಯಡಿ ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟಗಳಲ್ಲಿ ಬೆಳೆ ಸ್ಪರ್ದೆಗೆ ನೊಂದಾಯಿಸಿ ಅತಿ ಹೆಚ್ಚು ಇಳುವರಿ ಪಡೆದ ರೈತರನ್ನು ಗುರ್ತಿಸಿ ಪ್ರಥಮ, ದ್ವಿತೀಯ ಮತ್ತು ತೃತಿಯ ಬಹುಮಾನಗಳನ್ನು ನೀಡಲಾಗುವುದು. ಪ್ರಸ್ತುತ ಮುಂಗಾರು ಹಂಗಾಮಿನಲ್ಲಿ ಕೃಷಿ ಪ್ರಶಸ್ತಿ ಕಾರ್ಯಕ್ರಮದಡಿ ಬೆಳೆ ಸ್ಪರ್ದೆಗೆ ಅರ್ಜಿಗಳನ್ನು ಆನ್‌ಲೈನ್ ಮೂಲಕ ಆಹ್ವಾನಿಸಿದ್ದು ಗುಡಿಬಂಡೆ ತಾಲ್ಲೂಕಿನಲ್ಲಿ ಅತಿ ಹೆಚ್ಚು ಬೆಳೆ ಆವರಿಸಿರುವ ರಾಗಿ(ಮಳೆ ಆಶ್ರಿತ) ಬೆಳೆ ಪರಿಗಣಿಸಿರುತ್ತದೆ. ರೈತರು ಮತ್ತು ರೈತ ಮಹಿಳೆಯರಿಗೆ ಪ್ರತ್ಯೇಕ ಸ್ಪರ್ಧೆ ಇರುತ್ತದೆ ರಾಗಿ ಮಳೆಯಾಶ್ರಿತ ಪ್ರದೇಶದಲ್ಲಿ ಬೆಳೆದಿರುವ ಮತ್ತು ಕೃಷಿ ಪ್ರಶಸ್ತಿಗೆ ನೊಂದಾಯಿಸಲು ಆಸಕ್ತಿ ಇರುವ ರೈತರು ಅರ್ಜಿಗಳನ್ನು ಹತ್ತಿರದ ರೈತ ಸಂಪರ್ಕ ಕೇಂದ್ರ, ಸಾರ್ವಜನಿಕ ಸೇವಾ ಕೇಂದ್ರದಲ್ಲಿ ಈಖಆ ಸಂಖ್ಯೆಯನ್ನು ಬಳಸಿಕೊಂಡು ನೊಂದಾಯಿಸಿಕೊಳ್ಳಲು ದಿನಾಂಕ:31–08–2024 ಕೊನೆ ದಿನಾಂಕವಾಗಿರುತ್ತದೆ. ದಾಖಲಾತಿಗಳು: ನಿಗಧಿತ ನಮೂನೆ ಅರ್ಜಿ, ಫಹಣಿ, ಬ್ಯಾಂಕ್ ಪಾಸ್ ಪುಸ್ತಕ ಪ್ರತಿ, ಆಧಾರ್ ಕಾರ್ಡ್ ಪ್ರತಿ, ಇತ್ತೀಚಿನ ಪಾಸ್ ಪೋರ್ಟ್ ಭಾವಚಿತ್ರ, ಜಾತಿ ಪ್ರಮಾಣ ಪತ್ರ (ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ರೈತರಿಂದ) ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರದ ಅಧಿಕಾರಿಗಳನ್ನು ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದೆಂದು ಗುಡಿಬಂಡೆ ತಾಲ್ಲುಕಿನ ಸಹಾಯಕ ಕೃಷಿ ನಿರ್ದೇಶಕರಾದ ಎ.ಕೇಶವರೆಡ್ಡಿ ತಿಳಿಸಿದ್ದಾರೆ.

## ಕೆ.ಸಿ.ಪಾಳ್ಯದಲ್ಲಿ ಆಟೋಟ ಸ್ಪರ್ಧೆ

**ಹುಳಿಯಾರು:** ಹುಳಿಯಾರು ಹೋಬಳಿಯ ಕೆ.ಸಿ.ಪಾಳ್ಯ ಸರ್ಕಾರಿ ಕಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ 78 ನೇ ಸ್ವತಂತ್ರ ದಿನಾಚರಣೆಯನ್ನು ಆಚರಿಸಲಾಯಿತು. ಶಾಲೆಯ ಮಕ್ಕಳು ನೃತ್ಯ ಡ್ಯಾನ್ಸ್ ನಾಟಕ ದೊಂದಿಗೆ ಪೋಷಕರನ್ನು ಮನರಂಜಿಸಿದರು. ಮಕ್ಕಳಿಗೆ ಆಟೋಟ ಸ್ಪರ್ಧೆ ನಡೆಸಿ ಗೆದ್ದಂತ ಮಕ್ಕಳಿಗೆ ಗ್ರಾಮದ ಮುಖಂಡರಾದ ನಗಾರಿ ಹೊನ್ನಪ್ಪ ಬಹುಮಾನ ವಿತರಿಸಿದರು. ಮುಖ್ಯ ಶಿಕ್ಷಕ ಮಲ್ಲೇಶಪ್ಪ, ಸಹ ಶಿಕ್ಷಕಿ ಶುಭ ಹಾಜರಿದ್ದರು.

# ಧರ್ಮಸ್ಥಳದಿಂದ 2 ಲಕ್ಷ ರೂ, ವಿತರಣೆ



**ಗಾಣಧಾಳು ಪಂಚಾಯಿತಿ ವ್ಯಪ್ತಿಯ ಗುರುವಾಪುರ ಗ್ರಾಮದ ಶ್ರೀ ಕರಿಯಮ್ಮ ದೇವಿ ದೇವಸ್ಥಾನದ ಜೀರ್ಣೋದ್ದಾರಕ್ಕಾಗಿ ಶ್ರೀ ಕ್ಷೇತ್ರ ಧರ್ಮಸ್ಥಳದಿಂದ ಮಂಜೂರುಗೊಂಡ ರೂ.200000/– ಡಿಡಿ ಯನ್ನು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲ್ಲೂಕು ಯೋಜನಾಧಿಕಾರಿಗಳಾದ ರಾಮಚಂದ್ರ, ಡಿ ರವರು, ಸಮಿತಿಯ ಅಧ್ಯಕ್ಷರಾದ ಕಾಂತರಾಜುವರಿಗೆ ನೀಡಿದರು.**

**ಹುಳಿಯಾರು :** ಹುಳಿಯಾರು ಹೋಬಳಿಯ ಗಾಣಧಾಳು ಪಂಚಾಯಿತಿ ವ್ಯಪ್ತಿಯ ಗುರುವಾಪುರ ಗ್ರಾಮದ ಶ್ರೀ ಕರಿಯಮ್ಮ ದೇವಿ ದೇವಸ್ಥಾನದ ಜೀರ್ಣೋದ್ದಾರಕ್ಕಾಗಿ ಶ್ರೀ ಕ್ಷೇತ್ರ ಧರ್ಮಸ್ಥಳದಿಂದ ಮಂಜೂರುಗೊಂಡ ರೂ.200000/– ಡಿಡಿ ಯನ್ನು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲ್ಲೂಕು ಯೋಜನಾಧಿಕಾರಿಗಳಾದ ರಾಮಚಂದ್ರ ಡಿ ರವರು, ಸಮಿತಿಯ ಅಧ್ಯಕ್ಷರಾದ ಕಾಂತರಾಜುವರಿಗೆ ನೀಡಿದರು. ಈ ಸಂದರ್ಭದಲ್ಲಿ ಹೊಸದಾಗಿ ಮಾಶಾಸನ ಮಂಜೂರು ಗೊಂಡ ನಿಂಗಮ್ಮನವರಿಗೆ ಮಂಜೂರಾತಿ ಪತ್ರವನ್ನು ಒಕ್ಕೂಟದ ಅಧ್ಯಕ್ಷರಾದ ಕೃಷ್ಣಮೂರ್ತಿ ಅವರು ನೀಡಿದರು. ಈ ಕಮಿಟಿಯ ಕಾರ್ಯದರ್ಶಿಗಳಾದ ಲಕ್ಷ್ಮೀಶ್, ಭದ್ರಯ್ಯ, ಮೇಲ್ವಿಚಾರಕರಾದ ನರಸಿಂಹರಾಜು, ಸ್ಥಳೀಯ ಸೇವಾಪ್ರತಿನಿಧಿಯಾದ ಆಶಿಯ ಮತ್ತು ಸಂಘದ ಗ್ರಾಮಸ್ಥರು ಉಪಸ್ಥಿತರಿದ್ದರು.

# ಪ್ರವಾಸೋದ್ಯಮ ಮಧ್ಯಸ್ಥಿಕೆದಾರರ ಸಮಾವೇಶ



**ಬೆಂಗಳೂರು:** ರಾಜ್ಯದ ಪ್ರವಾಸೋದ್ಯಮ ಅಭಿವೃದ್ಧಿಗೆ ಮತ್ತು ಆ ಮೂಲಕ ರಾಜ್ಯದತ್ತ ವಿಶ್ವದಾದ್ಯಂತದ ಪ್ರವಾಸಿಗರನ್ನು ಆಕರ್ಷಿಸುವ ಸಲುವಾಗಿ ಪ್ರವಾಸೋದ್ಯಮ ಇಲಾಖೆಯು ದೇಶ ವಿದೇಶಗಳಲ್ಲಿ ಮೇಳಗಳನ್ನು ಆಯೋಜಿಸಿ ಮಾಹಿತಿ ನೀಡಲಾಗುತ್ತಿದೆ ಎಂದು ಇಲಾಖೆ ನಿರ್ದೇಶಕ ಡಾ. ಕೆ.ವಿ. ರಾಜೇಂದ್ರ ಅವರು ತಿಳಿಸಿದರು.

ರಾಜ್ಯದಲ್ಲಿ ಪ್ರವಾಸೋದ್ಯಮವನ್ನು ಅವಲಂಭಿಸಿ ವ್ಯವಹಾರ ವಹಿವಾಟುಗಳನ್ನು ನಡೆಸುತ್ತಿರುವ ಕ್ಷೇತ್ರದ ಮಧ್ಯಸ್ಥಿಕೆದಾರರೊಂದಿಗೆ ಸಂವಾದ ನಡೆಸಿದ ಅವರು, ಪ್ರವಾಸಿಗರನ್ನು ರಾಜ್ಯದತ್ತ ಆಕರ್ಷಿಸುವ ಸಲುವಾಗಿ ಸರ್ಕಾರ ಹಮ್ಮಿಕೊಂಡಿರುವ ಯೋಜನೆಗಳ ಬಗ್ಗೆ ವಿವರಣೆ ನೀಡಿದರು ಮತ್ತು ಪ್ರವಾಸೋದ್ಯಮ ಚಟುವಟಿಕೆಗಳಲ್ಲಿ ತೊಡಗಿಕೊಳ್ಳಲು ಅನುವಾಗುವಂತೆ ಬ್ಯಾಂಕ್‌ಗಳಿಂದ ಸಿಗುವ ಆರ್ಥಿಕ ಸಹಾಯ ಮತ್ತು ಇತರೆ ಉತ್ತೇಜಕ ಅನುಕೂಲಗಳ ಬಗ್ಗೆ ಮಾಹಿತಿ ನೀಡಿದರು.

ರಾಜ್ಯದ ಪ್ರವಾಸಿ ತಾಣಗಳ ಬಗ್ಗೆ ಪ್ರಚಾರ ಕೈಗೊಳ್ಳಲು ಮತ್ತು ಪ್ರವಾಸೋದ್ಯಮ ವಹಿವಾಟಿನಲ್ಲಿ ತೊಡಗಿಕೊಂಡಿರುವ ಉದ್ದಿಮೆ ಮತ್ತು ಉದ್ಯಮಿಗಳ ಸಲಹೆ ಸೂಚನೆಗಳನ್ನು ಆಲಿಸುವ ಮೂಲಕ ಮುಂದಡಿ ಇರಿಸಲು ರಾಜ್ಯ ಪ್ರವಾಸೋದ್ಯಮ ಇಲಾಖೆಯು ಪ್ರವಾಸೋದ್ಯಮ ಸೋಸೈಟಿ ಜತೆಗೂಡಿ ವಿವಿಧೆಡೆ ಇಂತಹ ಸಂವಾದ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ ಎಂದೂ ರಾಜೇಂದ್ರ ತಿಳಿಸಿದರು. ಈ ಸಂವಾದ ಕಾರ್ಯಕ್ರಮದಲ್ಲಿ ರಾಜ್ಯದಾದ್ಯಂತದಿಂದ ಆಗಮಿಸಿದ್ದ ಟ್ರಾವೆಲ್ ಏಜೆಂಟರುಗಳು, ಬ್ಲಾಗ್ ಬರಹಗಾರರು, ಇವೆಂಟ್ ಸಂಯೋಜಕರು, ಮೈಸ್ ಸಂಯೋಜಕರು, ಪ್ರವಾಸೋದ್ಯಮ ಮಾಧ್ಯಮ ಸಲಹೆಗಾರರು, ಉದ್ಯಮಿಗಳು ಪಾಲ್ಗೊಂಡು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ಸಮಾರಂಭದಲ್ಲಿ ಪ್ರವಾಸೋದ್ಯಮ ಇಲಾಖೆಯ ಬೆಳಗಾವಿ ವಿಭಾಗದ ಜಂಟಿ ನಿರ್ದೇಶಕಿ ಸೌಮ್ಯ ಬಾಪಟ್, ಸಾಂಬ್ರಾ ವಿಮಾನ ನಿಲ್ದಾಣದ ನಿರ್ದೇಶಕ ಎಸ್. ತ್ಯಾಗರಾಜನ್, ಉದ್ಯಮಿ ವಿಠಲ ಹೆಗಡೆ, ಕರ್ನಾಟಕ ಪ್ರವಾಸೋದ್ಯಮ ಸೊಸೈಟಿ ಕಾರ್ಯದರ್ಶಿ ಮನು ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಬೇಲೂರು ಪುರಸಭೆ ಅಧ್ಯಕ್ಷ ಚುನಾವಣೆ

# ಕಾಂಗ್ರೆಸ್ ಸದಸ್ಯರಲ್ಲಿ ಒಡಕು ನಿವಾರಣೆಗೆ ವಿಪ್ ಜಾರಿ ಸಾಧ್ಯತೆ?

**ಬೇಲೂರು:** ಇಲ್ಲಿನ ಪುರಸಭೆಯ ಅಧ್ಯಕ್ಷ ಸ್ಥಾನಕ್ಕೆ ಆಗಸ್ಟ್ 19 ರಂದು ಸೋಮವಾರ ಚುನಾವಣೆ ನಡೆಯಲಿದೆ.

23 ಸದಸ್ಯರನ್ನು ಒಳಗೊಂಡ ಪುಸಭೆಯಲ್ಲಿ ಸಾಮಾನ್ಯ ಮೀಸಲಿಗೆ ನಿಗಧಿಯಾಗಿರುವ ಅಧ್ಯಕ್ಷ ಸ್ಥಾನಕ್ಕೆ 17 ಸದಸ್ಯ ಬಲದ ಆಡಳಿತಾರೂಢ ಕಾಂಗ್ರೆಸ್ ಪಕ್ಷ ಹೊರತು ಪಡಿಸಿ 5 ಸ್ಥಾನ ಹೊಂದಿರುವ ಜೆಡಿಎಸ್, 1 ಸ್ಥಾನ ಇರುವ ಬಿಜೆಪಿಯ ಯಾರೂ ಸ್ವಧಿಸುತ್ತಿಲ್ಲ. ಆದರೆ ಆಡಳಿತಾರೂಢ ಕಾಂಗ್ರೆಸ್ಸಿನ 17 ಸದಸ್ಯರ ಪೈಕಿ ಈ ಹಿಂದೆ ಒಂದು ಬಾರಿ ಅಧ್ಯಕ್ಷರಾಗಿದ್ದ ಹಾಲಿ ಸದಸ್ಯ ಜಿ.ಶಾಂತಕುಮಾರ್, ಬಿ.ಗಿರೀಶ್, ಸದಸ್ಯರಾದ ಎ.ಆರ್.ಅಶೋಕ್, ಜಮಾಲುದ್ದೀನ್, ಭರತ್ ಆಕಾಂಕ್ಷಿಗಳಾಗಿದ್ದರೂ ಪ್ರಬಲ ಆಕಾಂಕ್ಷಿಗಳಾಗಿ ಜಿ.ಶಾಂತಕುಮಾರ್ ಹಾಗೂ ಎ.ಆರ್.ಅಶೋಕ್ ಇರುವುದು ಸ್ಪಷ್ಟವಾಗಿದೆ.

ಬೇಲೂರು ಕಾಂಗ್ರೆಸ್ಸಿನಲ್ಲಿ ಗುಂಪುಗಾರಿಕೆ ಇದ್ದರೂ ಸಭೆ, ಸಮಾರಂಭ, ಸಮಾವೇಶ ಇತ್ಯಾದಿ ಸಂದರ್ಭ ಒಗ್ಗಟ್ಟು ಪ್ರದರ್ಶನ ತೋರುವುದು ಸಹಜ. ಆದರೆ ಪುರಸಭೆಯ ಅಧ್ಯಕ್ಷ ಸ್ಥಾನ ಚುನಾವಣೆ ವೇಳೆ 17 ಸದಸ್ಯರಲ್ಲಿ ಇಬ್ಬಾಗದ ಸೂಚನೆಯಿದೆ. ಇವರಲ್ಲಿ ಜಿ.ಶಾಂತಕುಮಾರ್ ಹಾಗೂ ಎ.ಆರ್.ಅಶೋಕ್ ಪರವಾಗಿ ಸದಸ್ಯರಿದ್ದರೂ, ಯಾರ ಪರವಾಗಿ ಎಷ್ಟಿದ್ದಾರೆ ಎಂಬುದು ಸ್ಪಷ್ಟವಾಗಿ ಗೋಚರವಿಲ್ಲ. ಆದರೆ ಆಕಾಂಕ್ಷಿಗಳ ಬೆಂಬಲಿಗರು ಮಾತ್ರ ನಮ್ಮ ನಾಯಕನ ಪರವಾಗಿ ಕಾಂಗ್ರೆಸ್ಸಿನ 16 ಸದಸ್ಯರು ಇದ್ದಾರೆ, 13 ಇದ್ದಾರೆ ಎಂಬಿತ್ಯಾದಿ ಲೆಕ್ಕಾಚಾರದಲ್ಲಿ ತೊಡಗಿದ್ದಾರೆ.



ಮಾಜಿ ಸಚಿವ ಬಿ.ಶಿವರಾಂ ಅವರ ಮನಸ್ಸಿನಲ್ಲಿ ಏನಿದೆಯೋ ಗೊತ್ತಿಲ್ಲ, ಆದರೆ ಇದೀಗ ಅಧ್ಯಕ್ಷ ಆಕಾಂಕ್ಷಿಗಳೆಲ್ಲರೂ ಬಿ.ಶಿವರಾಂ ಪರ ಇರುವುದರಿಂದ ಅವರ ಸಲಹೆ, ಸೂಚನೆಯಂತೆ ಆಕಾಂಕ್ಷಿಗಳು ನಡೆದುಕೊಳ್ಳುವ ಅನಿವಾರ್ಯವೂ ಇದೆ. ಅಧ್ಯಕ್ಷರಾಗುವವರಿಗೆ 23 ಸದಸ್ಯರಲ್ಲಿ 12 ಸದಸ್ಯರ ಬೆಂಬಲ ಅಗತ್ಯವಿದೆ. 17 ಸದಸ್ಯರು ಕಾಂಗ್ರೆಸ್ಸಿಗರಿದ್ದು ಇವರಲ್ಲಿ ಎ.ಆರ್.ಅಶೋಕ್, ಜಿ.ಶಾಂತಕುಮಾರ್ ಇವರು ಸ್ವಪಕ್ಷದ 12 ಸದಸ್ಯರ ಮತವನ್ನಂತೂ ಪಡೆಯಬೇಕಿದ್ದು ಇಬ್ಬರಲ್ಲಿ ಯಾರೊಬ್ಬರೂ ಈ ಸಂಖ್ಯೆ ಪಡೆಯಲಾಗದೆ ಇದ್ದಲ್ಲಿ 12 ಮತ ಸರಿದೂಗಿಸಿಕೊಳ್ಳಲು ಜೆಡಿಎಸ್, ಬಿಜೆಪಿ ಬುಟ್ಟಿಗೆ ಕೈ ಹಾಕಲೇಬೇಕಿದೆ. ಈ ನಿರೀಕ್ಷೆಯಲ್ಲಿ ಸಹಜವಾಗಿಯೆ ಜೆಡಿಎಸ್, ಬಿಜೆಪಿ ಸದಸ್ಯರು ಇದ್ದಾರೆ ಎನ್ನಲಾಗಿದೆ.

ಈ ನಡುವೆ ಜೆಡಿಎಸ್ ಪಕ್ಷದ 5 ಸದಸ್ಯರು ತಮ್ಮದೇ ಆಲೋಚನೆಯಲ್ಲಿ ತೊಡಗಿದ್ದು ಯಾರಿಗೆ ಬೆಂಬಲ ನೀಡಬೇಕೆಂಬ ಕುರಿತು ಚರ್ಚೆಯಲ್ಲಿ ನಿರತರಾಗಿದ್ದಾರಂತೆ. ಕಾಂಗ್ರೆಸ್ಸಿನ ಗೊಂದಲದ ಲಾಭ ಪಡೆಯಲು ಯತ್ನಿಸಿರುವ ಜೆಡಿಎಸ್ ಸದಸ್ಯರೊಬ್ಬರು ಅತೃಪ್ತ ಕಾಂಗ್ರೆಸ್ ಸದಸ್ಯರ ಬೆಂಬಲ ಪಡೆಯಲು ಸನ್ನದ್ದರಾಗಿದ್ದು ಈಗಾಗಲೇ ಒಂದು ಸುತ್ತಿನ ಮಾತುಕತೆ ಮುಗಿಸಿದ್ದಾರೆ ಎಂದು ಹೇಳಲಾಗಿದೆ. ಜೆಡಿಎಸ್ ನಡೆಯನ್ನು ಸೂಕ್ಷ್ಮವಾಗಿ ಗಮನಿಸಿರುವ ಕಾಂಗ್ರೆಸ್ ಹೈಕಮಾಂಡ್ ಅರ್ಥಾತ್ ಬಿ.ಶಿವರಾಂ ಅವರು, ಬ್ಲಾಕ್ ಕಾಂಗ್ರೆಸ್ ಸಮಿತಿಯ ಮನವಿಯಂತೆ ಭಾನುವಾರ ಸಂಜೆಯೊಳಗೆ ವಿಪ್ ಜಾರಿಗೊಳಿಸುವ ಉದ್ದೇಶ ಹೊಂದಿದ್ದಾರೆ.

ವಿಪ್ ಜಾರಿಗೊಳಿಸುವಾಗ ಯಾರು ಅಭ್ಯರ್ಥಿ ಎಂಬುದನ್ನು ತಿಳಿಸುವುದರಿಂದ ಭಾನುವಾರ ಸಂಜೆ ವೇಳೆಗೆ ಗೊಂದಲಕ್ಕೆ ತೆರೆ ಬೀಳುವ ಸಾಧ್ಯತೆ ಇದೆ. ಆಕಾಂಕ್ಷಿಗಳು ಹಲವರಿದ್ದರೂ ಅವರೆಲ್ಲರೂ ಒಂದುಗೂಡಿ ಕೆಲ ಪ್ರಮುಖರ ಅಣತಿಯಂತೆ ಹೆಜ್ಜೆ ಇಡುತ್ತಿರುವುದರಿಂದ ಪ್ರಮುಖರ ಗುಂಪಿನ ಪರ ಇರುವ ಆಕಾಂಕ್ಷಿಯೆ ಹೆಸರೇ ಫಾರಂ ನಲ್ಲಿ ಮುದ್ರಿತವಾಗಲಿದೆ ಎಂಬ ಮಾತು ಕೇಳಿಬರುತ್ತಿದೆ. ಒಟ್ಟಾರೆ, ವಿಪ್ ಜಾರಿ ಮೂಲಕ ಕಾಂಗ್ರೆಸ್ ಮನೆ ಒಡೆಯದಂತೆ ಹೈಕಮಾಂಡ್ ಎಚ್ಚರ ವಹಿಸಿರುವುದಂತು ವಾಸ್ತವ. ಎನ್ನುತ್ತಾರೆ ಪಕ್ಷದ ಹಿರಿಯ ನಾಯಕರೊಬ್ಬರು.

# 65 ಕರುಗಳಿಗೆ ಚಿಕಿತ್ಸೆ

**ಹುಳಿಯಾರು:** ಹುಳಿಯಾರು ಸಮೀಪದ ನಡುವನಹಳ್ಳಿ ಗ್ರಾಮದಲ್ಲಿ ಚಿಕ್ಕನಾಯಕನಹಳ್ಳಿ ತಾಲೂಕು ಪಶು ಇಲಾಖೆ ಹಾಗೂ ಹಾಲು ಉತ್ಪಾದಕರ ಸಹಕಾರ ಸಂಘದ ವತಿಯಿಂದ ಕರುಣಾ, ಕರುಗಳ ಸರ್ವತೋಮುಖ ಅಭಿವೃದ್ಧಿಗೆ ಅಳವಡಿಸಿಕೊಂಡಿರುವ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಈ ಕಾರ್ಯಕ್ರಮದಲ್ಲಿ 65 ವಿವಿಧ ತಳಿ ಮತ್ತು ವಯಸ್ಸಿಗೆ ಸೇರಿದ ಕರುಗಳಿಗೆ ಸಮಗ್ರ ಚಿಕಿತ್ಸೆ ನೀಡಲಾಯಿತು.ಪ್ರತಿ ಕರುವಿಗೆ ಜಂತು ನಾಶಕ ಔಷದಿ ಕುಡಿಸಿ,ಕರುಗಳ ಬೆಳವಣಿಗೆ ಮತ್ತು ಆರೋಗ್ಯ ವರ್ಧನೆಗೆ ಪೂರಕವಾದ ಚುಚ್ಚುಮದ್ದುಗಳನ್ನು ನೀಡಲಾಯಿತು. ಅಲ್ಲದೆ ಮನೆಯಲ್ಲಿ ಹಾಕಿಕೊಳ್ಳಲು ಮಾತ್ರೆಗಳು ಮತ್ತು ಟಾನಿಕಗಳನ್ನೂಸಹ ನೀಡಲಾಯಿತು.

ಸಹಾಯಕ ನಿರ್ದೇಶಕರಾದ ಡಾ.ರೆ.ಮ.ನಾಗಭೂಷಣ ಅವರು ವರ್ಷಕ್ಕೊಂದು ಕರು ಮತ್ತು ವರ್ಷ ತುಂಬುವ ಮುನ್ನ ಬೆದೆ ಎಂಬ ಕಾರಣಕ್ಕೆ ಇಲಾಖೆಯು ಕರುಗಳ ಪಾಲನೆ ಮತ್ತು ಬೆಳವಣಿಗೆಯ ಕಡೆ ಹೆಚ್ಚಿನ ಮಹತ್ವ ನೀಡಿ ಇಂತಹ ಕಾರ್ಯಕ್ರಮಗಳನ್ನು ಹಲವು ಹಳ್ಳಿಗಳಲ್ಲಿ ಮಾಡಲಾಗುತ್ತಿದೆ ಹಾಗೂ ತಾಲೂಕಿನ ಎಲ್ಲ ಹಳ್ಳಿಗಳಲ್ಲಿ ಈ ಕಾರ್ಯಕ್ರಮವನ್ನು ಆಯೋಜಿಸಲು ಚಿಂತಿಸಲಾಗಿದೆ ಎಂದು ಹೇಳಿದರು.

ಕರುಗಳ ಪಾಲನೆಯಲ್ಲಿ ಸಮತೋಲನ ಆಹಾರದ ಅಗತ್ಯ ಮತ್ತು ಮೇವಿನ ಬೆಳೆಗಳನ್ನು ಬೆಳೆಯುವ ಅಭ್ಯಾಸಗಳನ್ನು ರೈತರು ಅಳವಡಿಸಿ ಕೊಳ್ಳುವುದರ ಕಡೆ ಅಪಾರ ಗಮನ ನೀಡಬೇಕಿದೆ. ಜಂತು ನಾಶಕಗಳನ್ನು ಕಾಲ ಕಾಲಕ್ಕೆ ಹಾಕುವುದು, ರೋಗಗಳ ನಿಯಂತ್ರಣದ ಬಗ್ಗೆ ಮನವರಿಕೆ ಮಾಡಿ ಕೊಂಡು ಲಸಿಕೆಗಳನ್ನು ಕಾಲ ಕಾಲಕ್ಕೆ ಹಾಕಿಸಿಕೊಳ್ಳುವುದು ಒಂದು ರೀತಿಯ ಪರಿಪಾಠ ವಾಗಬೇಕಿದೆ. ಉದಾಹರಣೆಗೆ ಈಗ ಇಲಾಖೆಯ ವತಿಯಿಂದ 4 ರಿಂದ 8 ತಿಂಗಳ ವಯಸ್ಸಿನ ಹೆಣ್ಣು ಕರುಗಳಿಗೆ ಕಂದು ರೋಗ ಅಥವಾ ಬ್ರುಸೆಲ್ಲೋಸಿಸ್ ಎನ್ನುವ ಭಯಂಕರ ರೋಗವನ್ನು ತಡೆಗಟ್ಟಲು ಜೀವನದಲ್ಲಿ ಒಂದೇ ಒಂದು ಸಲ ಲಸಿಕೆ ಹಾಕಿರುವುದರಿಂದ ಇಂತಹ ರೋಗಗಳನ್ನು ತಡೆಗಟ್ಟಬಹುದು. ಲಸಿಕೆಯ ಮಹತ್ವವನ್ನು ಎಲ್ಲರೂ ಅರಿತು ಇಲಾಖೆಯವರು ಗ್ರಾಮಗಳಿಗೆ ಬಂದಾಗ ಎಲ್ಲರೂ ಮುಂದೆ ಬಂದು ಲಸಿಕೆಗಳನ್ನು ಹಾಕಿಸಿಕೊಳ್ಳಬೇಕು ಎಂದು ತಿಳಿಸಿದರು.

ಯಳನಡು ಪಶು ಪರೀಕ್ಷಕ ದಿನೇಶ್, ಪ್ರಜ್ವಲ್, ಅಥಾವುಲ್ಲ, ಕಿರಣ್, ಪಶು ಸಖಿ ಆಶಾ,ಗ್ರಾಮಸ್ಥರಾದ ಹನುಮಂತಯ್ಯ, ಪುಟ್ಟಸಿದ್ದಯ್ಯ, ದೇವರಾಜು, ಹರೀಶ್, ರಾಜಣ್ಣ ಮುಂತಾದವರು ಉಪಸ್ಥಿತರಿದ್ದರು. ಡೈರಿ ಕಾರ್ಯದರ್ಶಿ ಡಿ.ಸಿ.ಭಾರತಿ ಇದ್ದರು.



# ವಿದ್ಯಾರ್ಥಿನಿ ಮೇಲಿನ ಹತ್ಯೆ ಖಂಡನೀಯ

**ತುಮಕೂರು:** ವೈದ್ಯಕೀಯ ಕ್ಷೇತ್ರವು ಭಾರತದಲ್ಲಿ ವಿಸ್ತಾರವಾಗಿ ಬೆಳೆದಿದೆ. ಸಮರ್ಪಕ ಚಿಕಿತ್ಸೆಯನ್ನು ನೋಡಿ ವಿದೇಶಿಗಳಿಂದ ರೋಗಿಗಳು ಭಾರತಕ್ಕೆ ಬರುತ್ತಿದ್ದಾರೆ. ಅತಂಹ ಪ್ರಬುದ್ಧ ಭಾರತದಲ್ಲಿ ಚಿಕಿತ್ಸೆ ನೀಡುವ ವೈದ್ಯರು, ವೈದ್ಯಕೇತರ ಸಿಬ್ಬಂದಿಗಳು, ಆಸ್ಪತ್ರೆಯ ಸಿಬ್ಬಂದಿಗಳು, ಅಂಬ್ಯುಲೆನ್ಸ್ ಚಾಲಕರು, ನರ್ಸ್‌ಗಳು, ಟೆಕ್ನಿಷಿಯನ್‌ಗಳು ತಮ್ಮ ಜೀವವನ್ನು ಪಣಗಿಟ್ಟು ಕೆಲಸ ನಿರ್ವಹಿಸುತ್ತಿರುತ್ತಾರೆ. ವೈದ್ಯ ವಿದ್ಯಾರ್ಥಿಗಳು ಸಾವಿಗೆ ಕಾರಣರಾದ ಎಲ್ಲಾ ಅಪರಾಧಿಗಳಿಗೂ ತುರ್ತುಶಿಕ್ಷೆಯಾಗಬೇಕು. ಸರ್ಕಾರಗಳು ನ್ಯಾಯವನ್ನು ಭರಿಸಬೇಕು. ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯ ಇತಂಹ ಕೃತ್ಯಗಳನ್ನು ಖಂಡಿಸಬೇಕು. ಭಾರತೀಯ ವೈದ್ಯಕೀಯ ಸಂಘದ ಮುಷ್ಕರ ನಿರಂತರ ವೈದ್ಯರ ಜೊತೆ ನಾವುಗಳು ಸಹಕರಿಸುತ್ತೇವೆ. ಕೋಲ್ಕತ್ತಾದ ಆರ್.ಜಿ ಕರ್ ವೈದ್ಯಕೀಯ ಕಾಲೇಜಿನ ಸಾತ್ನಕೋತ್ತರ ವಿದ್ಯಾರ್ಥಿನಿಯ ಅಮಾನುಷ ಹತ್ಯೆಯ ಪತ್ರಿಭಟನೆಯನ್ನು ಆ.17ರಂದು ಬೆಳಿಗ್ಗೆ 6 ಗಂಟೆಯಿಂದ ಆ.18 ರ ಬೆಳಿಗ್ಗೆ 6 ಗಂಟೆಯವರೆಗೆ ತುರ್ತು ಅಗತ್ಯ ಸೇವೆ ಹೊರತಾಗಿ ಎಲ್ಲಾ ಹೊರ ರೋಗಿ (ಒಪಿಡಿ) ತಪಾಸಣಾ ಸೇವೆಯನ್ನು ಬಂದ್ ಮಾಡಲಾಗುವುದು ಎಂದು ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯದ ವೈದ್ಯಕೀಯ ನಿರ್ದೇಶಕರಾದ ಡಾ. ರಮಣ್ ಎಂ ಹುಲಿನಾಯ್ಕರ್‌ರವರು ತಿಳಿಸಿದರು.




ನಗರದ ಶಿರಾರಸ್ತೆಯ ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಆಸ್ಪತ್ರೆಯ ವತಿಯಿಂದ ಕೋಲ್ಕತ್ತಾದ ಆರ್.ಜಿ ಕರ್ ವೈದ್ಯಕೀಯ ಕಾಲೇಜಿನ ಸಾತ್ನಕೋತ್ತರ ವಿದ್ಯಾರ್ಥಿನಿಯ ಅಮಾನುಷ ಹತ್ಯೆಯ ಪತ್ರಿಭಟನೆಯನ್ನು ಆಗಸ್ಟ್ 17 ರಂದು ಶನಿವಾರ ಬೆಳಿಗ್ಗೆ 11 ಗಂಟೆಗೆ ಶ್ರೀದೇವಿ ಆಸ್ಪತ್ರೆಯಲ್ಲಿ ವೈದ್ಯರು, ನರ್ಸ್‌ಗಳು ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು.

ಇದೇ ಸಂದರ್ಭದಲ್ಲಿ ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಎಂ. ಎಲ್.ಹರೇಂದ್ರಕುಮಾರ್ ರವರು ಮಾತನಾಡುತ್ತಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ನಡೆದಿರುವ ಈ ಘಟನೆಯನ್ನು ನಮ್ಮ ಕಾಲೇಜಿನ ಎಲ್ಲಾ ಸಿಬ್ಬಂದಿಗಳು ಖಂಡಿಸುತ್ತಾ, ಭಾರತೀಯ ವೈದ್ಯಕೀಯ ಸಂಘ ತೆಗೆದುಕೊಳ್ಳುವ ನಿರ್ಣಾಯಗಳಲ್ಲಿ ನಮ್ಮ ಸಹಮತವಿರುತ್ತದೆ. ಈ ಘಟನೆಯನ್ನು ಖಂಡಿಸುವುದಕ್ಕಾಗಿ ಆ.19 ರಂದು ಸೋಮವಾರ ಸಂಜೆ 6:30 ಕ್ಕೆ ಮೇಣದ ಬತ್ತಿ ಮೂಲಕ ಮೃತ ವೈದ್ಯ ವಿದ್ಯಾರ್ಥಿಗೆ ಶಾಂತಿ ಕೋರಲಾಗುವುದು ಎಂದು ತಿಳಿಸಿದರು.

ಶ್ರೀದೇವಿ ಸಂಸ್ಥೆಯ ಮಾನವ ಸಂಪನ್ಮೂಲ ವಿಭಾಗದ ನಿರ್ದೇಶಕರಾದ ಎಂ.ಎಸ್. ಪಾಟೀಲ್, ಶ್ರೀದೇವಿ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕರಾದ ಡಾ.ಕೆ.ಮೋಹನ್‌ಕುಮಾರ್, ಶ್ರೀದೇವಿ ಆಸ್ಪತ್ರೆಯ ಸಿ.ಎ.ಓ ಪ್ರದೀಪ್‌ಕುಮಾರ್ ವೆಗ್ಗಿ, ಶ್ರೀದೇವಿ ಪ್ಯಾರಾಮೆಡಿಕಲ್ ಕಾಲೇಜಿನ ಪ್ರಾಂಶುಪಾಲರಾದ ಡಾ.ಎಂ.ಸಿ.ಕೃಷ್ಣ, ಡಾ.ಕಲ್ಲೇಶಪ್ಪ, ಶ್ರೀದೇವಿ ಆಸ್ಪತ್ರೆಯ ಶುಶ್ರೂಷಕ ಅಧೀಕ್ಷಕರಾದ ಶೀಲಾ, ಉಪಅಧೀಕ್ಷಕರಾದ ನರಸಪ್ಪ ಹಾಗೂ ಸಿಬ್ಬಂದಿ ಇದ್ದರು.

# ವೈದ್ಯಕೀಯ ಸೇವೆ ಬಹಿಷ್ಕರಿಸಿ ಪ್ರತಿಭಟನೆ

**ಕೋಲಾರ :** ಕೋಲ್ಕತ್ತಾದಲ್ಲಿ ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿನಿ ಮೇಲೆ ನಡೆದ ಅತ್ಯಾಚಾರ ಹಾಗೂ ಭೀಕರ ಹತ್ಯೆಯನ್ನು ಖಂಡಿಸಿ, ನಗರದ ಐ ಎಂ ಎ ಜಿಲ್ಲಾಧ್ಯಕ್ಷರ ನೇತೃತ್ವದಲ್ಲಿ ಎಸ್‌ಎನ್ ಆರ್ ವೈದ್ಯಕೀಯ ವಿದ್ಯಾರ್ಥಿಗಳು ಹಾಗೂ ವೈದ್ಯರು ,ಶುಶ್ರೂಕೆಯರು ವೈದ್ಯಕೀಯ ಸೇವೆ ಬಹಿಷ್ಕರಿಸಿ ಪ್ರತಿಭಟನೆ ನಡೆಸಿದರು.

ಐಎಂಎ ಜಿಲ್ಲಾಧ್ಯಕ್ಷರಾದ ಡಾಕ್ಟರ್ ನಾರಾಯಣಸ್ವಾಮಿ ಮಾತನಾಡಿ , ದೇಶದಲ್ಲಿ ದುಡಿಯುವ ಮಹಿಳೆಗೆ ರಕ್ಷಣೆ ನೀಡಬೇಕು, ಗುರುವಾರಷ್ಟೇ ಸ್ವಾತಂತ್ರ್ಯ ದಿನ ಆಚರಿಸಲಾಗಿದೆ. ಆದರೆ ದೇಶದಲ್ಲಿ ಇದುವರೆಗೂ ಮಹಿಳೆಯರಿಗೆ ಯಾವುದೇ ರೀತಿ ಸ್ವಾತಂತ್ರ್ಯವಿಲ್ಲ ಎಂಬುದಕ್ಕೆ ಈ ಘಟನೆ ನಿದರ್ಶನವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ವರಮಹಾಲಕ್ಷಿ ಪೂಜೆ ನಡೆಸುತ್ತಿದ್ದೇವೆ, ಮಹಿಳೆಯನ್ನು ಲಕ್ಷ್ಮಿ, ದುರ್ಗೆ ಎಂದು ಆರಾಧಿಸುತ್ತೇವೆ, ಆದರೆ ನಡುರಾತ್ರಿಯಲ್ಲಿ ದುಡಿಯುವ ಮಹಿಳೆಗೆ ರಕ್ಷಣೆ ಇಲ್ಲದಿರುವಾಗ ಲಕ್ಷ್ಮಿ ಪೂಜೆ, ಸ್ವಾತಂತ್ರ್ಯ ದಿನ ಆಚರಿಸಿ ಏನು ಉಪಯೋಗ, ಅತ್ಯಾಚಾರ ನಡೆಸಿ ಕೊಲೆ ಮಾಡಿದ ದುಷ್ಕರ್ಮಿಗಳಿಗೆ ಕಠಿಣ ಶಿಕ್ಷೆಯಾಗುವಂತೆ ಮಾಡಬೇಕು ಎಂದು ಒತ್ತಾಯಿಸಿದರು. ವಿದ್ಯಾರ್ಥಿನಿಯರ ಹಾಸ್ಟೆಲ್ಗಳ ಬಳಿ ಸೂಕ್ತ ಭದ್ರತೆ, ವಾರ್ಡ್ಗಳಲ್ಲಿ ಸಿಸಿ ಟಿ.ವಿ ಅಳವಡಿಕೆ, ಮಹಿಳಾ ವೈದ್ಯರ ಕ್ಯಾಬಿನ್ಗೆ ಪುರುಷರ ಪ್ರವೇಶ ನಿಷೇಧ, ಎಲ್ಲ ವೈದ್ಯಕೀಯ ಸಂಸ್ಥೆಗಳಲ್ಲಿ ತಕ್ಷಣವೇ ಭದ್ರತೆಯ ಪರಿಶೀಲನೆ ನಡೆಸಬೇಕು ಎಂದು ಒತ್ತಾಯಿಸಿದರು. ಜಿಲ್ಲಾ ಈ ಐಎಂ ಎ ಯ ಡಾಕ್ಟರ್ ಶಂಕರ್ , ಡಾಕ್ಟರ್ಚೇತನ್ ,ಪ್ರಧಾನ ಕಾರ್ಯದರ್ಶಿ ಡಾಕ್ಟರ್ ಎನ್ ಸಿ ದೇವರಾಜ್ ,ಹಿರಿಯ ವೈದ್ಯರಾದ ಹೇಮಾವತಿ ದೇವರಾಜ್ ,ಡಾಕ್ಟರ್ ಅರವಿಂದ್ ,ಡಾಕ್ಟರ್ ಬಾಲಸುಂದರ್ ,ಡಾಕ್ಟರ್ ಪ್ರಭಾಕರ್ ಎಸ್ ಎನ್ ಆರ್ ಮತ್ತು ಚನ್ನೇಗೌಡ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳು ಇದ್ದರು.




# ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದಿಂದ ಸಾಲ ಸೌಲಭ್ಯಕ್ಕೆ ಅರ್ಜಿ

**ಚಾಮರಾಜನಗರ:** ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದಿಂದ 2024–25ನೇ ಸಾಲಿಗೆ ಹಿಂದುಳಿದ ವರ್ಗಗಳ ಪ್ರವರ್ಗ–2ಎ ಗೆ ಸೇರಿದ ಮಡಿವಾಳ ಮತ್ತು ಅದರ ಉಪಜಾತಿಯ ಜನಾಂಗದವರಿಗೆ ವಿವಿಧ ಯೋಜನೆಗಳ ಸಾಲ ಸೌಲಭ್ಯಕ್ಕೆ ಸೇವಾಸಿಂಧು ತಂತ್ರಾಂಶದ (ಆನ್‌ಲೈನ್) ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಸ್ವಯಂ ಉದ್ಯೋಗ ಸಾಲ ಯೋಜನೆಯಡಿ ಹಿಂದುಳಿದ ವರ್ಗಗಳ ಪ್ರವರ್ಗ–2ಎಗೆ ಸೇರಿದ ಮಡಿವಾಳ ಮತ್ತು ಅದರ ಉಪಜಾತಿಗಳ ನಿರುದ್ಯೋಗಿ ಫಲಾನುಭವಿಗಳು ಕೃಷಿ ಅವಲಂಬಿತ ಚಟುವಟಿಕೆ, ವ್ಯಾಪಾರ, ಕೈಗಾರಿಕೆ, ಸಾರಿಗೆ ಮತ್ತು ಸೇವಾ ವಲಯದಲ್ಲಿ ಆರ್ಥಿಕ ಚಟುವಟಿಕೆ ಕೈಗೊಳ್ಳಲು ಗರಿಷ್ಠ 2 ಲಕ್ಷ ರೂ.ವರೆಗೆ ಆರ್ಥಿಕ ನೆರವು, 1 ಲಕ್ಷ ರೂ.ವರೆಗಿನ ಸಾಲದಲ್ಲಿ ಶೇ.20 ಗರಿಷ್ಠ 20 ಸಾವಿರ ರೂ. ಸಹಾಯಧನ ಹಾಗೂ 1.01 ಲಕ್ಷ ರೂ.ಗಳಿಂದ 2 ಲಕ್ಷ ರೂ. ವರೆಗೆ ಶೇ.15ರ?ಟ್ಟು ಕನಿಷ್ಠ 20 ಸಾವಿರ ರೂ.ವರೆಗೆ ಗರಿ?ಠ 30 ಸಾವಿರ ರೂ. ಸಹಾಯಧನ ಉಳಿಕೆ ಮೊತ್ತ ಶೇ.4ರ ಬಡ್ಡಿದರದಲ್ಲಿ ನೀಡಲಾಗುತ್ತದೆ. ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ 98 ಸಾವಿರ ರೂ. ಪಟ್ಟಣ ಪ್ರದೇಶದವರಿಗೆ 1,20,000 ಸಾವಿರ ರೂ. ಒಳಗಿರಬೇಕು. 18 ರಿಂದ 55 ವರ್ಷಗಳ ವಯೋಮಿತಿಯಲ್ಲಿರಬೇಕು.

ಗಂಗಾ ಕಲ್ಯಾಣ ನೀರಾವರಿ ಯೋಜನೆಯಡಿ ಹಿಂದುಳಿದ ವರ್ಗಗಳ ಪ್ರವರ್ಗ–2ಎಗೆ ಸೇರಿದ ಮಡಿವಾಳ ಮತ್ತು ಅದರ ಉಪಜಾತಿಗಳ ಸಣ್ಣ ಮತ್ತು ಅತಿ ಸಣ್ಣ ರೈತರ ಜಮೀನುಗಳಿಗೆ ನೀರಾವರಿ ಸೌಲಭ್ಯ ಒದಗಿಸಲಾಗುವುದು. ವೈಯಕ್ತಿಕ ಕೊಳವೆಬಾವಿ ಯೋಜನೆಗೆ ಒಟ್ಟು ಘಟಕ ವೆಚ್ಚ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ಕೋಲಾರ, ಚಿಕ್ಕಬಳ್ಳಾಪುರ ಮತ್ತು ತುಮಕೂರು ಜಿಲ್ಲೆಗಳಿಗೆ 4.75 ಲಕ್ಷ ರೂ.ಗಳಲ್ಲಿ ವಿದ್ಯುದ್ಧೀಕರಣ ವೆಚ್ಚ ಪ್ರತಿ ಕೊಳವೆಬಾವಿಗೆ 75 ಸಾವಿರ ರೂ.ಗಳನ್ನು ಎಸ್ಕಾಂಗಳಿಗೆ ಪಾವತಿಸಲಾಗುವುದು.

ಇನ್ನುಳಿದ ಜಿಲ್ಲೆಗಳಿಗೆ 3.75 ಲಕ್ಷ ರೂ. ಗಳಲ್ಲಿ ವಿದ್ಯುದ್ಧೀಕರಣ ವೆಚ್ಚ ಪ್ರತಿ ಕೊಳವೆಬಾವಿಗೆ 75 ಸಾವಿರ ರೂ.ಗಳನ್ನು ಎಸ್ಕಾಂಗಳಿಗೆ ಪಾವತಿಸಲಾಗುವುದು. ಘಟಕ ಪೂರ್ಣಗೊಳಿಸಲು ಸಾಧ್ಯವಾಗದಿದ್ದಲ್ಲಿ 50 ಸಾವಿರ ರೂ. ಸಾಲವನ್ನು ಶೇ.4ರ ಬಡ್ಡಿದರದಲ್ಲಿ ಮಂಜೂರು ಮಾಡಲಾಗುವುದು. ಯೋಜನೆಯಲ್ಲಿ ಉಡುಪಿ, ದಕ್ಷಿಣ ಕನ್ನಡ, ಕೊಡಗು, ಉತ್ತರ ಕನ್ನಡ, ಚಿಕ್ಕಮಗಳೂರು, ಶಿವಮೊಗ್ಗ ಮತ್ತು ಹಾಸನ ಜಿಲ್ಲೆಗಳಲ್ಲಿ ಕನಿಷ್ಠ 1 ಎಕರೆ ಜಮೀನು ಹೊಂದಿರಬೇಕು. ಉಳಿಕೆ ಜಿಲ್ಲೆಗಳಲ್ಲಿ ಒಂದೇ ಸ್ಥಳದಲ್ಲಿ ಹೊಂದಿಕೊಂಡಂತೆ ಇರುವ ಕನಿಷ್ಠ 2 ಎಕರೆ ಗರಿಷ್ಠ 5 ಎಕರೆ ಜಮೀನು ಹೊಂದಿರಬೇಕು.

ಅರಿವು–ಶೈಕ್ಷಣಿಕ ಸಾಲ ಯೋಜನೆಯಡಿ ಸಿ.ಇ.ಟಿ ಮತ್ತು ನೀಟ್ ಇತ್ಯಾದಿ ಮೂಲಕ ಆಯ್ಕೆಯಾಗಿ ವ್ಯಾಸಂಗ ಮಾಡುವ ಹಿಂದುಳಿದ ವರ್ಗಗಳ ಪ್ರವರ್ಗ–2ಎಗೆ ಸೇರಿದ ಮಡಿವಾಳ ಮತ್ತು ಅದರ ಉಪಜಾತಿಗಳ ವಿದ್ಯಾರ್ಥಿಗಳಿಗೆ ವೃತ್ತಿಪರ ಕೋರ್ಸ್‌ಗಳಾದ ಎಂಜಿನಿಯರಿಂಗ್, ವೈದ್ಯಕೀಯ, ದಂತ ವೈದ್ಯಕೀಯ ಮುಂತಾದ 28 ಕೋರ್ಸ್‌ಗಳ ವ್ಯಾಸಂಗಕ್ಕೆ ವಾರ್ಷಿಕ 1 ಲಕ್ಷ ರೂ. ಗಳಂತೆ ಕೋರ್ಸ್‌ನ ಅವಧಿಗೆ ಗರಿಷ್ಠ 4 ರಿಂದ 5 ಲಕ್ಷ ರೂ.ಗಳಿಗೆ ವಾರ್ಷಿಕ ಶೇ.2ರ ಬಡ್ಡಿದರಲ್ಲಿ ಸಾಲ ಮಂಜೂರು ಮಾಡಲಾಗುವುದು. ಕುಟುಂಬದವರ ವಾರ್ಷಿಕ ವರಮಾನ 3.50 ಲಕ್ಷ ರೂ. ಮಿತಿಯಲ್ಲಿರಬೇಕು.

ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆಯಡಿ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗ ಮಾಡಲು ಪಿ.ಹೆಚ್.ಡಿ. ಪೋಸ್ಟ್ ಡಾಕ್ಟ್ರಲ್ ಮತ್ತು ಮಾಸ್ಟರ್ ಡಿಗ್ರಿ, (ಎಂಜಿನಿಯರಿಂಗ್ ಮತ್ತು ಟೆಕ್ನಾಲಜಿ, ಮ್ಯಾನೇಜ್‌ಮೆಂಟ್ ಮತ್ತು ಕಾಮರ್ಸ್, ಸೈನ್ಸ್ ಮತ್ತು ಟೆಕ್ನಾಲಜಿ, ಅಗ್ರಿಕಲ್ಚರ್ ಮತ್ತು ಅಲೈಡ್ ಸೈನ್ಸಸ್/ಟೆಕ್ನಾಲಜಿ, ಮೆಡಿಸಿನ್, ಹ್ಯುಮ್ಯಾನಿಟೀಸ್ ಮತ್ತು ಸೋಶಿಯಲ್ ಸೈನ್ಸಸ್) ವ್ಯಾಸಂಗಕ್ಕೆ ಪ್ರವೇಶ ಪಡೆದಿರಬೇಕು. ಹಿಂದುಳಿದ ವರ್ಗಗಳ ಪ್ರವರ್ಗ–2ಎಗೆ ಸೇರಿದ ಮಡಿವಾಳ ಮತ್ತು ಅದರ ಉಪಜಾತಿಗಳಿಗೆ ಸೇರಿದವರಾಗಿರಬೇಕು. ಕುಟುಂಬದ ವಾರ್ಷಿಕ ಆದಾಯ ಗರಿಷ್ಠ 8 ಲಕ್ಷ ರೂ. ಮಿತಿಯಲ್ಲಿರಬೇಕು.

ವಿದ್ಯಾರ್ಥಿಗಳು ಅರ್ಹತಾ ಪರೀಕ್ಷೆಯಲ್ಲಿ ಶೇ.60ಕ್ಕಿಂತಲೂ ಹೆಚ್ಚಿನ ಅಂಕ ಪಡೆದಿರಬೇಕು. ಕ್ಯೂಎಸ್ ವಲ್ಡ್ ರ‍್ಯಾಂಕಿಂಗ್ 500 ರೊಳಗೆ ಬರುವ ವಿಶ್ವ ವಿದ್ಯಾನಿಲಯಗಳಲ್ಲಿ ಪ್ರವೇಶ ಪಡೆದಿರಬೇಕು. ವಾರ್ಷಿಕ ಗರಿಷ್ಠ 10 ಲಕ್ಷ ರೂ. ಹಾಗೂ ಪೂರ್ಣ ಕೋರ್ಸ್‌ನ ಅವಧಿಗೆ 20 ಲಕ್ಷ ರೂ. ಸಾಲವನ್ನು ಬಡ್ಡಿರಹಿತವಾಗಿ ಒದಗಿಸಲಾಗುವುದು. ಸಾಲದ ಭದ್ರತೆಗೆ ಅರ್ಜಿದಾರ, ಜಾಮೀನುದಾರ, ಪೋಷಕರ ಸ್ಥಿರಾಸ್ತಿಯನ್ನು ನಿಗಮಕ್ಕೆ ಆಧಾರ ಮಾಡಬೇಕು. ಅರ್ಜಿಯ ಜೊತೆಯಲ್ಲಿ ವಿದೇಶಿ ವಿಶ್ವವಿದ್ಯಾಲಯದ ಪ್ರವೇಶ ಪತ್ರ (ಆಫರ್ ಲೆಟರ್) ವಿದ್ಯಾರ್ಥಿಯ ವಿಸಾ ಪಾಸ್ ಪೋರ್ಟ್ ಮತ್ತು ಏರ್ ಟಿಕೇಟ್ ಪ್ರತಿ ಒದಗಿಸಬೇಕು.

ಸ್ವಾವಲಂಬಿ ಸಾರಥಿ ಯೋಜನೆಯಡಿ ಹಿಂದುಳಿದ ವರ್ಗಗಳ ಪ್ರವರ್ಗ–2ಎಗೆ ಸೇರಿದ ಮಡಿವಾಳ ಮತ್ತು ಅದರ ಉಪಜಾತಿಗಳ ನಿರುದ್ಯೋಗಿ ಯುವಜನರಿಗೆ ನಾಲ್ಕು ಚಕ್ರಗಳ ವಾಹನ ಖರೀದಿಗೆ ಬ್ಯಾಂಕ್‌ಗಳಿಂದ ಪಡೆಯುವ ಸಾಲಕ್ಕೆ ಶೇ.50ರ?ಟ್ಟು ಗರಿಷ್ಟ 3 ಲಕ್ಷ ರೂ. ಸಹಾಯಧನ ಮಂಜೂರು ಮಾಡಲಾಗುವುದು. ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ 98 ಸಾವಿರ ರೂ. ಪಟ್ಟಣ ಪ್ರದೇಶದವರಿಗೆ 1,20,000 ಸಾವಿರ ರೂ. ಒಳಗಿರಬೇಕು. 21 ರಿಂದ 45 ವ?ರ್ಗಗಳ ವಯೋಮಿತಿಯಲ್ಲಿರಬೇಕು. ಯೋಜನೆಯಲ್ಲಿ ಆರ್ಥಿಕ ಸಹಾಯ ಪಡೆಯಲು ಇಚ್ಛಿಸುವ ಅರ್ಜಿದಾರರು ಲಘು ವಾಹನ ಚಾಲನ ಪರವಾನಗಿಯನ್ನು ಹೊಂದಿರಬೇಕು.

ಸ್ವಯಂ ಉದ್ಯೋಗ ಸಾಲ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ) ಯೋಜನೆಯಡಿ ಸ್ವಯಂ ಉದ್ಯೋಗ ಕಲ್ಪಿಸಿಕೊಳ್ಳಲು ಅವರು ಕೈಗೊಳ್ಳುವ ಆರ್ಥಿಕ ಚಟುವಟಿಕೆಗಳು, ಉದ್ಯಮಗಳಿಗೆ ವಾಣಿಜ್ಯ ಬ್ಯಾಂಕುಗಳ ಮೂಲಕ ಸಾಲ ಪಡೆದಲ್ಲಿ ನಿಗಮದಿಂದ ಶೇ.20 ಗರಿಷ್ಠ 1 ಲಕ್ಷ ರೂ. ಸಹಾಯಧನ ಮಂಜೂರು ಮಾಡಲಾಗುವುದು. ಉಳಿಕೆ ಮೊತ್ತವನ್ನು ಬ್ಯಾಂಕ್‌ನಿಂದ ಸಾಲ ಪಡೆಯಲು ಹಿಂದುಳಿದ ವರ್ಗಗಳ ಪ್ರವರ್ಗ–2ಎಗೆ ಸೇರಿದ ಮಡಿವಾಳ ಮತ್ತು ಅದರ ಉಪಜಾತಿಗಳಿಗೆ ಸೇರಿದವರಾಗಿರಬೇಕು. ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ 98 ಸಾವಿರ ರೂ. ಪಟ್ಟಣ ಪ್ರದೇಶದವರಿಗೆ 1,20,000 ರೂ. ಒಳಗಿರಬೇಕು. 18 ರಿಂದ 55 ವರ್ಷಗಳ ವಯೋಮಿತಿಯಲ್ಲಿರಬೇಕು.

ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್‌ನಲ್ಲಿರುವಂತೆ ಅರ್ಜಿದಾರರ ಹೆಸರು (ಶ್ರೀ/ಶ್ರೀಮತಿ ಕುಮಾರಿ ಮುಂತಾದ ಮಾಹಿತಿಗಳೆಲ್ಲವು) ಇತರೆ ದಾಖಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿಯೂ ಇದ್ದು ಹೊಂದಾಣಿಕೆಯಾಗಬೇಕು.

ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. 2023–24ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಫಲಾಪೇಕ್ಷಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ http://sevasindhu.karnataka.gov.inಮೂಲಕ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಆಗಸ್ಟ್ 31ರೊಳಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ www.kssd.karnataka.gov.in ಅಥವಾ ನಿಗಮದ ಸಹಾಯವಾಣಿ ದೂ.ಸಂ 080–22374832, ಮೊ.ಸಂ 8050770004, 8050770005 ಹಾಗೂ ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ನಿಗಮದ ಕಚೇರಿಯ ದೂ.ಸಂ 08226–223587 ಸಂಪರ್ಕಿಸುವಂತೆ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಜೆ ಟಿಪ್ಸ್






## ವಿ ಪ್ರಿಪೇಯ್ ಗ್ರಾಹಕರಿಗೆ ಹೆಚ್ಚುವರಿ ಡೇಟಾ ಮತ್ತು ಓಟಿಟಿ ಕೊಡುಗೆ

ಭಾರತ 78ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸುತ್ತಿರುವ ಈ ಸಂದರ್ಭದಲ್ಲಿ ಪ್ರಮುಖ ಟೆಲಿಕಾಂ ಆಪರೇಟರ್ ವಿ ಇಂದು ಪ್ರಿಪೇಯ್ಡ್ ಗ್ರಾಹಕರಿಗೆ ಹೆಚ್ಚುವರಿ ಡೇಟಾ ಮತ್ತು ಓಟಿಟಿ ಆಫರ್ ಗಳ ಸೀಮಿತ ಅವಧಿಯ ಕೊಡುಗೆಗಳನ್ನು ಪ್ರಕಟಿಸಿದೆ. 2024ರ ಆಗಸ್ಟ್ 13 ರಿಂದ 28 ರವರೆಗೆ ಈ ಆಫರ್ ಮಾನ್ಯವಾಗಿರುತ್ತದೆ. ಅರ್ಧ-ವಾರ್ಷಿಕ ಅಥವಾ ವಾರ್ಷಿಕ ಪ್ಯಾಕ್ ಗಳನ್ನು ರೀಚಾರ್ಜ್ ಮಾಡುವ ಗ್ರಾಹಕರಿಗೆ ವಿಶೇಷ ಆಫರ್ ಗಳನ್ನು ಒದಗಿಸಲಾಗುತ್ತದೆ. ಸ್ವಾತಂತ್ರ್ಯ ದಿನಾಚಾರಣೆ ಆಫರ್ ಗಳ ಪ್ರಮುಖ ವಿಶೇಷತೆ ಎಂದರೆ ದೈನಂದಿನ ಮಿತಿಯನ್ನು ಮೀರಿ 30GB ಯಿಂದ 50GB ಉಚಿತ ಹೈ-ಸ್ಪೀಡ್ ಡೇಟಾ ದೊರೆಯುತ್ತದೆ. ಅರ್ಧ-ವಾರ್ಷಿಕ ಪ್ಯಾಕ್ ನಲ್ಲಿ ಹೆಚ್ಚುವರಿ ಡೇಟಾವು 45 ದಿನಗಳವರೆಗೆ ಮತ್ತು ವಾರ್ಷಿಕ ಪ್ಯಾಕ್ ಗಳಲ್ಲಿ ಹೆಚ್ಚುವರಿ ಡೇಟಾ 90 ದಿನಗಳವರೆಗೆ ಮಾನ್ಯವಾಗಿರುತ್ತದೆ. ಇದು ಪ್ಯಾಕ್‌ಗಳ ಭಾಗವಾಗಿ ಒದಗಿಸಲಾದ ದೈನಂದಿನ ಡೇಟಾ ಕೋಟಾಗಿಂತ ಹೆಚ್ಚುವರಿ ಡೇಟಾ ಆಗಿದೆ. ಈ ಆಫರ್ ಗಳು 28ನೇ ಆಗಸ್ಟ್ 2024 ರವರೆಗೆ ಮಾತ್ರ ಮಾನ್ಯವಾಗಿರುತ್ತವೆ. ಜೊತೆಗೆ ವಿ ತನ್ನ ವಾರ್ಷಿಕ ಪ್ಯಾಕ್ ಗಳಲ್ಲಿ ಯಾವುದೇ ಹೆಚ್ಚುವರಿ ವೆಚ್ಚವಿಲ್ಲದೆ ಡಿಸ್ನಿ+ ಹಾಟ್‌ಸ್ಟಾರ್ ಮತ್ತು ಅಮೆಜಾನ್ ಪ್ರೈಮ್ ವಿಡಿಯೋದಂತಹ ಓಟಿಟಿ ಪ್ಲಾಟ್‌ಫಾರ್ಮ್‌ಗಳಿಗೆ ಒಂದು ವರ್ಷದ ಚಂದಾದಾರಿಕೆಯನ್ನು ನೀಡುತ್ತದೆ. ವಿ ಆಪ್ ಮೂಲಕ ರೀಚಾರ್ಜ್ ಮಾಡುವ ಗ್ರಾಹಕರು ವಾರ್ಷಿಕ ರೀಚಾರ್ಜ್ ಪ್ಯಾಕ್ ವೆಚ್ಚದಲ್ಲಿ ಹೆಚ್ಚುವರಿ ರಿಯಾಯಿತಿ ಪಡೆಯಲು ಅರ್ಹರಾಗಿರುತ್ತಾರೆ. ರೂ. 3499, ರೂ. 3699 ಮತ್ತು ರೂ. 3799 ರೀಚಾರ್ಜ್‌ಗಳಿಗೆ, ಬಳಕೆದಾರರು ಕ್ರಮವಾಗಿ ರೂ. 50, ರೂ. 75 ಮತ್ತು ರೂ. 100ರ ರಿಯಾಯಿತಿ ಪಡೆಯುತ್ತಾರೆ. ಎಲ್ಲಕ್ಕಿಂತ ಹೆಚ್ಚಾಗಿ, ವಿ ಶಾಪ್ ನಿಂದ ಜನಪ್ರಿಯ ಬ್ರಾಂಡ್‌ಗಳ ಉಡುಗೊರೆ ಕಾರ್ಡ್‌ಗಳನ್ನು ಪಡೆದುಕೊಳ್ಳಬಹುದಾಗಿದೆ. 30+ ಬ್ರ್ಯಾಂಡ್ ವೋಚರ್ಗಳ ಮೇಲೆ ಹೆಚ್ಚುವರಿ ರಿಯಾಯಿತಿಗಳಿವೆ, Zomato ಫುಡ್ ಆರ್ಡರ್‌ಗಳ ಮೇಲೆ 4% ರಿಯಾಯಿತಿ, ಪಿವಿಆರ್ ಚಲನಚಿತ್ರ ಟಿಕೆಟ್‌ಗಳ ಮೇಲೆ 10% ರಿಯಾಯಿತಿ, ಪ್ಯಾಂಟಲೂನ್ಸ್ ಶಾಪಿಂಗ್‌ನಲ್ಲಿ 12% ವರೆಗಿನ ರಿಯಾಯಿತಿ ವಿ ಅಪ್ಲಿಕೇಶನ್‌ನಲ್ಲಿ ಮಾತ್ರ ಲಭ್ಯವಿದೆ.

## ಆಲೂಗಡ್ಡೆ ರವಾ ಫ್ರೈ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಆಲೂಗಡ್ಡೆ - 2-3, ಎಣ್ಣೆ - ಅಗತ್ಯವಿದ್ದಷ್ಟು, ಅಚ್ಚ ಖಾರದ ಪುಡಿ - 2-3 ಚಮಚ, ಅರಿಶಿಣದ ಪುಡಿ- ಸ್ವಲ್ಪ, ಇಂಗು- ಸ್ವಲ್ಪ, ಉಪ್ಪು- ರುಚಿಗೆ ತಕ್ಕಷ್ಟು, ರವೆ- 1 ಬಟ್ಟಲು, ಕಾಳು ಮೆಣಸಿನ ಪುಡಿ- ಅರ್ಧ ಚಮಚ

### ಮಾಡುವ ವಿಧಾನ

ಮೊದಲಿಗೆ ಆಲೂಗಡ್ಡೆಯ ಸಿಪ್ಪೆ ತೆಗೆದು, ತೆಳುವಾದ ಸ್ಲೈಸ್‌ಗಳಾಗಿ ಕತ್ತರಿಸಿ, ನೀರಿನಲ್ಲಿ ನೆನೆಸಿ. ಬಳಿಕ ಒಂದು ಪಾತ್ರೆಯಲ್ಲಿ ಉಪ್ಪು, 1 ಚಮಚ ಖಾರದ ಪುಡಿ, ಅರಿಶಿಣದ ಪುಡಿ, ಇಂಗು ಹಾಗೂ ಸ್ವಲ್ಪ ನೀರು ಸೇರಿದ ಪೇಸ್ಟ್ ರೀತಿ ತಯಾರಿಸಿಕೊಳ್ಳಿ. ನಂತರ ನೆನೆಸಿಟ್ಟ ಆಲೂಗಡ್ಡೆ ಪೀಸ್ ಗಳನ್ನು ತೆಗೆದು ಮಸಾಲೆ ಹಚ್ಚಿ, 15 ನಿಮಿಷ ಪಕ್ಕಕ್ಕಿಡಿ. ಮತ್ತೊಂದು ಪಾತ್ರೆ ತೆಗೆದುಕೊಂಡು ಮದಕ್ಕೆ ರವೆ, ಖಾರದ ಪುಡಿ ಹಾಗೂ ಉಪ್ಪು ಹಾಕಿ ಚೆನ್ನಾಗಿ ಮಿಶ್ರಣ ಮಾಡಿ.ಈಗ ಮಸಾಲೆ ಹಚ್ಚಿ ನೆನೆಸಿಟ್ಟ ಆಲೂಗಡ್ಡೆ ಪೀಸ್ ಗಳನ್ನು ಒಂದೊಂದಾಗಿ ತೆಗೆದುಕೊಂಡು ಮಿಶ್ರಣದಲ್ಲಿ ಹಾಕಿ. ರವೆ ಕೋಟ್ ಆಲೂ ಪೀಸ್ ಗಳಿಗೆ ಸಂಪೂರ್ಣವಾಗಿ ಅಂಟಿಕೊಳ್ಳುವಂತೆ ಮಾಡಿ. ನಂತರ ತವಾದಲ್ಲಿ ಎಣ್ಣೆ ಬಿಸಿ ಮಾಡಿ, ಆಲೂಗಡ್ಡೆ ಪೀಸ್ ಗಳನ್ನು ಅದರಲ್ಲಿಟ್ಟು ಎರಡೂ ಬದಿಯಲ್ಲೂ ಚಿನ್ನದ ಬಣ್ಣ ಬರುವವರೆದೆ ಫ್ರೈ ಮಾಡಿದರೆ ರುಚಿಕರವಾದ ಆಲೂ ರವಾ ಫ್ರೈ ಸವಿಯಲು ಸಿದ್ಧ.

## ಅವಾರ್ಡ್ ಫಂಕ್ಷನ್‌ಗಳ ಬಗ್ಗೆ ನಟ ಸೈಫ್ ಅಲಿ ಖಾನ್ ಟೀಕೆ



ಪ್ರಶಸ್ತಿ ಸಮಾರಂಭಗಳ ಬಗ್ಗೆ ಅನೇಕರಿಗೆ ಅಸಮಾಧಾನ ಇದೆ. ಇದರಲ್ಲಿ ನೈತಿಕತೆ ಇರೋದಿಲ್ಲ ಅನ್ನೋದು ಅನೇಕರ ವಾರ. ಇದೇ ಕಾರಣಕ್ಕೆ ಆಮಿರ್ ಖಾನ್ ಯಾವುದೇ ಅವಾರ್ಡ್ ಫಂಕ್ಷನ್ಗೆ ಬರೋದಿಲ್ಲ. ವಿದ್ಯಾ ಬಾಲನ್ ಅವರು ಈ ಮೊದಲು ಶಾರುಖ್ ಖಾನ್ ಅವಾರ್ಡ್ ಖರೀದಿ ಮಾಡಿದ ಬಗ್ಗೆ ಟೀಕೆ ಮಾಡಿದ್ದರು.

ಅದೇ ರೀತಿ ಸೈಫ್ ಅಲಿ ಖಾನ್ ಕೂಡ ಇದೇ ರೀತಿಯ ಅಭಿಪ್ರಾಯ ಹೊರಹಾಕಿದ್ದರು. ನೈತಿಕತೆಯ ಆಧಾರದ ಮೇಲೆ ಅವಾರ್ಡ್ ನೀಡುವುದಿಲ್ಲ ಅನ್ನೋದು ಸೈಫ್ ಅಲಿ ಖಾನ್ ಅಭಿಪ್ರಾಯವಾಗಿದೆ. ಅನುಪಮಾ ಚೋಪ್ರಾ ಬಳಿ ಮಾತನಾಡಿದ ಸೈಫ್, ಅವಾರ್ಡ್ ಕಾರ್ಯಕ್ರಮದಲ್ಲಿ ಯಾವುದೇ ನೈತಿಕ ಆಧಾರತೆ ಇರುವುದಿಲ್ಲ' ಎಂದಿದ್ದಾರೆ. ಅಲ್ಲದೆ, ಚಾನೆಲ್‌ಗಳು ನೀಡುವ ಅವಾರ್ಡ್ ಫಂಕ್ಷನ್ ಗಳು ದೊಡ್ಡ ಜೋಕ್ ಎಂದು ಹೇಳಿದ್ದಾರೆ.

'ಮೋಸ್ಟ್ ಬ್ಯೂಟಿಫುಲ್ ಸ್ಮೈಲ್, ಗ್ಲಾಮರಸ್ ದಿವಾ ರೀತಿಯ ವಿಭಾಗಗಳನ್ನು ಅವಾರ್ಡ್ ಕಾರ್ಯಕ್ರಮದವರು ಸೃಷ್ಟಿ ಮಾಡುತ್ತಾರೆ. ಯಾರಿಗೆ ಅತ್ಯುತ್ತಮ ನಟ/ನಟಿ ಅವಾರ್ಡ್ ಸಿಕ್ಕಿದೆ ಎಂಬುದು ನೆನಪೂ ಇರುವುದಿಲ್ಲ. ಯಾರೂ ಜೋಕ್ ಹೇಳಿರುವುದಿಲ್ಲ. ಆದರೂ ಅವರು ನಗುತ್ತಾರೆ. ಕೆಟ್ಟ ಜೋಕ್‌ಗಳನ್ನು ಹೇಳಿದಾಗ ಇದು ನಗುವಂತಹ ಹಾಸ್ಯ ಅಲ್ಲ ಎಂದು ಮನೆಯಲ್ಲಿ ಕುಳಿತ ವೀಕ್ಷಕ ಹೇಳಿಕೊಳ್ಳುತ್ತಾನೆ' ಎಂದಿದ್ದರು ಅವರು. ಈ ಮೂಲಕ ಇವರು ಮಾಡುವ ಡ್ರಾಮಾ ಪ್ರೇಕ್ಷಕರಿಗೆ ಇಷ್ಟ ಆಗುತ್ತದೆ ಎಂದಿದ್ದರು.

'ಮೋಸ ಆಗುತ್ತಿರುವುದು ವೀಕ್ಷಕರಿಗೆ. ಈ ಅವಾರ್ಡ್ ಫಂಕ್ಷನ್ ಅವರನ್ನು ಡಿಸ್ಟರ್ಬ್ ಮಾಡುತ್ತದೆ. ಇದು ಸಂಪೂರ್ಣವಾಗಿ ಸುಳ್ಳು. ಮನರಂಜನೆ ಮೇಲೆ ಹಣ ಹಾಕಲು ಅವರ ಬಳಿ ದುಡ್ಡಿಲ್ಲ' ಎಂದಿದ್ದರು. ಈ ಮೂಲಕ ಈ ರೀತಿಯ ಕಾರ್ಯಕ್ರಮಗಳು ಬದಲಾಗಬೇಕು ಎಂದು ಅವರು ಹೇಳಿದ್ದರು. ಸೈಫ್ ಅಲಿ ಖಾನ್ ಅವರು ಇತ್ತೀಚೆಗೆ ದಕ್ಷಿಣ ಭಾರತದಲ್ಲಿ ಬ್ಯುಸಿ ಆಗುತ್ತಿದ್ದಾರೆ. 'ಆದಿಪುರುಷ್' ಚಿತ್ರದಲ್ಲಿ ಅವರು ರಾವಣನ ಪಾತ್ರ ಮಾಡಿದ್ದರು. ಸದ್ಯ ಸೈಫ್ ನಟ ಜೂನಿಯರ್ ಎನ್ ಟಿ ಆರ್ ನಟನೆಯ 'ದೇವರ' ಚಿತ್ರದಲ್ಲಿ ವಿಲನ್ ಪಾತ್ರ ಮಾಡುತ್ತಿದ್ದರೆ. ಸೆಪ್ಟೆಂಬರ್ 27ರಂದು ಸಿನಿಮಾ ತೆರೆಗೆ ಬರಲಿದೆ.

## ಕರಿಬೇವಿನ ಜ್ಯೂಸ್ ನಲ್ಲಿದೆ ಇಷ್ಟೆಲ್ಲಾ ಆರೋಗ್ಯ ಲಾಭ



### ಹೆಲ್ತ್ ಟಿಪ್ಸ್

ಒಗ್ಗರಣೆಗೆ ಅಗತ್ಯವಾಗಿ ಬಳಸುವ ಕರಿಬೇವಿನ ಎಲೆ ಸಾಂಬಾರ್, ಕರಿ, ಚಟ್ನಿ ರುಚಿಯನ್ನು ಹೆಚ್ಚಿಸುತ್ತದೆ. ದಕ್ಷಿಣ ಭಾರತದಲ್ಲಿ ಕರಿಬೇವು ಹೆಚ್ಚು ಪ್ರಸಿದ್ಧಿ ಪಡೆದಿದೆ. ಇದು ರುಚಿ ಮಾತ್ರ ಹೆಚ್ಚಿಸುವುದಿಲ್ಲ. ಬದಲಾಗಿ ಆರೋಗ್ಯಕ್ಕೂ ಒಳ್ಳೆಯದು. ಕರಿಬೇವಿನಲ್ಲಿ ಕಬ್ಬಿಣ, ಸತು, ತಾಮ್ರ, ಕ್ಯಾಲ್ಸಿಯಂ, ವಿಟಮಿನ್ ಎ ಮತ್ತು ಬಿ, ಅಮೈನೋ ಆಮ್ಲಗಳು, ಪ್ರೋಟೀನ್, ಕಾರ್ಬೋಹೈಡ್ರೇಟ್ ಗಳು ಮತ್ತು ಫೋಲಿಕ್ ಆಮ್ಲದಂತಹ ಪೋಷಕಾಂಶಗಳಿವೆ.

ಕರಿಬೇವಿನ ರಸ ತಯಾರಿಸಿ ಸೇವನೆ ಮಾಡುವುದ್ರಿಂದ ಏನೆಲ್ಲ ಲಾಭವಿದೆ ಎಂಬುದರ ವಿವರ ಇಲ್ಲಿದೆ.

ಕರಿಬೇವನ್ನ ಸ್ವಚ್ಛವಾಗಿ ತೊಳೆದು ಮಿಕ್ಸಿ ಜಾರಿಗೆ ಹಾಕಿ. ಸ್ವಲ್ಪ ನೀರು ಹಾಕಿ ರುಬ್ಬಿಕೊಳ್ಳಿ. ಮಿಶ್ರಣ ನುಣ್ಣಗಾದ ಮೇಲೆ ಅದಕ್ಕೆ ಸ್ವಲ್ಪ ನೀರು ಹಾಕಿ ರುಬ್ಬಿಕೊಳ್ಳಿ. ನಂತ್ರ ಅದನ್ನು ಜರಡಿ ಹಿಡಿದು ಆ ನೀರನ್ನು ಸೇವನೆ ಮಾಡಿ. 15-20 ಕರಿಬೇವಿನ ಎಲೆಯನ್ನು ನೀರಿನಲ್ಲಿ ಕುದಿಸಿ, ಜರಡಿ ಹಿಡಿದು ಜೇನುತುಪ್ಪ ಅಥವಾ ನಿಂಬೆ ರಸವನ್ನು ಬೆರೆಸಿ ಸೇವನೆ ಮಾಡಿ.

ಕರಿಬೇವಿನ ಎಲೆ ರಸವನ್ನು ಸೇವಿಸುವುದರಿಂದ ರಕ್ತಹೀನತೆಯ ಸಮಸ್ಯೆ ಕಡಿಮೆಯಾಗುತ್ತದೆ. ದೇಹದಿಂದ ವಿಷಕಾರಿ ಅಂಶಗಳನ್ನು ತೆಗೆದುಹಾಕುವುದರ ಮೂಲಕ ದೇಹವನ್ನು ಶುದ್ಧಗೊಳಿಸುತ್ತದೆ. ಹೆಚ್ಚುವರಿ ಕೊಬ್ಬನ್ನು ತೆಗೆದುಹಾಕುವಲ್ಲಿ ಸಹಕಾರಿ. ಕರಿಬೇವಿನ ಎಲೆ ರಸವು ತೂಕವನ್ನು ಕಡಿಮೆ ಮಾಡಲು ಸಾಕಷ್ಟು ಸಹಾಯ ಮಾಡುತ್ತದೆ. ರಸವನ್ನು ಕುಡಿಯಲು ಇಷ್ಟಪಡದವರು ಎಲೆಗಳನ್ನು ಆಹಾರದೊಂದಿಗೆ ಸೇವಿಸಬಹುದು.

ಕರಿಬೇವಿನ ಎಲೆ ರಸವು ದೃಷ್ಟಿ ಸಮಸ್ಯೆ ಕಡಿಮೆ ಮಾಡುತ್ತದೆ. ಬರಿ ಎಲೆಯನ್ನು ಕೂಡ ನೀವು ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಸೇವನೆ ಮಾಡಬಹುದು. ಕರಿಬೇವಿನ ಎಲೆ ರಸ ಜೀರ್ಣಾಂಗ ವ್ಯವಸ್ಥೆಯನ್ನು ಬಲಗೊಳ್ಳುತ್ತದೆ. ಅನಿಲ, ಹೊಟ್ಟೆ ಅಜೀರ್ಣ ಸಮಸ್ಯೆ ಕಡಿಮೆ ಮಾಡುತ್ತದೆ. ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸುವ ಮೂಲಕ ಮಧುಮೇಹ ರೋಗಿಗೆ ನೆಮ್ಮದಿ ನೀಡುತ್ತದೆ.

## 'ರಕ್ಕಸಪುರದೋಳ್' ರಾಜ್ ಬಿ ಶೆಟ್ಟಿ ಆರ್ಭಟ



ಸಾಹಸ ನಿರ್ದೇಶಕರಾಗಿ ಭಾರತದಾದ್ಯಂತ ಜನಪ್ರಿಯರಾಗಿರುವ ಕನ್ನಡದ ಹೆಮ್ಮೆಯ ಸಾಹಸ ನಿರ್ದೇಶಕ ಕೆ.ರವಿವರ್ಮ ಅವರ ಪ್ರಥಮ ನಿರ್ಮಾಣದ, ರವಿ ಸಾರಂಗ ಚೊಚ್ಚಲ ನಿರ್ದೇಶನದ ಹಾಗೂ ತಮ್ಮ ಅಮೋಘ ಅಭಿನಯದ ಮೂಲಕ ಖ್ಯಾತರಾಗಿರುವ ರಾಜ್ ಬಿ ಶೆಟ್ಟಿ ನಾಯಕರಾಗಿ ನಟಿಸುತ್ತಿರುವ 'ರಕ್ಕಸಪುರದೋಳ್' ಚಿತ್ರದ ಮುಹೂರ್ತ ಸಮಾರಂಭ ನೆಟಕಲ್ಲಪ್ಪ ಸರ್ಕಲ್ ನಲ್ಲಿರುವ ವರಸಿದ್ದಿ ವಿನಾಯಕ ದೇವಸ್ಥಾನದಲ್ಲಿ ವರಮಹಾಲಕ್ಷ್ಮೀ ಹಬ್ಬದಂದು ಅದ್ದೂರಿಯಾಗಿ ನೆರವೇರಿತು. ನಟಿ ರಕ್ಷಿತ ಹಾಗೂ ನಿರ್ದೇಶಕ ಪ್ರೇಮ್ ಚಿತ್ರದ ಮೊದಲ ಸನ್ನಿವೇಶಕ್ಕೆ ಚಾಲನೆ ನೀಡಿ, ಶೀರ್ಷಿಕೆ ಅನಾವರಣ ಮಾಡಿದರು. ಕೆ.ವಿ.ಎನ್ ಸಂಸ್ಥೆಯ ಸುಪ್ರೀತ್ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು.

ಸಾಹಸ ನಿರ್ದೇಶಕರಾಗಿ ಜನಪ್ರಿರಾಗಿರುವ ರವಿವರ್ಮ ಅವರು ಈ ಚಿತ್ರದ ಮೂಲಕ ನಿರ್ಮಾಪಕರಾಗಿ ಚಿತ್ರರಂಗ ಪ್ರವೇಶಿಸುತ್ತಿದ್ದಾರೆ. ದಿ ವಿಲನ್, ಏಕ್ ಲವ್ ಯಾ , ಕೆಡಿ ಮುಂತಾದ ಚಿತ್ರಗಳಿಗೆ ಅಸಿಸ್ಟೆಂಟ್ ಡೈರೆಕ್ಟರ್ ಆಗಿದ್ದ ರವಿ ಸಾರಂಗ ಈ ಚಿತ್ರದ ಮೂಲಕ ಸ್ವತಂತ್ರ ನಿರ್ದೇಶಕರಾಗುತ್ತಿದ್ದಾರೆ. ಜನಪ್ರಿಯ ನಟ ರಾಜ್ ಬಿ ಶೆಟ್ಟಿ ನಾಯಕರಾಗಿ ನಟಿಸುತ್ತಿದ್ದಾರೆ. ರಕ್ಕಸಪುರದೋಳ್ ಚಿತ್ರ ಚಂದನವನದಲ್ಲಿ ಭರ್ಜರಿ ಯಶಸ್ಸು ಕಾಣಲಿ ಎಂದು ರಕ್ಷಿತ ? ಪ್ರೇಮ್ ದಂಪತಿ ಹಾರೈಸಿದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ರಕ್ಕಸಪುರದೋಳ್ ಚಿತ್ರದ ಕಥೆ ತುಂಬಾ ಚೆನ್ನಾಗಿದೆ. ಜನರನ್ನು ಚಿತ್ರಮಂದಿರಕ್ಕೆ ಕರೆತರಲು ಬೇಕಾಗಿರುವಂತಹ ಕಥೆಯನ್ನು ನಿರ್ದೇಶಕ ರವಿ ಮಾಡಿಕೊಂಡಿದ್ದಾರೆ. ನಾನು ಪೊಲೀಸ್ ಅಧಿಕಾರಿ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದೇನೆ. ಹಿಂದಿನ ಚಿತ್ರಗಳಿಗಿಂತ ಭಿನ್ನ ಪಾತ್ರ ಎಂದರು ರಾಜ್ ಬಿ ಶೆಟ್ಟಿ.

ಕಳೆದ ಹತ್ತು ವರ್ಷಗಳಿಂದ ಪ್ರೇಮ್ ಸರ್ ಬಳಿ ಕಥೆ, ಚಿತ್ರಕಥೆ ಹಾಗೂ ನಿರ್ದೇಶನ ವಿಭಾಗದಲ್ಲಿ ಕೆಲಸ ಮಾಡುತ್ತಿದ್ದೇನೆ. ಅವರ ಸಹಕಾರ ನನಗೆ ಎಂದಿಗೂ ಇರುತ್ತದೆ. ಪ್ರೇಮ್ ಮತ್ತು ರಕ್ಷಿತ ಅವರಿಗೆ ಧನ್ಯವಾದ. ''ರಕ್ಕಸ'' ಎಂದರೆ ರಾಕ್ಷಸ. ''ಪುರ'' ಎಂದರೆ ಊರು. ರಾಕ್ಷಸರೆ ಇರುವ ಊರು ಎಂಬುದು ಈ ಶೀರ್ಷಿಕೆಯ ಅರ್ಥ. ಮನುಷ್ಯನಲ್ಲಿ ಎರಡು ಗುಣಗಳಿರುತ್ತದೆ. ಒಂದು ಒಳ್ಳೆಯದು. ಮತ್ತೊಂದು ಕೆಟ್ಟದ್ದು. ಆ ಕೆಟ್ಟ ಗುಣಗಳನ್ನು ''ರಕ್ಕಸ'' ಎನ್ನಬಹುದು. ನಿರ್ಮಾಪಕ ರವಿವರ್ಮ ಹಾಗೂ ನಾಯಕ ರಾಜ್ ಬಿ ಶೆಟ್ಟಿ ಅವರು ಕಥೆ ಮೆಚ್ಚಿಕೊಂಡದ್ದು ಸಂತೋಷವಾಗಿದೆ. ಸದ್ಯದಲ್ಲೇ ಚಿತ್ರೀಕರಣ ಆರಂಭವಾಗಲಿದೆ ಎಂದರು ನಿರ್ದೇಶಕ ರವಿ ಸಾರಂಗ.

ರವಿ ಸಾರಂಗ ಅವರು ನನಗೆ ಎರಡು ವರ್ಷಗಳ ಪರಿಚಯ ಎಂದು ಮಾತು ಆರಂಭಿಸಿದ ನಿರ್ಮಾಪಕ ಕೆ.ರವಿವರ್ಮ, ಸಾಹಸ ನಿರ್ದೇಶಕನಾಗಿ ನನಗೆ ಎಲ್ಲರೂ ಪ್ರೋತ್ಸಾಹ ನೀಡಿದ್ದೀರಿ. ನಿರ್ಮಾಪಕನಾಗಿ ಇದು ಮೊದಲ ಚಿತ್ರ. ರವಿ ಸಾರಂಗ ಒಳ್ಳೆಯ ಕಥೆ ಮಾಡಿದ್ದಾರೆ. ರಾಜ್ ಬಿ ಶೆಟ್ಟಿ ಆ ಕಥೆಯನ್ನು ಒಪ್ಪಿ ನಟಿಸುತ್ತಿದ್ದಾರೆ. ಅರ್ಜುನ್ ಜನ್ಯ ಸಂಗೀತ ನಿರ್ದೇಶನ, ವಿಲಿಯಂ ಡೇವಿಡ್ ಛಾಯಾಗ್ರಹಣ, ಕೆ.ಎಂ.ಪ್ರಕಾಶ್ ಸಂಕಲನ, ಮೋಹನ್ ಬಿ ಕೆರೆ ಕಲಾ ನಿರ್ದೇಶನವಿರುವ ಹಾಗೂ ನರಸಿಂಹ ಜಾಲಹಳ್ಳಿ ಅವರ ನಿರ್ಮಾಣ ನಿರ್ವಹಣೆಯಿರುವ ''ರಕ್ಕಸಪುರದೋಳ್'' ಚಿತ್ರಕ್ಕೆ ಕ್ರಾಂತಿ ಕುಮಾರ್ ಸಂಭಾಷಣೆ ಬರೆಯುತ್ತಿದ್ದಾರೆ. ವರಮಹಾಲಕ್ಷ್ಮೀ ಹಬ್ಬದ ಶುಭ ದಿನದಂದು ರಕ್ಷಿತ ಪ್ರೇಮ್ ಅವರು ಚಿತ್ರಕ್ಕೆ ಚಾಲನೆ ನೀಡಿದ್ದಾರೆ. ಒಂದೊಳ್ಳೆ ಚಿತ್ರ ನಿರ್ಮಾಣ ಮಾಡುತ್ತಿರುವ ಖುಷಿಯಿದೆ ಎಂದರು.

ರವಿವರ್ಮ ಅವರು ಸಾಹಸ ನಿರ್ದೇಶಕರಾಗಿ ನನ್ನ ನಿರ್ದೇಶನದ ಚಿತ್ರದಲ್ಲೂ ಕಾರ್ಯ ನಿರ್ವಹಿಸಿದ್ದಾರೆ. ಈ ಚಿತ್ರದ ಮೂಲಕ ನಿರ್ಮಾಪಕರಾಗುತ್ತಿದ್ದಾರೆ. ರಾಜ್ ಬಿ ಶೆಟ್ಟಿ ಅವರ ನಟನೆಯನ್ನು ಹತ್ತಿರದಿಂದ ನೋಡಿದ್ದೇನೆ. ಅವರೊಬ್ಬ ಉತ್ತಮ ಕಲಾವಿದ. ಇನ್ನು ರವಿ ಸಾರಂಗ ಈ ಚಿತ್ರ ನಿರ್ದೇಶನ ಮಾಡುತ್ತಿದ್ದಾರೆ. ಒಟ್ಟಿನಲ್ಲಿ ಇದು ಕನ್ನಡದ ''ಆರ್ ಆರ್ ಆರ್'' ಚಿತ್ರ. ತ್ರಿಬಲ್ ಆರ್ ತರಹ ಈ ಚಿತ್ರ ಕೂಡ ಯಶಸ್ವಿಯಾಗಲಿ ಎಂದು ಸಂಗೀತ ನಿರ್ದೇಶಕ ಅರ್ಜುನ್ ಜನ್ಯ ಹಾರೈಸಿದರು. ನಾಯಕಿ ಸ್ವಾತಿಷ್ಟ ಕೃಷ್ಣ, ನಟ ಬಿ.ಸುರೇಶ್, ನಟಿ ಅರ್ಚನಾ ಕೊಟ್ಟಿಗೆ, ಚಿತ್ರದಲ್ಲಿ ಅಭಿನಯಿಸುತ್ತಿರುವ ಗೌರವ್ ಶೆಟ್ಟಿ, ಸಿದ್ದಣ್ಣ, ಸುಮ, ಅನಿರುದ್ದ್ ಭಟ್, ಛಾಯಾಗ್ರಾಹಕ ವಿಲಿಯಂ ಡೇವಿಡ್, ಸಂಭಾಷಣೆಕಾರ ಕ್ರಾಂತಿ ಕುಮಾರ್ ಹಾಗೂ ನರಸಿಂಹ ಜಾಲಹಳ್ಳಿ ಮುಂತಾದವರು ''ರಕ್ಕಸಪುರದೋಳ್'' ಚಿತ್ರದ ಕುರಿತು ಮಾತನಾಡಿದರು.

## ತ್ವಚೆಯ ಆರೋಗ್ಯ ಸುಧಾರಿಸಲು ಮೊಟ್ಟೆ ಸೇವನೆ ತುಂಬಾನೇ ಸಹಕಾರಿ

### ಬ್ಯೂಟಿ ಟಿಪ್ಸ್



ಮೊಟ್ಟೆಗಳು ಸಂಪೂರ್ಣ ಪ್ರೋಟೀನ್ ಮೂಲವಾಗಿದೆ, ಅಂದರೆ ಅವು ದೇಹಕ್ಕೆ ಅಗತ್ಯವಿರುವ ಎಲ್ಲಾ ಒಂಬತ್ತು ಅಗತ್ಯ ಅಮೈನೋ ಆಮ್ಲಗಳನ್ನು ಹೊಂದಿರುತ್ತವೆ. ಇದು ಸ್ನಾಯುಗಳ ದುರಸ್ತಿ, ಬೆಳವಣಿಗೆ ಮತ್ತು ಒಟ್ಟಾರೆ ದೈಹಿಕ ಕಾರ್ಯಕ್ಕೆ ಸಹಾಯ ಮಾಡುತ್ತದೆ. ದೊಡ್ಡ ಗಾತ್ರದ ಮೊಟ್ಟೆಯಲ್ಲಿ ಸುಮಾರು 6 ಗ್ರಾಂ ಪ್ರೋಟೀನ್ ಇರುತ್ತದೆ. ಪ್ರೋಟೀನ್ ಜೊತೆಗೆ, ಮೊಟ್ಟೆಗಳು ಜೀವಸತ್ವಗಳು ಮತ್ತು ಖನಿಜಗಳಿಂದ ತುಂಬಿರುತ್ತವೆ. ವಿಟಮಿನ್ ಬಿ 12 ನರಗಳ ಕಾರ್ಯ ಮತ್ತು ಕೆಂಪು ರಕ್ತ ಕಣಗಳ ರಚನೆಗೆ ಅವಶ್ಯಕವಾಗಿದೆ. ವಿಟಮಿನ್ ಡಿ ಕ್ಯಾಲ್ಸಿಯಂ ಹೀರಿಕೊಳ್ಳುವಿಕೆಯನ್ನು ಹೆಚ್ಚಿಸುವ ಮೂಲಕ ಮೂಳೆಯ ಆರೋಗ್ಯವನ್ನು ಬೆಂಬಲಿಸುತ್ತದೆ. ಸೆಲೆನಿಯಮ್ ಒಂದು ಉತ್ಕರ್ಷಣ ನಿರೋಧಕವಾಗಿದೆ.

ಜೀವಕೋಶ ಪೊರೆಯ ಸಮಗ್ರತೆ ಮತ್ತು ಮೆದುಳಿನ ಆರೋಗ್ಯಕ್ಕೆ ಕೋಲೀನ್ ಅತ್ಯಗತ್ಯ. ಲುಟೀನ್ ಮತ್ತು ಜಿಯಾಕ್ಸಾಂಥಿನ್ ಮೊಟ್ಟೆಗಳಲ್ಲಿ ಕಂಡುಬರುವ ಕ್ಯಾರೊಟಿನಾಯ್ಡ್‌ಗಳು ಹಾನಿಕಾರಕ ಹೆಚ್ಚಿನ ಶಕ್ತಿಯ ಬೆಳಕಿನ ಅಲೆಗಳನ್ನು ಫಿಲ್ಟರ್ ಮಾಡಲು ಸಹಾಯ ಮಾಡುತ್ತದೆ. ಈ ಉತ್ಕರ್ಷಣ ನಿರೋಧಕಗಳು ರೆಟಿನಾವನ್ನು ಹಾನಿಯಿಂದ ರಕ್ಷಿಸುತ್ತದೆ ಮತ್ತು ವಯಸ್ಸಿಗೆ ಸಂಬಂಧಿಸಿದ ಮ್ಯಾಕ್ಯುಲರ್ ಡಿಜೆನರೇಶನ್ ಮತ್ತು ಕಣ್ಣಿನ ಪೊರೆಗಳನ್ನು ಅಭಿವೃದ್ಧಿಪಡಿಸುವ ಅಪಾಯವನ್ನು ಕಡಿಮೆ ಮಾಡುತ್ತದೆ. ಮೊಟ್ಟೆಗಳಲ್ಲಿ ಗಮನಾರ್ಹ ಪ್ರಮಾಣದಲ್ಲಿ ಕಂಡುಬರುವ ಕೋಲಿನ್, ಮೆಮೊರಿ ಮತ್ತು ಕಲಿಕೆಯಲ್ಲಿ ಒಳಗೊಂಡಿರುವ ನರಪ್ರೇಕ್ಷಕವಾದ ಅಸೆಟೈಲ್ಕೋಲಿನ್ ಸಂಶ್ಲೇಷಣೆಗೆ ನಿರ್ಣಾಯಕವಾಗಿದೆ.

ಸಾಕಷ್ಟು ಕೋಲೀನ್ ಸೇವನೆಯು ಸುಧಾರಿತ ಅರಿವಿನ ಕಾರ್ಯಕ್ಕೆ ಸಂಬಂಧಿಸಿದೆ ಮತ್ತು ಶಿಶುಗಳಲ್ಲಿ ಮೆದುಳಿನ ಬೆಳವಣಿಗೆಯನ್ನು ಬೆಂಬಲಿಸಬಹುದು.ಮೊಟ್ಟೆಯಲ್ಲಿರುವ ಪ್ರೊಟೀನ್ ಅತ್ಯಾಧಿಕತೆಯನ್ನು ಉತ್ತೇಜಿಸುತ್ತದೆ, ನಿಮಗೆ ಹೆಚ್ಚು ಸಮಯ ಪೂರ್ಣವಾಗಿರಲು ಸಹಾಯ ಮಾಡುತ್ತದೆ. ಇದು ದಿನವಿಡೀ ಕಡಿಮೆ ಕ್ಯಾಲೋರಿ ಸೇವನೆಗೆ ಕಾರಣವಾಗಬಹುದು. ಆಹಾರದಲ್ಲಿ ಮೊಟ್ಟೆಗಳನ್ನು ಸೇರಿಸುವುದು ತೂಕ ನಷ್ಟಕ್ಕೆ ಮತ್ತು ತೂಕ ನಿರ್ವಹಣೆಯನ್ನು ಸುಧಾರಿಸಲು ಸಹಾಯ ಮಾಡುತ್ತದೆ ಎಂದು ಅಧ್ಯಯನಗಳು ಸೂಚಿಸುತ್ತವೆ.

## ಅರಿಸಿನ್ಫ್ರಾ ಸೊಲ್ಯೂಷನ್ಸ್ ಲಿಮಿಟೆಡ್ ಸೆಬಿಗೆ ರೆಡ್ ಹೆರ್ರಿಂಗ್ ಪ್ರಸ್ಪೆಕ್ಟಸ್ ಸಲ್ಲಿಕೆ

**ಮೈಸೂರು:** ಅರಿಸಿನ್ಫ್ರಾ ಸೊಲ್ಯೂಷನ್ಸ್ ಲಿಮಿಟೆಡ್ ( ಏಎಸ್ಎಲ್ ಅಥವಾ ದಿ ಕಂಪನಿ) ತನ್ನ ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ ( ಡಿಆರ್‌ಹೆಚ್ಪಿ) ಅನ್ನು ಮಾರುಕಟ್ಟೆ ನಿಯಂತ್ರಕ ಸೆಕ್ಯುರಿಟೀಸ್ ಮತ್ತು ಎಕ್ಸ್ಚೇಂಜ್ ಬೋರ್ಡ್ ಆಫ್ ಇಂಡಿಯಾ ( ಸೆಬಿ)ಗೆ ಸಲ್ಲಿಸಿದೆ.

ಕಂಪನಿಯು ವ್ಯವಹಾರದಿಂದ ವ್ಯವಹಾರಕ್ಕೆ ತಂತ್ರಜ್ಞಾನ-ಸಕ್ರಿಯಗೊಳಿಸಿದ ಕಂಪನಿಯಾಗಿದ್ದು, ನಿರ್ಮಾಣ ಸಾಮಗ್ರಿಗಳಿಗಾಗಿ ಸಂಪೂರ್ಣ ಸಂಗ್ರಹಣೆ ಪ್ರಕ್ರಿಯೆಯನ್ನು ಸರಳಗೊಳಿಸುವ ಮತ್ತು ಡಿಜಿಟಲೀಕರಣ ಮಾಡುವ ಮೂಲಕ ಪರಿಣಾಮಕಾರಿ ಅಂತ್ಯದಿಂದ ಅಂತ್ಯದ ಖರೀದಿ ಅನುಭವವನ್ನು ನೀಡುತ್ತದೆ.

ಈಕ್ವಿಟಿ ಷೇರು ಬಂಡವಾಳದ ಮುಖಬೆಲೆ 2 ರ ಆರಂಭಿಕ ಸಾರ್ವಜನಿಕ ಕೊಡುಗೆಯ ಮೂಲಕ 6,000 ಮಿಲಿಯನ್ 600 ಕೋಟಿ ವರೆಗೆ ಹಣವನ್ನು ಸಂಗ್ರಹಿಸಲು ಕಂಪನಿಯು ಯೋಜಿಸಿದೆ. (ಒಟ್ಟು ಸಂಚಿಕೆ ಗಾತ್ರ). ಒಟ್ಟು ಸಂಚಿಕೆ ಗಾತ್ರವು 6,000 ಮಿಲಿಯನ್ 600 ಕೋಟಿ ವರೆಗೆ ಒಟ್ಟುಗೂಡಿದ ಈಕ್ವಿಟಿ ಷೇರುಗಳ ತಾಜಾ ವಿತರಣೆಯನ್ನು ಒಳಗೊಂಡಿದೆ. (ತಾಜಾ ಸಂಚಿಕೆ)

ಕಂಪನಿಯು ಮಾರಾಟದಿಂದ ಬರುವ ನಿವ್ವಳ ಆದಾಯವನ್ನು () ಕಂಪನಿಯು 2,046 ಮಿಲಿಯನ್ 204.60 ಕೋಟಿ ಎಂದು ಅಂದಾಜಿಸಲಾದ ಕೆಲವು ಬಾಕಿ ಸಾಲಗಳ ಪೂರ್ಣ ಅಥವಾ ಭಾಗಶಃ ಮರುಪಾವತಿ / ಪೂರ್ವಪಾವತಿ; 1,770 ಮಿಲಿಯನ್ 177 ಕೋಟಿ ಎಂದು ಅಂದಾಜಿಸಲಾದ ಕಂಪನಿಯ ಕಾರ್ಯನಿರತ ಬಂಡವಾಳದ ಅಗತ್ಯತೆಗಳಿಗೆ ಧನಸಹಾಯ; 480 ಮಿಲಿಯನ್ 48 ಕೋಟಿ ಎಂದು ಅಂದಾಜಿಸಲಾದ ಅದರ ಕಾರ್ಯನಿರತ ಬಂಡವಾಳದ ಅಗತ್ಯಗಳಿಗೆ ನಿಧಿಗಾಗಿ ಅದರ ಅಂಗ ಸಂಸ್ಥೆ , ಬಿಲ್ಡ್ಮ್ಯಾಕ್ಸ್-ಇನ್ಫ್ರಾ ಪ್ರೈವೇಟ್ ಲಿಮಿಟೆಡ್ (ಬಿಲ್ಡ್ಮ್ಯಾಕ್ಸ್) ನಲ್ಲಿ ಹೂಡಿಕೆ; (ತ) ಅದರ ಅಂಗಸಂಸ್ಥೆಯಾದ ಅರಿಸ್ಯೂನಿಟರ್ನ್ ರಿ ಸೊಲ್ಯೂಷನ್ಸ್ ಪ್ರೈವೇಟ್ ಲಿಮಿಟೆಡ್ನ (ಹಿಂದೆ ಅರಿಸ್ಯೂನಿಟರ್ನ್ ಪ್ರೈವೇಟ್ ಲಿಮಿಟೆಡ್) ಅಸ್ತಿತ್ವದಲ್ಲಿರುವ ಷೇರುದಾರರಿಂದ ಭಾಗಶಃ ಷೇರುಗಳನ್ನು ಖರೀದಿಸುವುದು 204 ಮಿಲಿಯನ್ 20.40 ಕೋಟಿ ಮತ್ತು ಸಾಮಾನ್ಯ ಸಾಂಸ್ಥಿಕ ಉದ್ದೇಶಗಳಿಗಾಗಿ ಮತ್ತು ಗುರುತಿಸಲಾಗದ ಅಜೈವಿಕ ಉದ್ದೇಶಗಳಿಗಾಗಿ ಬಾಕಿ ಮೊತ್ತ. ( ಮಾರಾಟದ ಗುರಿ) ಬಳಸಿಕೊಳ್ಳಲು ಉದ್ದೇಶಿಸಿದೆ.

ಜೆಎಂ ಫೈನಾನ್ಶಿಯಲ್ ಲಿಮಿಟೆಡ್, ಐಐಎಫ್ಎಲ್ ಸೆಕ್ಯುರಿಟೀಸ್ ಲಿಮಿಟೆಡ್ ಮತ್ತು ನುವಾಮಾ ವೆಲ್ತ್ ಮ್ಯಾನೇಜ್ಮೆಂಟ್ ಲಿಮಿಟೆಡ್ (ಹಿಂದೆ ಎಡೆಲ್ವೀಸ್ ಸೆಕ್ಯುರಿಟೀಸ್ ಲಿಮಿಟೆಡ್ ಎಂದು ಕರೆಯಲಾಗುತ್ತಿತ್ತು) ಈ ಸಮಸ್ಯೆಯ ಬುಕ್ ರನ್ನಿಂಗ್ ಲೀಡ್ ಮ್ಯಾನೇಜರ್ ಗಳಾಗಿವೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ವಿದ್ಯಾರ್ಥಿಗಳಿಗೆ ಶುಭ, ಸಹೋದರರೊಂದಿಗೆ ಉತ್ತಮ ಬಾಂಧವ್ಯ, ಪರಿಶ್ರಮಕ್ಕೆ ತಕ್ಕ ಪ್ರತಿಫಲ.

**ವೃಷಭ:** ಮನೆಯಲ್ಲಿ ಸಂತೋಷದ ವಾತಾವರಣ, ಸಮಾಜದಲ್ಲಿ ವಿಶೇಷ ಗೌರವ ಲಭ್ಯ, ಅನವಶ್ಯಕ ಹಣ ಖರ್ಚು.

**ಮಿಥುನ:** ವ್ಯಾಪಾರದಲ್ಲಿ ಲಾಭ, ಧಾರ್ಮಿಕ ಕಾರ್ಯಗಳಲ್ಲಿ ಆಸಕ್ತಿ ಹೆಚ್ಚು, ಶತ್ರುಗಳ ಕಾಟ.

**ಕರ್ಕಾಟಕ:** ಶಿಕ್ಷಕರಿಗೆ ಪ್ರಶಸ್ತಿ ಸನ್ಮಾನಗಳು ಲಭ್ಯ, ಮನೆಯಲ್ಲಿ ಶುಭಕಾರ್ಯ, ದಂಪತಿಗಳ ಮಧ್ಯೆ ಸಾಮರಸ್ಯ.

**ಸಿಂಹ:** ಆಸ್ತಿಯ ವಿವಾದಗಳು ಬಗೆಹರಿಯಲಿದೆ, ಅವಿವಾಹಿತರಿಗೆ ವಿವಾಹ ಯೋಗ, ಹಣದ ವ್ಯವಹಾರದಲ್ಲಿ ಜಾಗರೂಕರಾಗಿರಿ.

**ಕನ್ಯಾ:** ಉದ್ಯೋಗಾಕಾಂಕ್ಷಿಗಳಿಗೆ ಶುಭ, ಸಂಗಾತಿಯಿಂದ ಆರ್ಥಿಕ ಬೆಂಬಲ, ವೈವಾಹಿಕ ಜೀವನದಲ್ಲಿ ಸಂತೋಷ ಹೆಚ್ಚು.

**ತುಲಾ:** ಕುಟುಂಬದಲ್ಲಿ ಶಾಂತಿ, ಲೇವಾದೇವಿ ವ್ಯವಹಾರದಲ್ಲಿ ಲಾಭ, ಒತ್ತಡ ಹೆಚ್ಚಾಗುವ ಸಾಧ್ಯತೆ.

**ವೃಶ್ಚಿಕ:** ವಿದೇಶದಲ್ಲಿರುವ ಸಂಬಂಧಿಕರಿಂದ ಶುಭ ಸುದ್ದಿ, ಅಧಿಕಾರಿಗಳೊಂದಿಗೆ ಉತ್ತಮ ಸಂಬಂಧ ಹೊಂದುವಿರಿ, ಆರೋಗ್ಯದಲ್ಲಿ ಸಮಸ್ಯೆ ಉಂಟಾದೀತು ಎಚ್ಚರಿಕೆ ವಹಿಸಿ.

**ಧನಸ್ಸು:** ನಿರೀಕ್ಷಿಸಿದಂತೆ ಕೆಲಸಗಳು ನೆರವೇರುತ್ತದೆ, ಹಿರಿಯರ ಆಸ್ತಿಯಿಂದ ಲಾಭ, ಹಣ ಬಂದರೂ ಅಧಿಕ ಖರ್ಚು.

**ಮಕರ:** ಪಾಲುದಾರರಿಗೆ ವ್ಯವಹಾರದಲ್ಲಿ ಲಾಭ, ವೃತ್ತಿಯಲ್ಲಿ ಬಡ್ತಿ ಸಿಗಲಿದೆ, ಆಡುವ ಮಾತಿನ ಮೇಲೆ ಹಿಡಿತವಿರಲಿ.

**ಕುಂಭ:** ಹಾಲಿನ ಮಾರಾಟಗಾರರಿಗೆ ಲಾಭ, ಕಾನೂನು ವಿಷಯಗಳಲ್ಲಿ ಜಯ, ತಾಯಿಯ ಆರೋಗ್ಯದ ಬಗ್ಗೆ ಹೆಚ್ಚಿನ ಗಮನಹರಿಸಿ.

**ಮೀನ:** ವಾದ ವಿವಾದಗಳಲ್ಲಿ ಜಯ, ಸಾಲದಿಂದ ಮುಕ್ತಿ ಸಿಗಲಿದೆ, ವಿದ್ಯುತ್ ಯಂತ್ರೋಪಕರಣಗಳಿಂದ ತೊಂದರೆ.

## ವಿಶ್ವ ಸ್ತನ ಕ್ಯಾನ್ಸರ್ ಸಂಶೋಧನಾ ದಿನ




ಆಗಸ್ಟ್ 18 ರಂದು ವಿಶ್ವ ಸ್ತನ ಕ್ಯಾನ್ಸರ್ ಸಂಶೋಧನಾ ದಿನವನ್ನು ಆಚರಿಸಲು ನಾವು ಹೆಮ್ಮೆಪಡುತ್ತೇವೆ. ಸ್ತನ ಕ್ಯಾನ್ಸರ್ ಒಂದು ಸಂಕೀರ್ಣ ಕಾಯಿಲೆಯಾಗಿದೆ, ಪೀಡಿತರಿಗೆ ದೈಹಿಕ ಮತ್ತು ಭಾವನಾತ್ಮಕ ಸಂಕಟವಿದೆ, ಮತ್ತು ನಂತರ ತಮ್ಮ ಪ್ರೀತಿಪಾತ್ರರ ಜೊತೆ ನಿಲ್ಲುವವರಿಗೆ ಭಾವನಾತ್ಮಕ ಪ್ರಕ್ಷುಬ್ಧತೆ, ಆ ಜೀವನವನ್ನು ಬದಲಾಯಿಸುವ ಪ್ರಯಾಣದ ಮೂಲಕ. ಈ ಭಯಾನಕ ಅಗ್ನಿಪರೀಕ್ಷೆಯ ಮೂಲಕ ಹೋದವರನ್ನು ನಾವು ಗೌರವಿಸುತ್ತೇವೆ, ಆದರೆ ಇಂದು ಈ ಮಾರಣಾಂತಿಕ ಕಾಯಿಲೆಯನ್ನು ಎದುರಿಸಲು ತಮ್ಮ ಶಕ್ತಿಯಿಂದ ಎಲ್ಲವನ್ನೂ ಮಾಡುತ್ತಿರುವ ಪುರುಷರು ಮತ್ತು ಮಹಿಳೆಯರ ಬಗ್ಗೆ ಹೆಚ್ಚು.

ಸ್ತನ ಕ್ಯಾನ್ಸರ್ನ ಮೊದಲ ದಾಖಲಿತ ಚಿಹ್ನೆಗಳು ಸುಮಾರು 3000 B.C. ಗೆ ಹಿಂದಿನದು, ಪ್ರಾಚೀನ ಗ್ರೀಸ್ನಲ್ಲಿ ಜನರು ಔಷಧದ ದೇವರು ಆಸ್ಕ್ಲೆಪಿಯಸ್ಗೆ ಸ್ತನದ ಆಕಾರದಲ್ಲಿ ಅರ್ಪಣೆಗಳನ್ನು ಮಾಡಿದರು.

ಸ್ತನ ಕ್ಯಾನ್ಸರ್ ಎಂಬ ಬೆದರಿಕೆಯನ್ನು ಅರ್ಥಮಾಡಿಕೊಳ್ಳಲು ಮತ್ತು ತಟಸ್ಥಗೊಳಿಸಲು ಇತಿಹಾಸದುದ್ದಕ್ಕೂ ಸಾಕಷ್ಟು ಪ್ರಯೋಗಗಳು ನಡೆದಿವೆ. ಪ್ರಾಚೀನ ಕಾಲದಲ್ಲಿ ಮತ್ತು ಇಂದು, ಜನರು ತಮ್ಮ ನಂಬಿಕೆ ಮತ್ತು ಉನ್ನತ ಶಕ್ತಿಯ ಕಡೆಗೆ ತಿರುಗುತ್ತಾರೆ, ಏಕೆಂದರೆ ಅವರು ತಮ್ಮ ಅದೃಷ್ಟವನ್ನು ನಿಯಂತ್ರಿಸುವ ಸಾಮರ್ಥ್ಯವನ್ನು ಅವರು ಅನುಭವಿಸುತ್ತಾರೆ. ಆದರೆ 1970 ರ ದಶಕದಿಂದ ಸ್ತನ ಕ್ಯಾನ್ಸರ್ ಸಂಶೋಧನೆ ಮತ್ತು ಸ್ತನ ಕ್ಯಾನ್ಸರ್ ಚಿಕಿತ್ಸೆಗಳು ಹೆಚ್ಚು ಪರಿಣಾಮಕಾರಿಯಾಗಿವೆ, ಧನಾತ್ಮಕ ರೋಗನಿರ್ಣಯಗಳು ಮತ್ತು ಕಡಿಮೆ ಸಾವುಗಳು ಮತ್ತು ಹೆಚ್ಚು ನಿರ್ವಹಿಸಬಹುದಾದ ಚಿಕಿತ್ಸಾ ಯೋಜನೆಗೆ ಕಾರಣವಾಯಿತು.

1960 ರ ದಶಕದಲ್ಲಿ ತುಲನಾತ್ಮಕವಾಗಿ ವ್ಯಾಖ್ಯಾನಿಸದ ದೃಷ್ಟಿಕೋನದಿಂದ, ಸ್ತನ ಕ್ಯಾನ್ಸರ್ ಅಂದಿನಿಂದ ಬೃಹತ್ ಜಾಗೃತಿ ಅಭಿಯಾನಕ್ಕೆ ಒಳಗಾಗಿದೆ ಮತ್ತು ಪ್ರಪಂಚದಾದ್ಯಂತ, ಪುರುಷರು ಮತ್ತು ಮಹಿಳೆಯರು ಈ ಸ್ಥಿರ ಮತ್ತು ಬಲವಾದ ಸಂದೇಶದ ಪರಿಣಾಮವಾಗಿ ನಿಯಮಿತ ಆರೋಗ್ಯ ಪರದೆಯ ಪ್ರಾಮುಖ್ಯತೆಯನ್ನು ಈಗ ಅರ್ಥಮಾಡಿಕೊಂಡಿದ್ದಾರೆ ಮತ್ತು ಅಂತರಾಷ್ಟ್ರೀಯವಾಗಿ ಪ್ರಸಾರವಾಗುವುದನ್ನು ಮುಂದುವರೆಸಿದೆ.ಮೇ 2021 ರಲ್ಲಿ, ಡಾ. ಸುಸಾನ್ ಲವ್ ಫೌಂಡೇಶನ್ ಅಧಿಕೃತವಾಗಿ ಈ ದಿನವನ್ನು ವಿಶ್ವ ಸ್ತನ ಕ್ಯಾನ್ಸರ್ ಸಂಶೋಧನಾ ದಿನವಾಗಿ ಪಿನ್ ಮಾಡಿತು, ರೋಗದ ಬಗ್ಗೆ ಗಮನ ಹರಿಸಲು ಮಾತ್ರವಲ್ಲದೆ ಈ ಕಾಯಿಲೆಯ ಮೇಲೆ ಪರಿಣಾಮ ಬೀರುವ ಈ ರೋಗವನ್ನು ಅರ್ಥಮಾಡಿಕೊಳ್ಳಲು ಮತ್ತು ಚಿಕಿತ್ಸೆ ನೀಡಲು ಮಾಡಿದ ಕೆಲಸ ಮತ್ತು ಪ್ರಯತ್ನದ ಪ್ರಮಾಣಕ್ಕೂ ಸಹ. ನಮ್ಮ ಗ್ರಹದಲ್ಲಿ ಅನೇಕ ಜನರು.

ವಿಶ್ವ ಸ್ತನ ಕ್ಯಾನ್ಸರ್ ಸಂಶೋಧನಾ ದಿನವು ಸ್ತನ ಕ್ಯಾನ್ಸರ್ ಮುಕ್ತ ಜಗತ್ತನ್ನು ಸಾಧಿಸಲು ನಮಗೆ ಅನುವು ಮಾಡಿಕೊಡುವ ಇತಿಹಾಸದಲ್ಲಿ ಒಂದು ಪ್ರಮುಖ ದಿನವಾಗಲಿದೆ ಎಂದು ಡಾ. ಸೂಸನ್ ಲವ್ ಫೌಂಡೇಶನ್ ಭರವಸೆ ನೀಡಿದೆ.

## ಬಾಹ್ಯಾಕಾಶದಲ್ಲೇ ಉಳಿದ ಸುನೀತಾ ವಿಲಿಯಮ್ಸ್‌ ಮೆದುಳಿಗೆ ಹಾನಿ ಸಂಭವ?



**ವಾಷಿಂಗ್ಟನ್:** ಬೋಯಿಂಗ್ ಸ್ಟಾರ್ ಲೈನರ್‌ನಲ್ಲಿ ಬಾಹ್ಯಾಕಾಶಕ್ಕೆ ತೆರಳಿ, ವಾಪಸಾಗಲು ಸಾಧ್ಯವಾಗದೇ ಅಲ್ಲೇ ಉಳಿದಿರುವ ಗಗನಯಾತ್ರಿ ಸುನೀತಾ ವಿಲಿಯಮ್ಸ್ ಮತ್ತು ಬುಚ್ ವಿಲ್ಮೋರ್ ಅವರಿಗೆ ವಿವಿಧ ಆರೋಗ್ಯ ಸಮಸ್ಯೆಯಾಗುವ ಸಾಧ್ಯತೆಯಿದೆಯೆಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ಐಎಸ್‌ಎಸ್‌ನಲ್ಲಿ ಆಮ್ಲಜನಕದ ಕೊರತೆಯಿಂದಾಗಿ ಮೆದುಳಿಗೆ ಹಾನಿಯಾಗುವ ಸಾಧ್ಯತೆಯಿದೆ ಎಂದು ನರರೋಗ, ಪಾರ್ಶ್ವವಾಯು ತಜ್ಞ ಡಾ। ಭೂಪೇಶ್ ಕುಮಾರ್ ಹೇಳಿದ್ದಾರೆ. ಮನುಷ್ಯನ ಮೆದುಳಿಗೆ ಕೆಲವು ನಿಮಿಷ ಆಮ್ಲಜನಕ ಕೊರತೆಯಾದರೂ ಮೆದುಳಿನ ಕೋಶಗಳು ಸಾಯಲಾರಂಭಿಸುತ್ತವೆ. ಬಾಹ್ಯಾಕಾಶದಲ್ಲಿ ಆಮ್ಲಜನಕದ ಕೊರತೆ ಉಂಟಾದರೆ ಸಮಸ್ಯೆ ಗ್ಯಾರಂಟಿ.

ಈ ಪರಿಸ್ಥಿತಿಯನ್ನು ಹೈಪೋಕ್ಸಿಯಾ ಎನ್ನಲಾಗುತ್ತದೆ. ದೀರ್ಘಕಾಲಿಕ ಹೈಪೋಕ್ಸಿಯಾವು ಮೆದುಳಿಗೆ ಸರಿಪಡಿಸಲಾಗದ ಹಾನಿಯನ್ನು ಉಂಟುಮಾಡುತ್ತದೆ ಎಂದು ಅವರು ಹೇಳಿದ್ದಾರೆ. ಅಲ್ಲದೇ, ಬಾಹ್ಯಾಕಾಶದಲ್ಲಿನ ಕಾಸ್ಮಿಕ್ ವಿಕಿರಣದಿಂದ ಡಿಎನ್‌ಎ ಹಾನಿಯಾಗಿ ಕ್ಯಾನ್ಸರ್ ಸೇರಿ ಇತರ ಸಮಸ್ಯೆಗಳಿಗೆ ಕಾರಣವಾಗಬಹುದು. ಜತೆಗೆ, ಏಕಾಂಗಿತನದಿಂದ ಮಾನಸಿಕ ಸಮಸ್ಯೆಯಾಗಬಹು ದೆಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

## ಬ್ರೆಝಿಲ್‌ನಲ್ಲಿ ಕಾರ್ಯಾಚರಣೆ ಸ್ಥಗಿತಗೊಳಿಸಿದ X

**ಬ್ರೆಝಿಲ್:** ಇಲ್ಲಿನ ಸುಪ್ರೀಕೋರ್ಟ್‌ನ ಉನ್ನತ ನ್ಯಾಯಾಧೀಶರ ಸೆನ್ಸಾರ್ಶಿಪ್ ಆದೇಶಗಳು ಮತ್ತು ಬೆದರಿಕೆಯ ಕಾರಣ ಸಾಮಾಜಿಕ ಮಾಧ್ಯಮ X ಬ್ರೆಝಿಲ್ನಲ್ಲಿ ತಕ್ಷಣದಿಂದ ತನ್ನ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸುವುದಾಗಿ ಹೇಳಿದೆ.




ಜಡ್ಜ್ ಅಲೆಕ್ಸಾಂಡ್ರೆ ಮೊರೇಸ್, ಪ್ಲಾಟ್‌ಫಾರ್ಮ್‌ನಿಂದ ಕೆಲವು ವಿಷಯವನ್ನು ತೆಗೆದುಹಾಕಬೇಕೆಂಬ ಆದೇಶಗಳನ್ನು ಅನುಸರಿಸದಿದ್ದಲ್ಲಿ ದಕ್ಷಿಣ ಅಮೆರಿಕಾದ ದೇಶದಲ್ಲಿ ತನ್ನ ಕಾನೂನು ಪ್ರತಿನಿಧಿಗಳಲ್ಲಿ ಒಬ್ಬರನ್ನು ಬಂಧಿಸುವುದಾಗಿ ರಹಸ್ಯವಾಗಿ ಬೆದರಿಕೆ ಹಾಕಿದ್ದಾರೆ ಎಂದು ಎಕ್ಸ್ ದೂಷಿಸಿದೆ.

ಬಲಪಂಥೀಯ ಮಾಜಿ ಅಧ್ಯಕ್ಷ ಜೈರ್ ಬೋಲ್ಸನಾರೊ ಅವರ ಸರ್ಕಾರದ ಅವಧಿಯಲ್ಲಿ ನಕಲಿ ಸುದ್ದಿ ಮತ್ತು ದ್ವೇಷದ ಸಂದೇಶಗಳನ್ನು ಹರಡಿದ ಆರೋಪದ ಮೇಲೆ ತನಿಖೆ ನಡೆಸುತ್ತಿರುವಾಗ ಕೆಲವು ಖಾತೆಗಳನ್ನು ನಿರ್ಬಂಧಿಸಲು ಅಲೆಕ್ಸಾಂಡ್ರೆ ಮೊರೇಸ್ ಎಕ್ಸ್‌ಗೆ ಆದೇಶಿಸಿದ್ದರು. ನ್ಯಾಯಾಧೀಶರು ನಿರ್ಬಂಧಿಸಲು ಆದೇಶಿಸಿದ ಎಕ್ಸ್‌ನಲ್ಲಿ ಖಾತೆಗಳನ್ನು ಮರುಸಕ್ರಿಯಗೊಳಿಸುವುದಾಗಿ ಮಸ್ಕ್ ಹೇಳಿದ ನಂತರ ಅಲೆಕ್ಸಾಂಡ್ರೆ ಮೊರೇಸ್ ವಿಚಾರಣೆಯನ್ನು ಆರಂಭಿಸಿದ್ದರು. ಅಲೆಕ್ಸಾಂಡ್ರೆ ಮೊರೇಸ್ ಅವರ ನಿರ್ಧಾರ ಅಸಂವಿಧಾನಿಕ ಎಂದು ಎಲಾನ್ ಮಸ್ಕ್ ಹೇಳಿದ್ದಾರೆ.

## ವಿದ್ಯಾರ್ಥಿನಿಯ ಮೇಲೆ ಶಿಕ್ಷಕನಿಂದ ರೇಪ್: 20 ದಿನಗಳ ಬಳಿಕ ಸಾವು

**ಲಕ್ನೋ:** ದೇಶದಾದ್ಯಂತ ಭುಗಿಲೆದ್ದಿರುವ ಮಹಿಳಾ ಟ್ರೈನಿ ವೈದ್ಯೆಯ ಮೇಲೆ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ವಿರುದ್ಧ ರಾಷ್ಟ್ರವ್ಯಾಪಿ ಆಕ್ರೋಶದ ನಡುವೆ, 14 ವರ್ಷದ ವಿದ್ಯಾರ್ಥಿನಿ ಶಿಕ್ಷಕನಿಂದ ಅತ್ಯಾಚಾರಕ್ಕೊಳಗಾಗಿ ಸಾವನ್ನಪ್ಪಿರುವ ಘಟನೆ ಉತ್ತರ ಪ್ರದೇಶದ ಸೋನಭದ್ರ ಜಿಲ್ಲೆಯಲ್ಲಿ ನಡೆದಿದೆ. ದಾಖಲಾದ 20 ದಿನಗಳ ಬಳಿಕ ವಾರಣಾಸಿಯ ಬನಾರಸ್ ಹಿಂದೂ ವಿಶ್ವವಿದ್ಯಾಲಯದ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಿಸದೇ ವಿದ್ಯಾರ್ಥಿನಿ ಸಾವನ್ನಪ್ಪಿದ್ದಾಳೆ. ಸಂತ್ರಸ್ತೆಯನ್ನು ಸೋನಭದ್ರ ಜಿಲ್ಲೆ ದುಡ್ಡಿ ಗ್ರಾಮದ ನಿವಾಸಿಯೆಂದು ಗುರುತಿಸಲಾಗಿದ್ದು 8ನೇ ತರಗತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದಳು. ಆರೋಪಿಯನ್ನು ಉತ್ತರ ಪ್ರದೇಶದ ಬಲ್ಲಿಯಾ ಗ್ರಾಮದ ನಿವಾಸಿ. ವಿಶಾಂಬರ್ ಎಂದು ಗುರುತಿಸಲಾಗಿದ್ದು ಈಗ ಪರಾರಿಯಾಗಿದ್ದಾನೆ. ಆರೋಪಿಯು ಆಕೆ ಓದುತ್ತಿದ್ದ ಶಾಲೆಯಲ್ಲಿ ಕ್ರೀಡಾ ಶಿಕ್ಷಕನಾಗಿ ಕಾರ್ಯನಿರ್ವಹಿಸುತ್ತಿದ್ದನು. ಕಳೆದ ವರ್ಷ ಡಿಸೆಂಬರ್‌ನಲ್ಲಿ ಒಂದು ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಹೇಳಿದ್ದನು. ಅದಾದ ಬಳಿಕ ಆಕೆಯನ್ನು ಮನೆಗೆ ಕರೆದುಕೊಂಡು ಹೋಗಿ ಅತ್ಯಾಚಾರ ಎಸಗಿದ್ದಾನೆ. ಸಾರ್ವಜನಿಕರಿಂದಾಗುವ ಅವಮಾನಕ್ಕೆ ಹೆದರಿ ಅವಳು ಏನು ಮಾಡಲಿಲ್ಲ. ಆದರೆ ಕ್ರಮೇಣವಾಗಿ ಆಕೆಯ ಆರೋಗ್ಯ ಹದಗೆಟ್ಟಿತು. ಚಿಕಿತ್ಸೆಗಾಗಿ ಅವಳನ್ನು ಛತ್ತೀಸ್‌ಗಢದಲ್ಲಿರುವ ಸಂಬಂಧಿಕರ ಮನೆಗೆ ಕಳುಹಿಸಲಾಯಿತು. ಆದರೂ ಅವಳ ಆರೋಗ್ಯದಲ್ಲಿ ಯಾವುದೇ ಬದಲಾವಣೆ ಕಾಣಲಿಲ್ಲ. ಆ ಸಮಯದಲ್ಲಿ ಸಂತ್ರಸ್ತೆ ಮೌನ ಮುರಿದು ಆದ ಘಟನೆಯ ಕುರಿತು ತನ್ನ ಚಿಕ್ಕಮ್ಮನಿಗೆ ತಿಳಿಸಿದ್ದಾಳೆ ಎಂದು ಸಂತ್ರಸ್ತೆಯ ಕುಟುಂಬದವರು ತಿಳಿಸಿದ್ದಾರೆ.ಸಂತ್ರಸ್ತರ ಕುಟುಂಬರಿಗೆ ಸಾರ್ವಜನಿಕರಿಂದ ಅವಮಾನವಾಗುವ ಭಯ ಇತ್ತು. ಇದನ್ನು ಸದುಪಯೋಗಪಡಿಸಿಕೊಂಡು ಆರೋಪಿಯು ಅವರಿಗೆ 30 ಸಾವಿರ ರೂಪಾಯಿಯನ್ನು ಕೊಟ್ಟು ಸುಮ್ಮನಿರಲು ತಿಳಿಸಿದ್ದಾನೆ. ಇದರಿಂದ ಅವರು ಪೊಲೀಸರ ಬಳಿ ದೂರು ದಾಖಲಿಸಲಿಲ್ಲ. ಕ್ರಮೇಣ ಅವಳ ಆರೋಗ್ಯ ಹದಗೆಡುತ್ತಾ ಹೋದಂತೆ ಜುಲೈ 10ರಂದು ಸಂತ್ರಸ್ತೆಯ ತಂದೆ, ವಿಶಾಂಬರ್ ವಿರುದ್ಧ ದೂರು ದಾಖಲಿಸಿದ್ದು, ಪೋಕ್ಸೋ ಕಾಯ್ದೆಯಡಿಯಲ್ಲಿ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ಗಾಝಾದಲ್ಲಿ 25 ವರ್ಷಗಳ ಬಳಿಕ ಮೊದಲ ಪೋಲಿಯೊ ಪ್ರಕರಣ ಪತ್ತೆ



**ಗಾಝಾ:** ಇಸ್ರೇಲ್‌ನ ಆಕ್ರಮಣದಿಂದ ಜರ್ಝರಿತವಾಗಿರುವ ಗಾಝಾದಲ್ಲಿ ಕಳೆದ 25 ವರ್ಷಗಳಲ್ಲೇ ಮೊದಲ ಬಾರಿಗೆ ಪೋಲಿಯೊ ಪ್ರಕರಣ ವರದಿಯಾಗಿದೆ ಎಂದು ಫೆಲೆಸ್ತೀನ್ನ ಆರೋಗ್ಯ ಸಚಿವಾಲಯ ಶುಕ್ರವಾರ ತಿಳಿಸಿದೆ. ಪೋಲಿಯೊ ಹಾವಳಿಯ ಭೀತಿ ಎದುರಿಸುತ್ತಿರುವ 6.40 ಲಕ್ಷಕ್ಕೂ ಅಧಿಕ ಮಕ್ಕಳಿಗೆ ಲಸಿಕೆ ನೀಡುವುದಕ್ಕೆ ಅವಕಾಶ ಮಾಡಿಕೊಡಲು ಯುದ್ಧವನ್ನು ನಿಲ್ಲಿಸುವಂತೆ ವಿಶ್ವಸಂಸ್ಥೆ ವರಿಷ್ಠ ಆಂಟೋನಿಯೊ ಗುಟೆರಸ್ ಅವರು ಇಸ್ರೇಲ್ ಹಾಗೂ ಹಮಾಸ್ಗೆ ಕರೆ ನೀಡಿದ್ದ ಬೆನ್ನಲ್ಲೇ ಈ ಪ್ರಕರಣ ವರದಿಯಾಗಿದೆ.

ಮಧ್ಯ ಗಾಝಾಪಟ್ಟಿಯಲ್ಲಿ 10 ತಿಂಗಳು ವಯಸ್ಸಿನ ಲಸಿಕೀಕರಣಗೊಳ್ಳದ ಶಿಶುವಿನಲ್ಲಿ ಪೋಲಿಯೊ ಸೋಂಕು ಪತ್ತೆಯಾಗಿದೆ ಎಂದು ರಮಲ್ಲಾದ ಆರೋಗ್ಯ ಸಚಿವಾಲಯದ ಹೇಳಿಕೆಯನ್ನು ಉಲ್ಲೇಖಿಸಿ 'ದಿ ಗಾರ್ಡಿಯನ್' ಸುದ್ದಿಸಂಸ್ಥೆ ವೆಬ್ಸೈಟ್ ವರದಿ ಮಾಡಿದೆ.

ಗಾಝಾದಲ್ಲಿ ಎರಡು ಸುತ್ತುಗಳ ಲಸಿಕೆ ಅಭಿಯಾನವನ್ನು ನಡೆಸುವುದಕ್ಕೆ ಆಸ್ಪದ ಮಾಡಿಕೊಡಲು 7 ದಿನಗಳ ಕಾಲ ಮಾನವೀಯ ಉದ್ದೇಕ್ಕಾಗಿ ಕದನವನ್ನು ನಿಲುಗಡೆಗೊಳಿಸುವಂತೆ ವಿಶ್ವ ಆರೋಗ್ಯ ಸಂಸ್ಥೆ (ಡಬ್ಲ್ಯು ಎಚ್‌ಒ) ಹಾಗೂ ಯುನಿಸೆಫ್ ಕರೆ ನೀಡಿದೆ.

ಕಳೆದ 25 ವರ್ಷಗಳಿಂದ ಒಂದೇ ಒಂದು ಪೋಲಿಯೊ ಪ್ರಕರಣ ದಾಖಲಾಗಿರಲಿಲ್ಲ. ಆದರೆ ಜೂನ್ ತಿಂಗಳಲ್ಲಿ ಗಾಝಾ ಪ್ರದೇಶದ ತ್ಯಾಜ್ಯ ನೀರಿನಲ್ಲಿ ಸಂಗ್ರಹಿಸಲ್ಪಟ್ಟ ಮಾದರಿಗಳಲ್ಲಿ ಟೈಪ್ 2 ಪೋಲಿಯೊ ವೈರಸ್ ಪತ್ತೆಯಾಗಿದೆಯೆಂದು ದಿ ಗಾರ್ಡಿಯನ್ ವರದಿ ಮಾಡಿದೆ.

ಗಾಝಾ ಪಟ್ಟಿಯಾದ್ಯಂತ ಆಗಸ್ಟ್ ತಿಂಗಳ ಕೊನೆಯಲ್ಲಿ ಹಾಗೂ ಸೆಪ್ಟೆಂಬರ್ ತಿಂಗಳಿನಲ್ಲಿ ಟೈಪ್2 ಪೋಲಿಯೊ ನಿರೋಧಕ ಲಸಿಕೀಕರಣಕ್ಕೆ ಎರಡು ಸುತ್ತುಗಳನ್ನು ಆರಂಬಿಸುವ ಯೋಜನೆಯನ್ನು ಡಬ್ಲ್ಯುಎಚ್‌ಒ ಹಾಗೂ ಯುನಿಸೆಫ್ ಹೊಂದಿದೆ.

## ಅಹಿಂದರ ಪರ ಎನ್ನುವ ಸಿದ್ದರಾಮಯ್ಯ ದಲಿತರ ಭೂಮಿ ಕಬಳಿಸಿದ್ದಾರೆ: ನಡ್ಡಾ



**ದೆಹಲಿ:** ರಾಜ್ಯದಲ್ಲಿ ಮೂಡ ಪ್ರಕರಣಕ್ಕೆ ಸಂಬಂಧಪಟ್ಟಂತೆ ರಾಜ್ಯಪಾಲರು ಮುಖ್ಯಮಂತ್ರಿಗಳ ವಿರುದ್ಧ ಪ್ರಾಸಿಕ್ಯೂಷನ್ ಗೆ ಅನುಮತಿ ನೀಡಿರುವ ವಿಚಾರವಾಗಿ ಬಿಜೆಪಿಯ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ ನಡ್ಡಾ ಪ್ರತಿಕ್ರಿಯಿಸಿದ್ದಾರೆ.

ಒಂದೆಡೆ ಕಾಂಗ್ರೆಸ್ ಪಕ್ಷ, ತಾವು ಹಿಂದುಳಿದ-ಅಲ್ಪಸಂಖ್ಯಾತರ-ದಲಿತರ ರಕ್ಷಕರು ಎಂದು ಬಡಾಯಿ ಕೊಚ್ಚಿಕೊಳ್ಳುತ್ತಿದ್ದರೆ, ಇತ್ತ ಅದೇ ಪಕ್ಷದ ಮುಖ್ಯಮಂತ್ರಿ ಒಬ್ಬರು ದಲಿತರಿಗೆ ಸೇರಿದ ಕುಟುಂಬದ ಜಾಗವನ್ನು ಲಪಟಾಯಿಸಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ವಿರುದ್ಧ ಕಿಡಿಕಾರಿದ್ದಾರೆ.

ಈ ಬಗ್ಗೆ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಜೆ.ಪಿ ನಡ್ಡಾ ನ್ಯಾಷನಲ್ ಹೆರಾಲ್ಡ್ ಪ್ರಕರಣದಿಂದ - ಮೂಡ ಪ್ರಕರಣದವರೆಗೆ ಕಾಂಗ್ರೆಸ್ ತನ್ನ ಭ್ರಷ್ಟಾಚಾರದ ಪರಂಪರೆಯನ್ನು ಮುಂದುವರೆಸಿದೆ ಎಂದು ಹರಿಹಾಯ್ದಿದ್ದಾರೆ.

ರಾಜ್ಯಪಾಲರು ಪ್ರಸಿಕ್ಯೂಷನ್ ಗೆ ಅನುಮತಿ ನೀಡಿರುವುದು ಕಾನೂನುಬಾಹಿರ ಎಂದು ಬೊಬ್ಬೆ ಹೊಡೆಯುವ ಬದಲು,ಕಾಂಗ್ರೆಸ್ ನಾಯಕರು ತಮ್ಮ ವೈಯಕ್ತಿಕ ಲಾಭಗಳಿಗೆ ರಾಜ್ಯದ ಜನರ ಹಿತಾಸಕ್ತಿಯನ್ನು ಹೇಗೆ ಬಲಿ ಕೊಟ್ಟಿದ್ದಾರೆ ಎಂಬುದನ್ನು ಮನವರಿಕೆ ಮಾಡಿಕೊಳ್ಳಬೇಕಿದೆ ಎಂದು ರಾಜ್ಯ ಕಾಂಗ್ರೆಸ್ ನಾಯಕರ ವಿರುದ್ಧ ನಡ್ಡಾ ಕಿಡಿಕಾರಿದ್ದಾರೆ.

## 2 ತಿಂಗಳ ಹಿಂದಷ್ಟೇ 6ನೇ ಮದುವೆಯಾಗಿದ್ದ 91 ವರ್ಷದ ಬಿಲಿಯನೇರ್ ನಿಧನ

**ಆಸ್ಟ್ರಿಯಾ:** ಖ್ಯಾತ ಬಿಲಿಯನೇರ್ ಉದ್ಯಮಿ ರಿಚರ್ಡ್ ಲುಗ್ನರ್ (91) ಸೋಮವಾರ ವಿಯೆನ್ನಾದಲ್ಲಿನ ತನ್ನ ನಿವಾಸದಲ್ಲಿ ನಿಧನರಾಗಿರುವುದಾಗಿ ಎಂದು ಆಸ್ಟ್ರೀಯಾದ ಮಾಧ್ಯಮಗಳು ವರದಿ ಮಾಡಿವೆ. 2 ತಿಂಗಳ ಹಿಂದಷ್ಟೇ 45 ವರ್ಷದ ಮಹಿಳೆಯೊಂದಿಗೆ ಆರನೇ ಮದುವೆಯಾಗಿದ್ದ ರಿಚರ್ಡ್ ಹಲವಾರು ಆರೋಗ್ಯ ಸಮಸ್ಯೆಗಳೊಂದಿಗೆ ನರಳುತ್ತಿದ್ದರು ಮತ್ತು ಇತ್ತೀಚಿಗಷ್ಟೇ ಹೃದಯ ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದರು. ಇದೀಗ ನಿಧನರಾಗಿದ್ದಾರೆ. ಹೆಣ್ಣಿನ ಮೇಲೆ ಅತಿಯಾದ ಮೋಹ ಹೊಂದಿದ್ದ ರಿಚರ್ಡ್ ಈಗಾಗಲೇ 6 ಮದುವೆಯಾಗಿದ್ದರು. ಇದಲ್ಲದೇ ಖ್ಯಾತ ಮಾಡೆಲ್ ಹಾಗೂ ಉದ್ಯಮಿಯಾಗಿರುವ ಕಿಮ್ ಕಾರ್ಡಾಶಿಯಾನ್ ಜೊತೆ ಡೇಟಿಂಗ್‌ಗಾಗಿ 5 ಲಕ್ಷ ಡಾಲರ್ ಅಂದರೆ 4 ಕೋಟಿಗೂ ಅಧಿಕ ಹಣ ನೀಡಿ ವಿಶ್ವದಾದ್ಯಂತ ಸುದ್ದಿಯಾಗಿದ್ದರು. ಎರಡು ತಿಂಗಳ ಹಿಂದಷ್ಟೇ ಜೂನ್ 1 ರಂದು ತನ್ನ 91 ನೇ ವಯಸ್ಸಿನಲ್ಲಿ ರಿಚರ್ಡ್ ತನ್ನ ಬಹುಕಾಲದ ಗೆಳತಿಯೊಂದಿಗೆ ಅದ್ದೂರಿಯಾಗಿ ವಿವಾಹವಾಗಿದ್ದರು. ತನ್ನಗಿಂತ 50 ವರ್ಷ ಚಿಕ್ಕವಳಾದ ಸಿಮೊನೆ ರೈಲ್ಯಾಂಡರ್ ಎಂಬಾಕೆಯನ್ನು ಮದುವೆಯಾಗಿ ಸಾಕಷ್ಟು ಚರ್ಚೆಗೆ ಒಳಗಾಗಿದ್ದ ರಿಚರ್ಡ್ ಇಹಲೋಕ ತ್ಯಜಿಸಿದ್ದಾರೆ.



## ಮೋದಿ ಸರ್ಕಾರದಿಂದ ರಾಜಕೀಯ, ವೈಯಕ್ತಿಕ ಸೇಡು: ಸುರ್ಜೇವಾಲ

**ನವದೆಹಲಿ:** ಮೋದಿ ಸರ್ಕಾರ ರಾಜಕೀಯ ಮತ್ತು ವೈಯಕ್ತಿಕ ಸೇಡು ತೀರಿಸಿಕೊಳ್ಳುತ್ತಿದೆ. ರಾಜ್ಯಪಾಲರು ಬಿಜೆಪಿ ಕೈಗೊಂಬೆಯಾಗಿದ್ದಾರೆ ಎಂದು ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸುರ್ಜೇವಾಲ ಎಕ್ಸ್‌ನಲ್ಲಿ ಬಿಜೆಪಿ ವಿರುದ್ಧ ಕಿಡಿಕಾರಿದ್ದಾರೆ.ಸಿಎಂ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ ವಿಚಾರವಾಗಿ ಅವರು ಪ್ರತಿಕ್ರಿಯಿಸಿದ್ದಾರೆ. ಕಾಂಗ್ರೆಸ್‌ನ ಐದು ಖಾತರಿಗಳನ್ನು ರದ್ದುಗೊಳಿಸುವ ಸಲುವಾಗಿ ಬಿಜೆಪಿಯಿಂದ ಕರ್ನಾಟಕದ ಜನರ ಮೇಲೆ ದಾಳಿ ಮಾಡುತ್ತಿದೆ. ಬಡವರು, ಹಿಂದುಳಿದವರು, ಎಸ್‌ಸಿ, ಎಸ್‌ಟಿ ಮತ್ತು ಹಿಂದುಳಿದ ವರ್ಗಗಳ ವಿರುದ್ಧ ಬಿಜೆಪಿ ಮತ್ತು ಮೋದಿ ಸರ್ಕಾರದಿಂದ ಷಡ್ಯಂತ್ರ ನಡೆದಿದೆ ಎಂದು ಆರೋಪಿಸಿದ್ದಾರೆ.

ಸಿಎಂ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರಿಂದ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ವಿಚಾರಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಹೈಕಮಾಂಡ್ ಸಿಎಂ ಬೆಂಬಲಕ್ಕೆ ನಿಂತಿದೆ.

ಸಿದ್ದರಾಮಯ್ಯಗೆ ಕಾಂಗ್ರೆಸ್ ನಾಯಕರಾದ ಸುರ್ಜೇವಾಲ ಹಾಗೂ ಕೆ.ಸಿ ವೇಣುಗೋಪಾಲ್ ಕರೆ ಮಾಡಿ ಅಭಯ ನೀಡಿದ್ದಾರೆ. ನೀವು ಧೈರ್ಯಗೆಡುವ ಅಗತ್ಯವಿಲ್ಲ. ಹೈಕಮಾಂಡ್ ನಿಮ್ಮೊಂದಿಗೆ ಇರಲಿದೆ. ಇಡೀ ಪಕ್ಷ ನಿಮ್ಮೊಂದಿಗೆ ನಿಲ್ಲಲಿದೆ. ಇಡೀ ಕ್ಯಾಬಿನೆಟ್ ಶಾಸಕರೆಲ್ಲ ನಿಮ್ಮ ಪರ ನಿಲ್ಲಲಿದ್ದಾರೆ. ಧೈರ್ಯದಿಂದ ಕಾನೂನು ಹೋರಾಟ ನಡೆಸಿ ಎಂದು ಸಿಎಂಗೆ ಧೈರ್ಯ ತುಂಬಿದ್ದಾರೆ.

## ಉದಯ್‌ಪುರದಲ್ಲಿ ಸಹಪಾಠಿಗೆ ಚಾಕು ಇರಿತ, ಅಕ್ರಮವಾಗಿ ನಿರ್ಮಿಸಿದ್ದ ಆರೋಪಿ ಮನೆ ಧ್ವಂಸ



**ಜೈಪುರ:** ಉದಯ್‌ಪುರದಲ್ಲಿ ಸಹಪಾಠಿಗೆ ಚಾಕು ಇರಿದ ಪ್ರಕರಣದಲ್ಲಿ ಅಕ್ರಮವಾಗಿ ನಿರ್ಮಿಸಿದ್ದ ಆರೋಪಿಯ ಮನೆಯನ್ನು ಅಧಿಕಾರಿಗಳು ಶನಿವಾರ ಬುಲ್ಡೋಜರ್ ನಿಂದ ಧ್ವಂಸ ಮಾಡಿದ್ದಾರೆ.

ಆರೋಪಿ ಹಾಗೂ ಆತನ ತಂದೆ ನೆಲೆಸಿದ್ದ ಮನೆ ಅಕ್ರಮವಾಗಿತ್ತು ಎಂದು ಉದಯ್‌ಪುರ ಪೊಲೀಸ್ ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ. ಮನೆ ಕೆಡವುವ ಮೊದಲು ಆ ಮನೆಯಲ್ಲಿದ್ದ ಸರಕು ಸಾಮಾನುಗಳನ್ನು ತೆರವುಗೊಳಿಸಲು ಅಧಿಕಾರಿಗಳು ಆರೋಪಿ ಹಾಗೂ ಕುಟುಂಬಸ್ಥರಿಗೆ ಅವಕಾಶ ನೀಡಿದ್ದರು.

ಕಟ್ಟಡ ಧ್ವಂಸಗೊಳಿಸುವ ವೇಳೆಯಲ್ಲಿ ಯಾವುದೇ ತೊಂದರೆ ಆಗಬಾರದು ಎಂದು ಪೊಲೀಸ್ ಅಧಿಕಾರಿಗಳನ್ನು ನೇಮಕ ಮಾಡಲಾಗಿತ್ತು. ಈ ನಡುವೆ ಸ್ಥಳೀಯರಿಗೆ ಹಾಗೂ ಪೊಲೀಸ್ ಅಧಿಕಾರಿಗಳ ಮಧ್ಯೆ ಮಾತಿನ ಚಕಮಕಿ ನಡೆಯಿತು.

ಉದಯಪುರ ಜಿಲ್ಲೆಯಲ್ಲಿ ಶುಕ್ರವಾರ 10ನೇ ತರಗತಿ ವಿದ್ಯಾರ್ಥಿ ಶಾಲೆಯಲ್ಲಿ ತನ್ನ ಸಹಪಾಠಿಗೆ ಚಾಕು ಇರಿದಿದ್ದು, ಮಧುಬನ್ ಪ್ರದೇಶದಲ್ಲಿ ಕೋಮುಗಲಭೆಗೆ ಕಾರಣವಾಯಿತು. ಸದ್ಯ ಆರೋಪಿಯನ್ನು ಪೊಲೀಸ್ ಅಧಿಕಾರಿಗಳು ವಶಕ್ಕೆ ಪಡೆದು ತನಿಖೆ ಮುಂದುವರಿಸುತ್ತಿದ್ದಾರೆ.

ಈ ಘಟನೆ ಸಂಭವಿಸಿದ ನಂತರ ಮಧುಬನ್ ಪ್ರದೇಶದ ಹಲವಾರು ಹಿಂದೂ ಸಂಘಟನಾ ಸದಸ್ಯರು ಸೇರಿ ಪಕ್ಕದ ಗ್ಯಾರೇಜಿನಲ್ಲಿದ್ದ ಮೂರಕ್ಕೂ ಹೆಚ್ಚು ಕಾರುಗಳಿಗೆ ಬೆಂಕಿ ಹಚ್ಚಿ ಕಲ್ಲು ತೂರಾಟ ಮಾಡಿದ್ದಾರೆ.

ಕೋಮುಗಲಭೆ ಸಂಭವಿಸುವ ಸಾಧ್ಯತೆ ಇರುವ ಕಾರಣಕ್ಕೆ ಜಿಲ್ಲಾಡಳಿತ ಸೆಕ್ಷನ್ 144 ಜಾರಿಗೊಳಿಸಿದ್ದಾರೆ. ನಗರದಲ್ಲಿ ಯಾವುದೇ ದೊಡ್ಡ ಕಾರ್ಯಕ್ರಮ ನಡೆಸದಂತೆ ನಿರ್ಬಂಧಿಸಲಾಗಿದೆ.

## 6 ತಿಂಗಳ ಬಳಿಕ ಕೋಮಾದಿಂದ ಎದ್ದ ಯುವಕ; ಆಸ್ಪತ್ರೆ ಬಿಲ್ ನೋಡಿ ಗಾಬರಿ

**ನ್ಯೂಯಾರ್ಕ್:** ಲಾಸ್ ವೇಗಾಸ್‌ನ ಜಾನ್ ಪೆನ್ನಿಂಗ್‌ಟನ್ ಎಂಬ ಹೆಸರಿನ ವ್ಯಕ್ತಿಯೊಬ್ಬರು ತಮ್ಮ 30ನೇ ವಯಸ್ಸಿನಲ್ಲಿ ಕಾರು ಅಪಘಾತದಲ್ಲಿ ತೀವ್ರವಾಗಿ ಗಾಯಗೊಂಡು ಕೋಮಾಗೆ ಜಾರಿದ್ದರು. ಅದಾಗಿ 6 ತಿಂಗಳ ಬಳಿಕ ಅವರು ಕೋಮಾದಿಂದ ಎಚ್ಚರವಾಗಿದ್ದಾರೆ. ಕೋಮಾದಿಂದ ಎಚ್ಚರವಾದಾಗಲೂ ಜಾನ್‌ನ ತೊಂದರೆಗಳು ಮುಗಿಯಲಿಲ್ಲ. ರೆಡ್ಡಿಟ್‌ನಲ್ಲಿ ಈ ಬಗ್ಗೆ ಹಂಚಿಕೊಂಡಿರುವ ಅವರು, 6 ತಿಂಗಳು ಆಸ್ಪತ್ರೆಯಲ್ಲಿ ಕೋಮಾದಲ್ಲಿದ್ದದ್ದಕ್ಕೆ 2.5 ಮಿಲಿಯನ್ ಡಾಲರ್ (ರೂ. 2,09,67,775) ಬಿಲ್ ನೀಡಿದ್ದರು. ಅದನ್ನು ನೋಡಿ ನನಗೆ ಶಾಕ್ ಆಯಿತು ಎಂದಿದ್ದಾರೆ. ನಾನು ಕಣ್ಣು ಬಿಟ್ಟಾಗ ನನ್ನನ್ನು ಹಾಸಿಗೆಗೆ ಕಟ್ಟಿಹಾಕಿದ್ದರು. ಬೆಳಗ್ಗೆ ನಿದ್ರೆಯಿಂದ ಎದ್ದು ಆಫೀಸಿಗೆ ಹೊರಡಲು ತಡವಾಯಿತು ಎಂಬ ಅನುಭವ ನನ್ನಲ್ಲಿತ್ತು. ಆ 6 ತಿಂಗಳ ಕಾಲ ನಾನು ಪ್ರಜ್ಞೆ ಕಳೆದುಕೊಂಡಿದ್ದ ಎಂಬುದೂ ನನಗೆ ತಿಳಿದಿರಲಿಲ್ಲ, ನನ್ನ ಪಕ್ಕದಲ್ಲಿದ್ದ ನರ್ಸ್ ಬಳಿ ನಾನು ಬಾತ್‌ರೂಂ ಬಳಸಬಹುದಾ ಎಂದು ಕೇಳಿದೆ. ಇದ್ದಕ್ಕಿದ್ದಂತೆ ನಾನು ಎದ್ದು ಕುಳಿತು ಮಾತನಾಡಿದ್ದನ್ನು ನೋಡಿ ಆ ನರ್ಸ್ ಕಣ್ಣೀರು ಹಾಕುತ್ತಾ ಹೊರಗೆ ಓಡಿಹೋದಳು ಎಂದು ಜಾನ್ ಬರೆದುಕೊಂಡಿದ್ದಾರೆ. ಬಳಿಕ ಆ ನರ್ಸ್ ಕೆಲವು ನಿಮಿಷಗಳ ನಂತರ ನನ್ನಲ್ಲಿ ಕ್ಷಮೆ ಕೇಳಲು ಹಿಂತಿರುಗಿದಳು. ಕಳೆದ 6 ತಿಂಗಳಿನಿಂದ ನಾನು ತೀವ್ರವಾದ ಆಘಾತಕಾರಿ ಮಿದುಳಿನ ಗಾಯದಿಂದಾಗಿ ಕೋಮಾದಲ್ಲಿದ್ದ ವಿಚಾರವನ್ನು ಆಕೆ ನನಗೆ ತಿಳಿಸಿದರು ಎಂದಿರುವ ಜಾನ್ ಅವರು ತಮ್ಮ ಚಿಕಿತ್ಸೆಯ ವೆಚ್ಚವನ್ನು ಸರಿದೂಗಿಸಲು ಸಹಾಯ ಮಾಡಲು GoFundMe ಪುಟವನ್ನು ರಚಿಸಿದ್ದಾಗಿ ತಿಳಿಸಿದ್ದಾರೆ. ಬಳಿಕ ಜಾನ್‌ನ ವಕೀಲರು ಅವನಿಗೆ ಸಹಾಯ ಮಾಡಲು ತಕ್ಷಣವೇ ಮುಂದಾದರು. ಎಲ್ಲ ವೈದ್ಯಕೀಯ ವೆಚ್ಚವನ್ನು ಭರಿಸಿದಾಗ ಜಾನ್ ನೆಮ್ಮದಿಯ ನಿಟ್ಟುಸಿರು ಬಿಡಲು ಸಾಧ್ಯವಾಯಿತು.

## ಸುಡಾನ್ ಅರೆಸೇನಾ ಪಡೆಯಿಂದ ಸಿನ್ನಾರ್ ಹಳ್ಳಿಯ ಮೇಲೆ ದಾಳಿ: 80 ಜನರ ಬಲಿ



**ಸುಡಾನ್:** ಮಧ್ಯ ಸುಡಾನ್‌ನ ಸಿನ್ನಾರ್ ರಾಜ್ಯದ ಹಳ್ಳಿಯೊಂದರ ಮೇಲೆ ಅರೆಸೇನಾ ಪಡೆಗಳು ನಡೆಸಿದ ದಾಳಿಯಲ್ಲಿ ಕನಿಷ್ಠ 80 ಜನರು ಸಾವನ್ನಪ್ಪಿದ್ದಾರೆ ಎಂದು ವರದಿಯಾಗಿದೆ.

ಐದು ದಿನಗಳ ಮುತ್ತಿಗೆಯ ನಂತರ ಸಿನ್ನಾರ್ ರಾಜ್ಯದ ಜಲ್ಕ್ನಿ ಗ್ರಾಮದ ಮೇಲೆ ಆರ್‌ಎಸ್‌ಎಫ್ ದಾಳಿ ನಡೆಸಿದೆ. ಗ್ರಾಮದಿಂದ ಯುವತಿಯರನ್ನು ಅಪಹರಿಸಲು ಆರ್‌ಎಸ್‌ಎಫ್ ಪ್ರಯತ್ನಿಸಿತು. ಇದಕ್ಕೆ ನಿವಾಸಿಗಳು ವಿರೋಧಿಸಿದಾಗ ಅವರ ಮೇಲೆ ಈ ದಾಳಿ ನಡೆಸಲಾಯಿತು. ಪರಿಣಾಮ ಕನಿಷ್ಠ 80 ಜನ ಸಾವಿಗೀಡಾಗಿದ್ದಾರೆ ಎಂದು ಸಿನ್ನಾರ್ ಯೂತ್ ಗ್ಯಾದರಿಂಗ್ ತಿಳಿಸಿದೆ. ಘಟನೆಯ ಬಗ್ಗೆ ಆರ್‌ಎಸ್‌ಎಫ್ ಇನ್ನೂ ಯಾವುದೇ ಪ್ರತಿಕ್ರಿಯೆ ನೀಡಿಲ್ಲ.

ಜೂನ್ನಿಂದ, ರಾಜ್ಯದ ರಾಜಧಾನಿ ಸಿಂಗಾ ಸೇರಿದಂತೆ ಸಿನ್ನಾರ್ ರಾಜ್ಯದ ಹೆಚ್ಚಿನ ಭಾಗಗಳನ್ನು ಆರ್‌ಎಸ್‌ಎಫ್ ನಿಯಂತ್ರಣದಲ್ಲಿದೆ. ಇನ್ನೂ ಸುಡಾನ್ನ ಸಶಸ್ತ್ರ ಪಡೆಗಳು (ಎಸ್ ಎಎಫ್) ಪೂರ್ವ ಸಿನ್ನಾರ್ ಪ್ರದೇಶವನ್ನು ನಿಯಂತ್ರಿಸುತ್ತದೆ. ಅಮೆರಿಕ, ಸೌದಿ ಅರೆಬಿಯಾ ಮತ್ತು ಸ್ವಿಸ್ ಮಧ್ಯಸ್ಥಿಕೆಯಲ್ಲಿ ಸ್ವಿಟ್ಜರ್ಲೆಂಡ್ನಲ್ಲಿ ಬುಧವಾರ ಕದನ ವಿರಾಮ ಮಾತುಕತೆ ಪ್ರಾರಂಭವಾಯಿತು. ಈ ಸಭೆಗೆ ಸುಡಾನ್ ಸೈನ್ಯವು ಭಾಗವಹಿಸಲು ನಿರಾಕರಿಸಿತು. ಏ.15, 2023 ರಿಂದ ಸುಡಾನ್ನಲ್ಲಿ ಸೇನೆ ಹಾಗೂ ಆರೆಸೇನಾ ಪಡೆಗಳ ನಡುವೆ ಸಂಘರ್ಷ ನಡೆಯುತ್ತಿದ್ದು ಘಟನೆಯಲ್ಲಿ ಕನಿಷ್ಠ 16,650 ಜನರು ಮೃತಪಟ್ಟಿದ್ದಾರೆ.

## ಹಿಂಸಾಚಾರಕ್ಕೆ 650 ಮಂದಿ ಸಾವು



**ಢಾಕಾ:** ಜುಲೈ 16 ಮತ್ತು ಆಗಸ್ಟ್ 11 ರ ನಡುವೆ ಬಾಂಗ್ಲಾದೇಶದಲ್ಲಿ ಇತ್ತೀಚೆಗೆ ನಡೆದ ಹಿಂಸಾಚಾರದಲ್ಲಿ ಸುಮಾರು 650 ಜನರು ಸಾವನ್ನಪ್ಪಿದ್ದಾರೆ ಎಂದು ಯುಎನ್ ಮಾನವ ಹಕ್ಕುಗಳ ಕಚೇರಿ ಪ್ರಾಥಮಿಕ ವರದಿಯಲ್ಲಿ ತಿಳಿಸಿದೆ.

ಕಾನೂನುಬಾಹಿರ ಹತ್ಯೆಗಳು, ಅನಿಯಂತ್ರಿತ ಬಂಧನಗಳು ಮತ್ತು ಬಂಧನಗಳ ವರದಿಗಳ ಬಗ್ಗೆ ಸಮಗ್ರ, ನಿಷ್ಪಕ್ಷಪಾತ ಮತ್ತು ಪಾರದರ್ಶಕ ತನಿಖೆಯನ್ನು ಸೂಚಿಸಿದೆ.

ಬಾಂಗ್ಲಾದೇಶದಲ್ಲಿ ಇತ್ತೀಚಿನ ಪ್ರತಿಭಟನೆಗಳು ಮತ್ತು ಅಶಾಂತಿಯ ಪ್ರಾಥಮಿಕ ವಿಶ್ಲೇಷಣೆ ಎಂಬ ಶೀರ್ಷಿಕೆಯ 10 ಪುಟಗಳ ವರದಿಯ ಪ್ರಕಾರ, ಜುಲೈ 16 ಮತ್ತು ಆಗಸ್ಟ್ 4 ರ ನಡುವೆ ಸುಮಾರು 400 ಸಾವುಗಳು ವರದಿಯಾಗಿವೆ ಮತ್ತು ಆಗಸ್ಟ್ 5 ಮತ್ತು 6 ರ ನಡುವಿನ ಪ್ರತಿಭಟನೆಯ ಹೊಸ ಅಲೆಯ ನಂತರ ಸುಮಾರು 250 ಜನರು ಸಾವನ್ನಪ್ಪಿದ್ದಾರೆ ಎಂದು ವರದಿಯಾಗಿದೆ.

ಜುಲೈ 16 ಮತ್ತು ಆಗಸ್ಟ್ 11 ರ ನಡುವೆ, ತಾರತಮ್ಯ ವಿರೋಧಿ ವಿದ್ಯಾರ್ಥಿ ಪ್ರದರ್ಶನಗಳ ನಂತರದ ಹಿಂಸಾಚಾರದ ಅಲೆಯಿಂದಾಗಿ 600 ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ ಎಂದು ಮಾಧ್ಯಮಗಳು ಮತ್ತು ಪ್ರತಿಭಟನಾ ಆಂದೋಲನದಿಂದ ಲಭ್ಯವಿರುವ ಸಾರ್ವಜನಿಕ ವರದಿಗಳು ಹೇಳಿಕೊಂಡಿವೆ. ಆ ಸಮಯದಿಂದ ಪ್ರತೀಕಾರದ ದಾಳಿಗಳಲ್ಲಿ ವರದಿಯಾದ ಹತ್ಯೆಗಳ ಸಂಖ್ಯೆಯನ್ನು ನಿರ್ಧರಿಸಬೇಕಾಗಿದೆ ಎಂದು ಜಿನೀವಾದಲ್ಲಿ ಶುಕ್ರವಾರ ಬಿಡುಗಡೆಯಾದ ವರದಿ ತಿಳಿಸಿದೆ.

## ಪಾಕಿಸ್ತಾನ: ರಸ್ತೆಯಲ್ಲಿ ಹೋಗುತ್ತಿದ್ದ ಯುವತಿಗೆ ಹಾಡಹಗಲೇ ಕಿರುಕುಳ



**ಪಾಕಿಸ್ತಾನ:** ನೆರೆರಾಷ್ಟ್ರ ಪಾಕಿಸ್ತಾನ ತೀವ್ರ ಆರ್ಥಿಕ ಸಂಕಷ್ಟದಿಂದ ಕಂಗೆಟ್ಟು ಹೋಗಿದ್ದು, ಅಲ್ಲಿನ ಜನ ಒಂದೊತ್ತಿನ ಊಟಕ್ಕೂ ಪರದಾಡುವ ಪರಿಸ್ಥಿತಿ ಎದುರಾಗಿದೆ. ಇದರ ಮಧ್ಯೆಯೂ ಮಹಿಳೆಯರು, ಯುವತಿಯರಿಗೆ ಹಾಡಹಗಲೇ ಕಿರುಕುಳ ನೀಡುತ್ತಿರುವ ಘಟನೆ ನಡೆಯುತ್ತಿದ್ದು, ಇದರ ವಿಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ.

ಇತ್ತೀಚೆಗಷ್ಟೇ ನೂರಾರು ಮಂದಿ ಇದ್ದ ಗುಂಪು ಸೋಶಿಯಲ್ ಮೀಡಿಯಾ ಇನ್ಫ್ಲುಯೆನ್ಸರ್ ಆಗಿರುವ ಯುವತಿಗೆ ಲೈಂಗಿಕ ಕಿರುಕುಳ ನೀಡಿದ್ದು, ಅಸಹಾಯಕಳಾಗಿದ್ದ ಆಕೆಯ ವಿಡಿಯೋ ವೈರಲ್ ಆಗಿತ್ತು. ಇದೀಗ ಮತ್ತೊಂದು ಅಂತಹುದೇ ಘಟನೆ ನಡೆದಿದ್ದು ಯುವಕನ ಜೊತೆ ಯುವತಿಯೊಬ್ಬಳು ಹೋಗುತ್ತಿದ್ದಾಗ ಆಕೆಯನ್ನು ಹಿಂಬಾಲಿಸಿ ಕಿರುಕುಳ ನೀಡಲಾಗಿದೆ.

ಪಾಕಿಸ್ತಾನದ ಇಸ್ಲಾಮಾಬಾದ್ ನಲ್ಲಿ ಈ ಘಟನೆ ನಡೆದಿದೆ ಎನ್ನಲಾಗಿದ್ದು ಪ್ಯಾಂಟ್ ಟಿ ಶರ್ಟ್ ಧರಿಸಿದ್ದ ಯುವತಿ, ಯುವಕನ ಜೊತೆ ನಡೆದು ಹೋಗುತ್ತಿರುತ್ತಾಳೆ. ಆಗ ಚಿಕ್ಕವರಿಂದ ಹಿಡಿದು ದೊಡ್ಡವರವರೆಗೆ ಇದ್ದ ಪುರುಷರ ಗುಂಪು ಆಕೆಯನ್ನು ಹಿಂಬಾಲಿಸಿ ಕಿರುಕುಳ ನೀಡಲು ಆರಂಭಿಸಿದೆ. ಆಕೆ ಪ್ರತಿರೋಧ ತೋರಲು ಯತ್ನಿಸಿದ್ದು, ಜೊತೆಗಿದ್ದ ಯುವಕ ಗೆಳತಿಗೆ ಕಿರುಕುಳ ನೀಡದಂತೆ ಬೇಡಿಕೊಂಡರೂ ಕೃತ್ಯ ಮುಂದುವರಿಸಿದ್ದಾರೆ. ಆಘಾತಕಾರಿ ಸಂಗತಿ ಎಂದರೆ ಯುವತಿಗೆ ಕಿರುಕುಳ ನೀಡುತ್ತಿದ್ದ ಗುಂಪಿನಲ್ಲಿ ಇದ್ದ ಯುವಕನೊಬ್ಬ ಈ ಹಿಂದೆ ತೃತೀಯ ಲಿಂಗಿಗೆ ಇದೇ ರೀತಿ ಮಾಡಿದ್ದ ಎನ್ನಲಾಗಿದ್ದು, ಆ ವಿಡಿಯೋವನ್ನು ಸಹ ಶೇರ್ ಮಾಡಲಾಗಿದೆ.

## ಬಾಂಗ್ಲಾದೇಶಿ ಹಿಂದೂ ನಟಿ ರೋಕೆಯಾ ಪ್ರಾಚಿ ಮೇಲೆ ದಾಳಿ!

**ಢಾಕಾ (ಬಾಂಗ್ಲಾದೇಶ):** ಢಾಕಾದಲ್ಲಿ ಬಾಂಗ್ಲಾದೇಶಿ ನಟಿ ರೋಕೆಯಾ ಪ್ರಾಚಿ ಇವರ ಮೇಲೆ ದಾಳಿ ನಡೆಸಲಾಗಿದೆ. ಅವರು ಬಾಂಗ್ಲಾದೇಶದ ರಾಷ್ಟ್ರಪಿತ ಎಂದು ಗುರುತಿಸಲಾಗುವ 'ಬಂಗಬಂಧು' ಇವರ ಢಾಕಾದಲ್ಲಿನ ಐತಿಹಾಸಿಕ ನಿವಾಸಸ್ಥಾನದಲ್ಲಿ ಮೇಣದಬತ್ತಿ ಹಚ್ಚಿ ನಿಷೇಧ ವ್ಯಕ್ತಪಡಿಸುತ್ತಿದ್ದರು.

ವಿದ್ಯಾರ್ಥಿ ಪ್ರತಿಭಟನೆಯಲ್ಲಿ ಸಾವನ್ನಪ್ಪಿರುವ ವಿದ್ಯಾರ್ಥಿಗಳಿಗಾಗಿ ಶ್ರದ್ಧಾಂಜಲಿಯ ಕಾರ್ಯಕ್ರಮ ಆಯೋಜಿಸಿ ಮೌನ ಪ್ರತಿಭಟನೆಯ ಸಮಯದಲ್ಲಿ 30 - 40 ಜನರು ಅಲ್ಲಿಗೆ ಬಂದು ಅಲ್ಲಿ ನೆರೆದಿದ್ದವರ ಮೇಲೆ ದಾಳಿ ನಡೆಸಿದರು. ಈ ಪ್ರತಿಭಟನೆಯ ಆಯೋಜನೆ ಪ್ರಾಚೀ ಅವರು ಸ್ವತಃ ಮಾಡಿದ್ದರು. ಈ ಘಟನೆ ಆಗಸ್ಟ್ 14 ರಂದು ರಾತ್ರಿ ನಡೆದಿದೆ. ಭಾರತದ ಪ್ರಸಾರ ಮಾಧ್ಯಮಗಳಿಗೆ ರಾಷ್ಟ್ರೀಯ ಪ್ರಶಸ್ತಿ ಪಡೆದಿರುವ ರೋಕೆಯಾ ಪ್ರಾಚಿ ಇವರು ಮಾಹಿತಿ ನೀಡುವಾಗ, ದಾಳಿಕೋರರು ನನಗಾಗಿಯೇ ಬಂದಿದ್ದರು. ನನ್ನನ್ನು ಕೊಲ್ಲಲು ಬಂದಿದ್ದರು. ನಾನು ಮೊದಲು ಆವಾಮಿ ಲೀಗ್‌ನ ಸದಸ್ಯೆ ಆಗಿದ್ದೆ. ಆದ್ದರಿಂದ ಅವರು ನನ್ನ ಮೇಲೆ ದಾಳಿ ನಡೆಸಿದ್ದಾರೆ ಎಂದು ಹೇಳಿದರು.



### ಆವಾಮಿ ಲೀಗ್ ಪಕ್ಷದ ಕಾರ್ಯಕರ್ತರ ಮೇಲೆ ಕೂಡ ದಾಳಿ!

**ಆಗಸ್ಟ್ 17 ರಂದು ಬೆಳಿಗ್ಗೆ ಢಾಕಾದಲ್ಲಿನ 32 ಧಾನಮಂಡಿ ಮಾರ್ಗದಲ್ಲಿನ ಆವಾಮಿ ಲೀಗ್ ಕಾರ್ಯಕರ್ತರಿಗೆ ಥಳಿಸಲಾಯಿತು. ಅವರಿಗೆ ಶ್ರದ್ಧಾಂಜಲಿ ನೀಡುವುದಕ್ಕಾಗಿ ಅವರು ಬಂಗಬಂಧು ಶೇಖ ಮುಜಿಬೂರ್ ರಹಮಾನ್ ಇವರ ನಿವಾಸಸ್ಥಳಕ್ಕೆ ಹೋಗುತ್ತಿದ್ದರು. ಈ ಎಲ್ಲಾ ದಾಳಿಗಳ ಹಿಂದೆ ವಿರೋಧ ಪಕ್ಷ ಬಿ.ಎನ್.ಪಿ., ಜಮಾತ್ ಎ ಇಸ್ಲಾಮಿ ಹಾಗೂ ಇತರ ಅನೇಕ ವಿದ್ಯಾರ್ಥಿ ಸಂಘಟನೆಗಳು ಇರುವುದಾಗಿ ಹೇಳಲಾಗುತ್ತಿದೆ.**

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಸೆಟ್ಟೇರಿತು 'ತೀರ್ಥರೂಪ ತಂದೆಯವರಿಗೆ' ಸಿನಿಮಾ ಅರ್ಚನಾ ನಾಯಕಿ



ಹೊಂದಿಸಿ ಬರೆಯಿರಿ ಸಿನಿಮಾ ಮೂಲಕ ಬದುಕು ಬಂದಂತೆ ಸ್ವೀಕರಿಸಿ ಎಂಬ ಸ್ವೀಟ್ ಸಂದೇಶ ಕೊಟ್ಟು ಫ್ಯಾಮಿಲಿ ಪ್ರೇಕ್ಷಕ ಪ್ರಭುವಿನಿಂದ ಚಪ್ಪಾಳೆ ಪಡೆದಿದ್ದ ರಾಮೇನಹಳ್ಳಿ ಜಗನ್ನಾಥ ಈಗ ಮತ್ತೊಂದು ಸಿನಿಮಾ ಕೈಗೆತ್ತಿಕೊಂಡಿದ್ದಾರೆ. ವರಮಹಾಲಕ್ಷ್ಮೀ ಹಬ್ಬದ ದಿನವಾದ ಇಂದು ಬೆಂಗಳೂರಿನ ಬಂಡೆ ಮಹಾಕಾಳಿ ದೇಗುಲದಲ್ಲಿ ಚಿತ್ರ ಸೆಟ್ಟೇರಿದೆ. ನಿರ್ದೇಶಕ ರಾಮೇನಹಳ್ಳಿ ಜಗನ್ನಾಥ ಅವರ ಪುತ್ರಿ ಸಿನಿಮಾಗೆ ಕ್ಲ್ಯಾಪ್ ಮಾಡಿದರೆ, ನವೀನ್ ಶಂಕರ್ ಹಾಗೂ ಅರ್ಚನಾ ಜೋಯಿಸ್ ಕ್ಯಾಮೆರಾಗೆ ಚಾಲನೆ ನೀಡಿದರು. ಜಗನ್ನಾಥ ಅವರ ಹೊಸ ಪ್ರಯತ್ನಕ್ಕೆ ತೀರ್ಥರೂಪ ತಂದೆಯವರಿಗೆ ಎಂಬ ಆಕರ್ಷಕ ಟೈಟಲ್ ಇಡಲಾಗಿದೆ.

ತೆಲುಗಿನಲ್ಲಿ ಗುಪ್ಪೆಡಂತ ಮನಸು ಸೀರಿಯಲ್ ಮೂಲಕ ಕಿರುತೆರೆ ಪ್ರೇಕ್ಷಕರ ಪ್ರೀತಿ ಪಡೆದಿರುವ ನಿಹಾರ್ ಮುಖೇಶ್ ತೀರ್ಥರೂಪ ತಂದೆಯವರಿಗೆ ಸಿನಿಮಾ ಮೂಲಕ ನಾಯಕನಾಗಿ ಕನ್ನಡ ಪ್ರೇಕ್ಷಕರ ಎದುರು ಬರುತ್ತಿದ್ದಾರೆ. ಸದ್ಯ ಮುಖೇಶ್ ಹೀರೋ ಆಗಿ ಬಣ್ಣ ಹಚ್ಚಿರುವ ಗೀತಾ ಶಂಕರಂ ಸಿನಿಮಾ ಬಿಡುಗಡೆ ಹೊಸ್ತಿಲಿನಲ್ಲಿದೆ. ಇದರ ಬೆನ್ನಲ್ಲೇ ನಿಹಾರ್ ಮುಖೇಶ್ ತೀರ್ಥರೂಪ ತಂದೆಯವರಿಗೆ ಚಿತ್ರಕ್ಕೆ ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ. ಕನ್ನಡ ಹಾಗೂ ತೆಲುಗು ಎರಡು ಭಾಷೆಯಲ್ಲಿ ಚಿತ್ರ ಮೂಡಿ ಬರುತ್ತಿದೆ. ತೆಲುಗಿನಲ್ಲಿ ಪ್ರಿಯಮೈನ ನಾನ್ನಕು ಎಂಬ ಶೀರ್ಷಿಕೆ ಇಡಲಾಗಿದೆ.

ಜೈ ಚಾಮುಂಡೇಶ್ವರಿ ಪ್ರೊಡಕ್ಷನ್ಸ್ ನಡಿ ತೀರ್ಥರೂಪ ತಂದೆಯವರಿಗೆ ಸಿನಿಮಾ ನಿರ್ಮಾಣವಾಗುತ್ತಿದ್ದು, ರಾಮೇನಹಳ್ಳಿ ಜಗನ್ನಾಥ ಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. ಹೊಂದಿಸಿ ಬರೆಯಿರಿ ಚಿತ್ರ ನಿರ್ಮಾಣ ಮಾಡಿದ್ದ ಸಂಡೇ ಸಿನಿಮಾಸ್ ಈ ಸಿನಿಮಾವನ್ನು ಪ್ರೆಸೆಂಟ್ ಮಾಡುತ್ತಿದೆ. ಬ್ಲಿಂಕ್ ಸಿನಿಮಾ ಖ್ಯಾತಿಯ ರವಿಚಂದ್ರ ಎ.ಜೆ ತೀರ್ಥರೂಪ ತಂದೆಯವರಿಗೆ ಚಿತ್ರಕ್ಕೆ ಎಕ್ಸಿಕ್ಯೂಟಿವ್ ಪ್ರೊಡ್ಯೂಸರ್ ಆಗಿ ಸಾಥ್ ಕೊಟ್ಟಿದ್ದಾರೆ. ಕೌಟುಂಬಿಕ ಹಿನ್ನೆಲೆ ಕಥೆಯುಳ್ಳ ಸಿನಿಮಾಗೆ ದೀಪಕ್ ಯರಗೇರಾ ಛಾಯಾಗ್ರಹಣ, ಪ್ರಶಾಂತ್ ರಾಜಪ್ಪ ಸಂಭಾಷಣೆ ಇರಲಿದೆ. ಸದ್ಯ ಮುಹೂರ್ತ ನೆರವೇರಿದ್ದು, ಶೀಘ್ರದಲ್ಲೇ ಚಿತ್ರತಂಡ ಶೂಟಿಂಗ್ ಅಖಾಡಕ್ಕೆ ಎಂಟ್ರಿ ಕೊಡಲಿದೆ.

# ಪ್ರೇಮ್ ಪುತ್ರಿ 2ನೇ ಸಿನಿಮಾ
## ಸ್ಟೈಲ್ ಗುರು ರಕ್ಷಿತ್‌ಗೆ ಅಮೃತಾ ನಾಯಕಿ



ಟಗರು ಪಲ್ಯ ಸಿನಿಮಾ ಮೂಲಕ ಕನ್ನಡ ಚಿತ್ರರಂಗಕ್ಕೆ ಬಲಗಾಲಿಟ್ಟಿದ್ದ ಲವ್ಲಿ ಸ್ಟಾರ್ ಪ್ರೇಮ್ ಮುದ್ದಿನ ಗೊಂಬೆ ಅಮೃತಾ ಪ್ರೇಮ್. ಚೊಚ್ಚಲ ಚಿತ್ರದಲ್ಲಿಯೇ ಭರವಸೆ ಮೂಡಿಸಿದ್ದ ಈ ಸೂರ್ಯಕಾಂತಿ ಮುಂದಿನ ಸಿನಿಮಾ ಯಾವುದು ಎಂದು ಸಿನಿಮಾ ಪ್ರೇಮಿಗಳು ಎದುರು ನೋಡುತ್ತಿದ್ದರು. ಈಗ ಅದಕ್ಕೆ ಉತ್ತರ ಸಿಕ್ಕಿದೆ. ಅಮೃತಾ ಮತ್ತೊಂದು ಹೊಸ ಸಿನಿಮಾ ಒಪ್ಪಿಕೊಂಡಿದ್ದಾರೆ.

ಅಳೆದು ತೂಗಿ ಕಥೆ ಆಯ್ಕೆ ಮಾಡಿಕೊಂಡು ನಿರ್ದೇಶಕ ಮಹೇಶ್ ಬಾಬು ಚಿತ್ರದಲ್ಲಿ ನಾಯಕಿಯಾಗಿ ನಟಿಸಲು ಸಮ್ಮತಿ ಸೂಚಿಸಿದ್ದಾರೆ. ವರಮಹಾಲಕ್ಷ್ಮೀ ಹಬ್ಬದ ಸುಸಂದರ್ಭದಲ್ಲಿ ಚಿತ್ರತಂಡ ಅಮೃತಾ ಪ್ರೇಮ್ ಅವರನ್ನು ಸ್ವಾಗತಿಸಿದೆ. ಸ್ಟೈಲ್ ಗುರು ರಕ್ಷಿತ್ ಗೆ ಜೋಡಿಯಾಗಿ ಅಮೃತಾ ಸಾಥ್ ಕೊಡುತ್ತಿದ್ದಾರೆ. ನಿರ್ದೇಶಕ ಮಹೇಶ್ ಬಾಬು ಸಾರಥ್ಯದಲ್ಲಿ ನಡೆದ 15 ದಿನಗಳ ವರ್ಕ್ ಶಾಪ್ ನಲ್ಲಿ ನಾಯಕ ರಕ್ಷಿತ್, ನಾಯಕಿ ಅಮೃತಾ ಪ್ರೇಮ್ ಸೇರಿದಂತೆ ಇಡೀ ತಂಡ ಭಾಗಿಯಾಗಿದೆ. ಇನ್ನೂ ಅಮೃತಾ ಪ್ರೇಮ್ ತಮ್ಮ ಪಾತ್ರಕ್ಕೆ ಬೇಕಾದ ಕಸರತ್ತಿನೊಂದಿಗೆ ಶೀಘ್ರದಲ್ಲಿಯೇ ಚಿತ್ರತಂಡ ಸೇರಿಕೊಳ್ಳಲಿದ್ದಾರೆ.

ಅಮೃತಾ ಪ್ರೇಮ್ ನಾಯಕಿಯಾಗಿ ಅಭಿನಯಿಸಿದ್ದ ಟಗರು ಪಲ್ಯ ಸಿನಿಮಾ ವಿಶೇಷವಾಗಿಯೇ ಇತ್ತು. ಹಳ್ಳಿ ಹುಡುಗಿಯಾಗಿಯೆ ಅಮೃತಾ ಪ್ರೇಮ್ ತುಂಬಾನೆ ಹೆಚ್ಚು ಗಮನ ಸೆಳೆದಿದ್ದರು. ಮೊದಲ ಚಿತ್ರದಲ್ಲಿಯೇ ದೊಡ್ಡ ಕಲಾವಿದರ ಮುಂದೆ ಅಭಿನಯಿಸಿ ಸೈ ಎನಿಸಿಕೊಂಡಿದ್ದರು. ಚಿತ್ರದ ಮೂಲಕವೇ ಸೌತ್ ಫಿಲ್ಮಂ ಫೇರ್ ಪ್ರಶಸ್ತಿಯನ್ನ ಪಡೆದುಕೊಂಡಿದ್ದಾರೆ. ದಕ್ಷಿಣದ ವಿವಿಧ ಭಾಷೆಯ ಸಿನಿಮಾಗಳಿಗೆ ವಿವಿಧ ವಿಭಾಗದಲ್ಲಿಯೇ ಪ್ರಶಸ್ತಿಯನ್ನ ಕೊಡಲಾಗುತ್ತದೆ. ಆ ರೀತಿ ಕನ್ನಡದ ಟಗರು ಪಲ್ಯದ ಚಿತ್ರದಲ್ಲಿ ನಟಿಸಿರೋ ನಟಿ ಅಮೃತಾ ಪ್ರೇಮ್, ಅತ್ಯುತ್ತಮ ಡೆಬ್ಯು ಪ್ರಶಸ್ತಿ ಪಡೆದುಕೊಂಡಿದ್ದಾರೆ.

ಕಿರುಚಿತ್ರ, ಧಾರಾವಾಹಿ, ರಿಯಾಲಿಟಿ ಶೋ ಅಂತಿದ್ದ ಸ್ಟೈಲ್ ಗುರು ರಕ್ಷಿತ್ ನಾಯಕನಾಗಿ ಇಂಡಸ್ಟ್ರಿಗೆ ಮೊದಲ ಹೆಜ್ಜೆ ಇಡುತ್ತಿದ್ದಾರೆ. ಇವರ ಚೊಚ್ಚಲ ಸಿನಿಮಾಗೆ 'ಆಕಾಶ್', 'ಅರಸು' ಅಂತಹ ಬ್ಲಾಕ್ ಬಸ್ಟರ್ ಸಿನಿಮಾಗಳನ್ನು ನೀಡಿರುವ ಮಹೇಶ್ ಬಾಬು ಆಕ್ಷನ್ ಕಟ್ ಹೇಳುತ್ತಿದ್ದಾರೆ.

ಕನ್ನಡ ಚಿತ್ರರಂಗಕ್ಕೆ ಸದಭಿರುಚಿಯ ಸಿನಿಮಾ ಕೊಡಬೇಕು ಎಂಬ ಉದ್ದೇಶದಿಂದ ಎಂಎಂಎಂ ಪಿಕ್ಚರ್ಸ್ ಹಾಗೂ ಎ ಕ್ಲಾಸ್ ಸಿನಿ ಫಿಲ್ಮಂಸ್ ಜಂಟಿಯಾಗಿ ಈ ಚಿತ್ರವನ್ನು ನಿರ್ಮಾಣ ಮಾಡುತ್ತಿದೆ. ಈ ನಿರ್ಮಾಣ ಸಂಸ್ಥೆಯಡಿ ಅನುರಾಗ್ ಆರ್ ಹಾಗೂ ಮಿಥುನ್ ಕೆ.ಎಸ್ ಸೇರಿ ಚಿತ್ರವನ್ನು ನಿರ್ಮಾಣ ಮಾಡುತ್ತಿದ್ದಾರೆ. ಅನೂಪ್ ಸೀಳಿನ್ ಸಂಗೀತ ನಿರ್ದೇಶನ ಮಾಡುತ್ತಿದ್ದರೆ, ಸತ್ಯ ಅವರು ಛಾಯಾಗ್ರಹಣ ನಿರ್ವಹಿಸಲಿದ್ದಾರೆ. ಸತೀಶ್ ಚಂದ್ರಯ್ಯ ಅವರ ಸಂಕಲನ ಈ ಚಿತ್ರಕ್ಕಿರಲಿದೆ. ನಾಯಕ ಸ್ಟೈಲ್ ಗುರು ರಕ್ಷಿತ್ ಕಥೆ ಬರೆದಿದ್ದು, ವಿಜಯ್ ಈಶ್ವರ್ ಸಂಭಾಷಣೆ ಒದಗಿಸಿದ್ದಾರೆ. ಸದ್ಯ ಚಿತ್ರದ ಶೂಟಿಂಗ್ ಭರದಿಂದ ಸಾಗುತ್ತಿದೆ.

# ಬುದ್ಧಿವಂತನ ಎಂಟ್ರಿಗೆ ಮುಹೂರ್ತ ಫಿಕ್ಸ್ ಅಕ್ಟೋಬರ್‌ನಲ್ಲಿ ಬರಲಿದೆ ಯುಐ ಸಿನಿಮಾ

ವರಮಹಾಲಕ್ಷ್ಮಿ ಹಬ್ಬದಂದು ಉಪೇಂದ್ರ ಫ್ಯಾನ್ಸ್‌ಗೆ ಸಿಹಿಸುದ್ದಿ ಸಿಕ್ಕಿದೆ. ರಿಯಲ್ ಸ್ಟಾರ್ ಉಪೇಂದ್ರ ನಟನೆಯ 'ಯುಐ' ಸಿನಿಮಾ ರಿಲೀಸ್‌ಗೆ ಮುಹೂರ್ತ ಫಿಕ್ಸ್ ಆಗಿದೆ. ಈ ಮೂಲಕ ಅಭಿಮಾನಿಗಳ ಕಾತರಕ್ಕೆ ನಟ ಉತ್ತರ ಕೊಟ್ಟಿದ್ದಾರೆ.

ಉಪೇಂದ್ರ ನಟಿಸಿ, ನಿರ್ದೇಶನ ಮಾಡುತ್ತಿರುವ ಯುಐ ಸಿನಿಮಾ ಇದೇ ಅಕ್ಟೋಬರ್‌ನಲ್ಲಿ ರಿಲೀಸ್ ಮಾಡೋದಾಗಿ ಉಪೇಂದ್ರ ಸೋಷಿಯಲ್ ಮೀಡಿಯಾದಲ್ಲಿ ಅನೌನ್ಸ್ ಮಾಡಿದ್ದಾರೆ. ಈ ವೇಳೆ, ಧ್ರುವ ಸರ್ಜಾ ನಟನೆಯ ಮಾರ್ಟಿನ್ ಸಿನಿಮಾ ಕೂಡ ರಿಲೀಸ್ ಆಗ್ತಿದೆ. ಮಾರ್ಟಿನ್ ಮುಂದೆ ಅಬ್ಬರಿಸೋಕೆ ಯುಐ ಸಿನಿಮಾ ಸಜ್ಜಾಗಿದೆ.

ಇನ್ನೂ ಟೈಟಲ್‌ನಲ್ಲೇ ವಿಭಿನ್ನತೆ ತೋರಿಸಿರುವ ನಟ ಉಪೇಂದ್ರ, ಈ ಬಾರಿ ಕಲಿಯುಗದ ಕಥೆ ಹೇಳೋಕೆ ಹೊರಟಿದ್ದಾರೆ. ಉಪೇಂದ್ರಗೆ ಜೋಡಿಯಾಗಿ ಕೊಡಗಿನ ಬೆಡಗಿ ರೀಷ್ಮಾ ನಾಣಯ್ಯ ನಟಿಸಿದ್ದಾರೆ. ಈ ಚಿತ್ರವನ್ನು ಲಹರಿ ಸಂಸ್ಥೆ ಮತ್ತು ಕೆ ಪಿ ಶ್ರೀಕಾಂತ್ ಜಂಟಿಯಾಗಿ ನಿರ್ಮಾಣ ಮಾಡಿದ್ದಾರೆ. ಈ ಚಿತ್ರಕ್ಕೆ 'ಕಾಂತಾರ' ಖ್ಯಾತಿಯ ಅಜನೀಶ್ ಲೋಕನಾಥ್ ಸಂಗೀತವಿದೆ. ಅಂದಹಾಗೆ, ಯುಐ ಸಿನಿಮಾ ಬಹುಭಾಷೆಗಳಲ್ಲಿ ರಿಲೀಸ್ ಆಗಲಿದೆ.



## ವಿಡಿಯೋ ವೈರಲ್, ಅಭಿಮಾನಿಗಳ ಮೆಚ್ಚುಗೆ
# ದ್ರಾವಿಡ್ ಪುತ್ರನ ಸಿಕ್ಸ್

**ಬೆಂಗಳೂರು:** ಭಾರತ ಕ್ರಿಕೆಟ್ ತಂಡದ ಮಾಜಿ ಕೋಚ್ ರಾಹುಲ್ ದ್ರಾವಿಡ್ ಅವರ ಮಗ ಸಮಿತ್ ದ್ರಾವಿಡ್ ಸಿಕ್ಸ್ ಬಾರಿಸಿದ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ.

ಸಮಿತ್, ಕೆಎಸ್‌ಸಿಎ ಆಯೋಜಿಸುತ್ತಿರುವ ಮಹಾರಾಜ ಟಿ20 ಕ್ರಿಕೆಟ್ ಪಂದ್ಯಗಳಲ್ಲಿ ಮೈಸೂರು ವಾರಿಯರ್ಸ್ ತಂಡದ ಪರವಾಗಿ ಆಡುತ್ತಿದ್ದಾರೆ. ಬೆಂಗಳೂರು ಬ್ಲಾಸ್ಟರ್ ವಿರುದ್ಧದ ಪಂದ್ಯದಲ್ಲಿ ಅವರು ಬಾರಿಸಿದ ಸಿಕ್ಸ್ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದ್ದು ಕ್ರಿಕೆಟ್ ಅಭಿಮಾನಿಗಳ ಮೆಚ್ಚುಗೆಗೆ ಪಾತ್ರವಾಗಿದೆ.

ವಿಡಿಯೋ ನೋಡಿದ ಎಲ್ಲರೂ ದ್ರಾವಿಡ್ ಮತ್ತು ಸಮಿತ್ ನಡುವೆ ಹೋಲಿಕೆ ಮಾಡುತ್ತಿದ್ದಾರೆ. ಸಮಿತ್ ರನ್ನು ಜೂನಿಯರ್ ರಾಹುಲ್ ದ್ರಾವಿಡ್ ಎಂದು ಅಭಿಮಾನಿಗಳು ಹೊಗಳುತ್ತಿದ್ದಾರೆ.

ಮೈಸೂರು ವಾರಿಯರ್ಸ್ ತಂಡ ದೊಡ್ಡ ಮೊತ್ತದ ರನ್ ಗಳಿಸಿದರೂ 4 ರನ್‌ಗಳಿಂದ ಸೋಲು ಕಂಡಿತು. ಪಂದ್ಯಕ್ಕೆ ಸ್ವಲ್ಪ ಹೊತ್ತು ಮಳೆಯೂ ಅಡ್ಡಿಪಡಿಸಿತು.






ಕಳೆದ ಜೂನ್ ತಿಂಗಳಲ್ಲಿ ರೋಹಿತ್ ಶರ್ಮಾ ನಾಯಕತ್ವದಲ್ಲಿ ಟಿ20 ವಿಶ್ವಕಪ್ ಗೆದ್ದ ಭಾರತ ತಂಡಕ್ಕೆ ರಾಹುಲ್ ದ್ರಾವಿಡ್ ಅವರು ಕೋಚ್ ಆಗಿ ಕಾರ್ಯನಿರ್ವಹಿಸಿದ್ದರು.

# ಧೈರ್ಯವಾಗಿರಿ, ನಿಮ್ಮ ಜೊತೆ ನಾವಿದ್ದೇವೆ
## ಸಿದ್ದರಾಮಯ್ಯ ಬೆಂಬಲಕ್ಕೆ ನಿಂತ ಹೈಕಮಾಂಡ್

**ಬೆಂಗಳೂರು:** ಮುಡಾ ಕೇಸ್‌ಗೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರಿಂದ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ವಿಚಾರಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಹೈಕಮಾಂಡ್ ಸಿಎಂ ಬೆಂಬಲಕ್ಕೆ ನಿಂತಿದೆ.

ಸಿದ್ದರಾಮಯ್ಯಗೆ ಕಾಂಗ್ರೆಸ್ ನಾಯಕರಾದ ಸುರ್ಜೇವಾಲ ಹಾಗೂ ಕೆ.ಸಿ ವೇಣುಗೋಪಾಲ್ ಕರೆ ಮಾಡಿ ಅಭಯ ನೀಡಿದ್ದಾರೆ. ನೀವು ಧೈರ್ಯಗೆಡುವ ಅಗತ್ಯವಿಲ್ಲ. ಹೈಕಮಾಂಡ್ ನಿಮ್ಮೊಂದಿಗೆ ಇರಲಿದೆ. ಇಡೀ ಪಕ್ಷ ನಿಮ್ಮೊಂದಿಗೆ ನಿಲ್ಲಲಿದೆ. ಇಡೀ ಕ್ಯಾಬಿನೆಟ್ ಶಾಸಕರೆಲ್ಲ ನಿಮ್ಮ ಪರ ನಿಲ್ಲಲಿದ್ದಾರೆ. ಧೈರ್ಯದಿಂದ ಕಾನೂನು ಹೋರಾಟ ನಡೆಸಿ ಎಂದು ಸಿಎಂಗೆ ಧೈರ್ಯ ತುಂಬಿದ್ದಾರೆ.

**ಕೆಪಿಸಿಸಿಗೆ ಎಐಸಿಸಿ ಸೂಚನೆ:** ರಾಜ್ಯಪಾಲರು, ಕೇಂದ್ರದ ವಿರುದ್ಧ ಹೋರಾಟಕ್ಕೆ ಸಜ್ಜಾಗಲು ಎಐಸಿಸಿ ಪ್ರತಿಯೊಬ್ಬ ಸಚಿವರು, ಶಾಸಕರು ಹೇಳಿಕೆ ನೀಡಬೇಕೆಂದು ನಿರ್ದೇಶನ ನೀಡಿದೆ. ಸಿದ್ದರಾಮಯ್ಯ ಬೆನ್ನಿಗೆ ನಿಲ್ಲಬೇಕು. ಕಾನೂನು ಹೋರಾಟ ಮಾಡೋಣ ಎಂದು ಹೇಳುವ ಮೂಲಕ ನಾಯಕತ್ವ ಬದಲಾವಣೆಗೆ ಎಐಸಿಸಿ ತಯಾರಿಲ್ಲ ಎಂದು ಸಂದೇಶವನ್ನು ರವಾನಿಸಿದೆ.



**ಪ್ರಾಸಿಕ್ಯೂಷನ್‌ಗೆ ಅನುಮತಿ:** ಕೇಸ್‌ಗೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರಿಂದ ಅನುಮತಿ ದೊರೆತಿದೆ. ಅಬ್ರಹಾಂ ಎಂಬವರು ನೀಡಿದ್ದ ಖಾಸಗಿ ದೂರಿನ ಆಧಾರದಲ್ಲಿ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರು ಅನುಮತಿ ನೀಡಿದ್ದಾರೆ. ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ಪತ್ರವನ್ನು ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ರಾಜ್ಯಪಾಲರು ರವಾನಿಸಿದ್ದಾರೆ.

ಸಿಎಂ ಕುಟುಂಬದ ಪ್ರಭಾವದ ಎರಡು ಅಂಶಗಳನ್ನು ರಾಜ್ಯಪಾಲರು ಉಲ್ಲೇಖಿಸಿದ್ದಾರೆ. ಸಿದ್ದರಾಮಯ್ಯ ಪತ್ನಿ ಪಾರ್ವತಿ, ಪುತ್ರ ಯತೀಂದ್ರ ಸಿದ್ದರಾಮಯ್ಯ ಪ್ರಭಾವದ ಬಗ್ಗೆ ಉಲ್ಲೇಖವಾಗಿದೆ. ಸಿದ್ದರಾಮಯ್ಯ ಸಿಎಂ ಆಗುವ ತನಕ ಪಾರ್ವತಿ ಕಾದು, ಆ ಬಳಿಕ ಅರ್ಜಿ ಹಾಕಿದ್ದಾರೆ. 2010 ರಲ್ಲಿ ಪಾರ್ವತಿ ಜಮೀನು ಮಾಲೀಕರಾದರೂ ಪರಿಹಾರಕ್ಕೆ ಅರ್ಜಿ ಹಾಕಲು 4 ವರ್ಷ ಕಾಯುತ್ತಾರೆ. ಸಿದ್ದರಾಮಯ್ಯ ಸಿಎಂ ಆದ್ಮೇಲೆ 40:60 ಸೈಟ್ ಪರಿಹಾರ ಅನುಪಾತ, 50:50 ಆಯ್ತು. ಪಾಲಿಸಿ ಬದಲಾವಣೆಗೆ ಆಗಿನ ಸಿದ್ದರಾಮಯ್ಯ ಕ್ಯಾಬಿನೆಟ್ ಅನುಮತಿ ನೀಡಿತ್ತು. ಸಿದ್ದರಾಮಯ್ಯ ಪತ್ನಿ ಕೊಟ್ಟ ಅರ್ಜಿಯ ಆಧಾರದ ಮೇಲೆ ಪಾಲಿಸಿ ಬದಲಾವಣೆ ಮಾಡಿದ್ರು. ಆ ನಂತರ ಪರಿಹಾರ ನೀಡುವ ಸಂಬಂಧ ನಡೆದ ಮುಡಾ ಸಭೆಯಲ್ಲಿ ಶಾಸಕರಾಗಿದ್ದ ಯತೀಂದ್ರ ಇದ್ದರು ಎಂದು ಪ್ರಭಾವದ ಬಗ್ಗೆ ಉಲ್ಲೇಖಿಸಲಾಗಿದೆ.

# ಭಾರತಕ್ಕೆ ಮರಳಿದ ವಿನೇಶ್ ಫೋಗಟ್‌ಗೆ ಅದ್ದೂರಿ ಸ್ವಾಗತ



ಭಾರತದ ಸ್ಟಾರ್ ರೆಸ್ಲರ್ ವಿನೇಶ್ ಫೋಗಟ್ ಭಾರತಕ್ಕೆ ವಾಪಸ್ ಆಗಿದ್ದಾರೆ. ದೆಹಲಿಯ ವಿಮಾನ ನಿಲ್ದಾಣದಲ್ಲಿ ಫೋಗಟ್‌ಗೆ ಅಭಿಮಾನಿಗಳಿಂದ ಅದ್ದೂರಿ ಸ್ವಾಗತ ಸಿಕ್ಕಿದೆ.

ಅಭಿಮಾನಿಗಳನ್ನು ನೋಡಿ ಫೋಗಟ್ ಭಾವೋದ್ವೇಗಕ್ಕೆ ಒಳಗಾದರು. ಫೋಗಟ್ ಕಣ್ಣಲ್ಲಿ ನೀರು ಉಕ್ಕಿತ್ತು. ಕಾಂಗ್ರೆಸ್ ಸಂಸದ ದೀಪಿಂದರ್ ಹೂಡಾ, ಕುಸ್ತಿ ಪಟುಗಳಾದ ಸಾಕ್ಷಿ ಮಲಿಕ್, ಬಜರಂಗ್ ಪೂನಿಯಾ ಸಂತೈಸುವ ಕೆಲಸ ಮಾಡಿದರು. ಬಳಿಕ ತೆರೆದ ವಾಹನದಲ್ಲಿ ತಮ್ಮ ಸ್ವಗ್ರಾಮಕ್ಕೆ ತೆರಳಿದರು.

ವಿನೇಶ್ ಫೋಗಟ್ ಬೆಂಬಲಕ್ಕೆ ಭಾರತದ ಕುಸ್ತಿ ಫೆಡರೇಷನ್ ನಿಲ್ಲಲಿಲ್ಲ ಎಂದು ಫೋಗಟ್ ಪತಿ ಸೋಮ್‌ವೀರ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಭಾರತೀಯ ಕುಸ್ತಿಪಟು ವಿನೇಶ್ ಫೋಗಟ್ ಅವರು ಸಲ್ಲಿಸಿರುವ ಮೇಲ್ಮನವಿ ಅರ್ಜಿಯನ್ನು ಕ್ರೀಡಾ ಮಧ್ಯಸ್ಥಿಕೆ ನ್ಯಾಯ ಮಂಡಳಿ ವಜಾಗೊಳಿಸಿಸಿತ್ತು. ನಿಗದಿಗಿಂತ 100 ಗ್ರಾಂ ಅಧಿಕ ತೂಕ ಹೊಂದಿದ್ದಕ್ಕೆ ಫೋಗಟ್ ಅವರನ್ನು ಪ್ಯಾರಿಸ್ ಒಲಿಂಪಿಕ್ಸ್ ಮಹಿಳೆಯರ ಕುಸ್ತಿ ಸ್ಪರ್ಧೆಯ 50 ಕೆ.ಜಿ. ವಿಭಾಗದ ಫೈನಲ್‌ನಿಂದ ಅನರ್ಹಗೊಳಿಸಲಾಗಿತ್ತು.ಕ್ರೀಡಾಕೂಟದ ಸಂದರ್ಭದಲ್ಲಿ ವಿವಾದ ಪರಿಹಾರಕ್ಕಾಗಿ ವಿಶೇಷವಾಗಿ ಸ್ಥಾಪಿಸಲಾಗಿರುವ ಸಿಎಎಸ್‌ನ ತಾತ್ಕಾಲಿಕ ವಿಭಾಗಕ್ಕೆ ತಮ್ಮ ವಿರುದ್ಧದ ಕ್ರಮ ಪ್ರಶ್ನಿಸಿ ವಿನೇಶ್ ಆ.9 ರಂದು ಮೇಲ್ಮನವಿ ಸಲ್ಲಿಸಿದ್ದರು.

ಫೈನಲ್ ಪಂದ್ಯದ ಮುನ್ನಾದಿನ ನಾನು ಮೂರು ಪಂದ್ಯವನ್ನು ಆಡಿದ್ದೇನೆ. ಆ ದಿನ ನಿಗದಿತ 50 ಕೆಜಿ ತೂಕದ ಮಿತಿಯಲ್ಲಿ ಇದ್ದ ಕಾರಣ ಜಂಟಿಯಾಗಿ ಬೆಳ್ಳಿ ಪದಕದ ಗೌರವ ನೀಡಬೇಕೆಂದು ಮನವಿ ಮಾಡಿದ್ದರು. ವಿನೇಶ್ ಫೋಗಟ್ ಪರವಾಗಿ ಖ್ಯಾತ ವಕೀಲ ಹರೀಶ್ ಸಾಳ್ವೆ ಮತ್ತು ವಿದುಷ್ಪತ್ ಸಿಂಘಾನಿಯಾ ಅವರು ಕ್ರೀಡಾ ಮಧ್ಯಸ್ಥಿಕೆ ನ್ಯಾಯಾಲಯದಲ್ಲಿ ವಾದ ಮಂಡಿಸಿದ್ದರು.

# ನೈತಿಕತೆ ಬಗ್ಗೆ ಮಾತನಾಡೋ ಸಿಎಂ ರಾಜೀನಾಮೆ ನೀಡಲಿ: ಜನಾರ್ದನ ರೆಡ್ಡಿ

**ಬೆಂಗಳೂರು:** ನೈತಿಕತೆ ಇದ್ದರೆ ಕೂಡಲೇ ರಾಜೀನಾಮೆ ಕೊಡಿ. ತನಿಖೆ ಎದುರಿಸಿ, ನ್ಯಾಯಯುತವಾಗಿ ಹೊರಗೆ ಬನ್ನಿ. ಎಂದು ಸಿಎಂ ಸಿದ್ದರಾಮಯ್ಯ ವಿರುದ್ಧ ಶಾಸಕ ಜನಾರ್ದನ ರೆಡ್ಡಿ ಹೇಳಿಕೆ ನೀಡಿದ್ದಾರೆ.



ಸಿಎಂ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್ ಅನುಮತಿ ನೀಡಿರುವ ವಿಚಾರವಾಗಿ ಬಿಜೆಪಿ ಕಚೇರಿಯಲ್ಲಿ ಮಾಧ್ಯಮಗಳ ಮುಂದೆ ಮಾತನಾಡಿದ ಅವರು, ಸಿಎಂ ಮೇಲೆ ಪ್ರಾಸಿಕ್ಯೂಷನ್ ಅನುಮತಿ ನೀಡಿದ್ದಾರೆ. ಯಾವುದೇ ಕಿಂಚಿತ್ತು ನೈತಿಕತೆ ಇದ್ದರೆ, ರಾಜೀನಾಮೆ ಕೊಡಲಿ ಎಂದರು.

ಬೆಳಗ್ಗೆ ಎದ್ದರೆ ನೈತಿಕತೆ ಬಗ್ಗೆ, ಕಾನೂನಿನ ಬಗ್ಗೆ ಮಾತಾಡೋ ಸಿದ್ದರಾಮಯ್ಯ ಈ ಕ್ಷಣಕ್ಕೆ ರಾಜೀನಾಮೆ ಕೊಡಬೇಕಿತ್ತು. ಅವರು ಮಾಡಿರುವ ತಪ್ಪುಗಳನ್ನು ಮರೆಮಾಚಿದ್ದಾರೆ. ನಾನು ತಪ್ಪೇ ಮಾಡಿಲ್ಲ ಅನ್ನುವುದು ನಾಚಿಕೆಗೇಡಿನ ಸಂಗತಿ ಎಂದು ಟೀಕಿಸಿದರು.

ಯಡಿಯೂರಪ್ಪ, ನನ್ನ ಮೇಲೆ ಪ್ರಾಸಿಕ್ಯೂಷನ್ ಬಿಡಿ. ಲೋಕಾಯುಕ್ತದಲ್ಲಿ ನಮ್ಮ ಹೆಸರನ್ನ ದಾಖಲಿಸಿದ ಕೂಡಲೇ, ಯಡಿಯೂರಪ್ಪ ಅವರು ನಮ್ಮನ್ನು ಕರೆದಿದ್ದರು. ನಾವು ಮುಂದುವರೆಯೋದು ಸರಿಯಲ್ಲ ಎಂದು ರಾಜಭವನಕ್ಕೆ ತೆರಳಿ ರಾಜೀನಾಮೆ ನೀಡಿದ್ದೆವು. ಅದೆಲ್ಲಾ ಇತಿಹಾಸ ಎಂದರು.

ಅಹಿಂದ ಅಂತ ಹೇಳೋ ವ್ಯಕ್ತಿ. ಅಧಿಕಾರದ ಆಸೆಗೆ ಮುಂದುವರೆದಿದ್ದಾರೆ. ಬಳ್ಳಾರಿ ಪಾದಯಾತ್ರೆಗೆ ಬಂದ ಈ ಮಹಾನುಭಾವ ಪಾದಯಾತ್ರೆಗೆ ಬಿಡುತಿಲ್ಲ ಎಂದು ಆರೋಪ ಮಾಡಿದ್ದರು. ರಿಪಬ್ಲಿಕನ್ ಆಫ್ ಬಳ್ಳಾರಿ ಅಂದರು. ಜನಾರ್ದನ ರೆಡ್ಡಿ ಗೋಡೆ ಕಾಂಪೌಂಡ್ ಬಗ್ಗೆ ಮಾತಾಡಿದರು. ಕೇವಲ ಪಾದಯಾತ್ರೆಗೆ ಬಂದು ನಮ್ಮಮೇಲೆ ಆರೋಪ ಮಾಡಿದ್ದರು. ನಮ್ಮನ್ನು ಜೈಲಿಗೆ ಹಾಕಬೇಕು ಎಂದು ಹೇಳಿದ್ದರು.

ನ್ಯಾಯಯುತವಾಗಿ ಹಣ ದುಡಿದಿದ್ದು ಜನಾರ್ದನ ರೆಡ್ಡಿ. ನಿಮ್ಮಹಾಗೆ ಅಕ್ರಮವಾಗಿ ಹಣ ದುಡಿದಿಲ್ಲ. ಸಭೆಯಲ್ಲಿ ಆಸೆ ಆಕಾಂಕ್ಷೆ ಇಲ್ಲ. ಎರಡು ಮನೆ ಮಾರಿದ್ದೀನಿ, ಒಂದು ಮನೆ ಕಟ್ಟಿಕೊಳ್ಳುತ್ತಿದ್ದೇನೆ ಎಂದು ಹೇಳಿದ್ದೀರಿ. 14 ಸೈಟು ಪಡೆದಿದ್ದೀರಿ. 34 ಕೋಟಿ ರೂ. ಹಣ ಕೊಟ್ಟರೆ ಬಿಟ್ಟು ಬಿಡುತ್ತೇನೆ ಅಂದ್ರಿ. ಬಿಜೆಪಿಯವರು ಇಲ್ಲ ಸಲ್ಲದ ಆರೋಪ ಮಾಡ್ತಿದ್ದಾರೆ ಎಂದು ಹೇಳುತ್ತೀರಿ. ಇನ್ನೊಂದು ಕಡೆ 64 ಕೋಟಿ ರೂ. ಹಣ ಕೇಳುತ್ತೀರಿ ಎಂದು ಕಿಡಿಕಾರಿದರು.

ನಿಮಗೆ ಈಗಾಗಲೇ ವಯಸ್ಸಾಗಿದೆ. ಈ ಇಳಿವಯಸ್ಸಿನಲ್ಲಿ ಈ ರೀತಿ ಮಾಡೋದು ಸರಿಯಲ್ಲ. ಹಿಂದೆ ನಮಗೆ ತನಿಕೆ ಮಾಡೋಕೆ ಆಗಲ್ಲ, ರಾಜೀನಾಮೆ ಕೊಡಿ ಅಂತ ಹೇಳಿದ್ದೀರಿ. ಈಗ ಯಾವ ಮುಖ ಹೊತ್ತು ಮಾತಾಡುತ್ತಿದ್ದೀರಿ ಡಿಕೆಶಿ ಅವರು ಇವತ್ತು ಮಾತನಾಡುತ್ತಿದ್ದಾರೆ ಎಂದರು.

ಕೆಪಿಸಿಸಿ ಅಧ್ಯಕ್ಷರಾಗಿ ಡಿಕೆಶಿ, ಎಐಸಿಸಿ ಅಧ್ಯಕ್ಷ ಖರ್ಗೆ, ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಸಿದ್ದರಾಮಯ್ಯ ಅವರ ರಾಜೀನಾಮೆ ಪಡೆಯಬೇಕು. ನೈತಿಕತೆ ಇದ್ದರೆ ರಾಜ್ಯದ ಸಿಎಂ ಆಗಿ ಮುಂದುವರೆಯಲು ಸಾಧ್ಯವಿಲ್ಲ. ಕೂಡಲೇ ರಾಜೀನಾಮೆ ಕೊಟ್ಟು ಹೊರಗೆ ಬನ್ನಿ ಎಂದು ಆಗ್ರಹಿಸಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com